ಸಂಪುಟ : 13 Volume ಸಂಚಿಕೆ : 202 Issue ಪುಟಗಳು : 08 Pages ಬುಧವಾರ 24 ಸೆಪ್ಟೆಂಬರ್ 2025 ₹2 RNINO:KARKAN/2011/48371 BDR/054/2026-20274 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

" ಮನವೇ ದೇಗುಲ ಮತ್ತೆ ಇಳೆಯೇ ಗುಡಿಯೆಂದೆ , ಬಾಳನು ಆದಿನ್ನಾವ ದೇವನಲ್ಲೆಂದೆ
-ವಿ.ಕೃ.ಗೋಕಾಕ್ .

ಕಲ್ಯಾಣ ಪಥ ರಸ್ತೆಗೆ ಅಡಿಗಲ್ಲು 2 | ಮಕ್ಕಳಿಗೆ ತಂತ್ರಜ್ಞಾನದ ಅರಿವು 4 | ಮಾನವಿಯತೆ ಮೆರೆದ ವೈದ್ಯ 8

# ಜನಸಂದಣಿ ನಿಯಂತ್ರಣ ಮಸೂದೆ ಪರಿಶೀಲನೆಗೆ 11 ಸದಸ್ಯರ ಸಮಿತಿ



ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಸೆ.23:ಕರ್ನಾಟಕವಿಧಾನಸಭೆಸ್ಪೀಕರ್ ಯು ಟಿ ಖಾದರ್ 'ಕರ್ನಾಟಕ ಜನಸಂದಣಿ ನಿಯಂತ್ರಣ (ಕಾರ್ಯಕ್ರಮಗಳು ಮತ್ತು ಸಭೆ ನಡೆಯುವ ಸ್ಥಳಗಳಲ್ಲಿ ಜನಸಂದಣಿಯನ್ನು ನಿರ್ವಹಿಸುವುದು) ಮಸೂದೆ, 2025' ನ್ನು ಪರಿಶೀಲಿಸಲು ಗೃಹ ಸಚಿವ ಜಿ ಪರಮೇಶ್ವರ ನೇತೃತ್ವದಲ್ಲಿ ಸದನದ 11 ಸದಸ್ಯರ ಪರಿಶೀಲನಾ ಸಮಿತಿಯನ್ನು ರಚಿಸಿದ್ದಾರೆ. ಕಳೆದ ತಿಂಗಳು ನಡೆದ ವಿಧಾನಮಂಡಲ ಅಧಿವೇಶನದಲ್ಲಿ, ಪ್ರಸ್ತಾವಿತ ಶಾಸನ ಪ್ರತಿಭಟನೆಗಳನ್ನು ಕಡಿಮೆ ಮಾಡಬಹುದು ಮತ್ತು ಸಾಂಸ್ಕೃತಿಕ ಮತ್ತು ಧಾರ್ಮಿಕ ಕಾರ್ಯಕ್ರಮಗಳ ಮೇಲೆ ಪರಿಣಾಮ ಬೀರಬಹುದು ಎಂಬ ಕಳವಳ ವ್ಯಕ್ತವಾಗತೊಡಗಿತ್ತು. ವಿರೋಧ ಪಕ್ಷಗಳು ಕರ್ನಾಟಕದ ಕಾಂಗ್ರೆಸ್ ಸರ್ಕಾರವನ್ನು ಮಸೂದೆಯನ್ನು ವಿವರವಾದ ಚರ್ಚೆ ಮತ್ತು ಪರಿಶೀಲನೆಗಾಗಿ ಸದನಸಮಿತಿಗೆಉಲ್ಲೇಖಿಸುವಂತೆಒತ್ತಾಯಿಸಿದ್ದವು. ಜೂನ್ 4 ರಂದು ಚಿನ್ನಸ್ವಾಮಿ ಕ್ರೀಡಾಂಗಣದಹೊರಗೆನಡೆದಕಾಲ್ತುಳಿತದಲ್ಲಿ 11 ಜನರುಸಾವನ್ನಪ್ಪಿದನಂತರ ಸರ್ಕಾರಈಮಸೂದೆಯನ್ನು ಪರಿಚಯಿಸಿದೆ. ದಂಡವಿಧಿಸುವನಿಬಂಧನೆಗಳನ್ನು ಹೊಂದಿರುವ ಮಸೂದೆಯು ಜನಸಂದಣಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವುದು ಮತ್ತು ಕಾರ್ಯಕ್ರಮಗಳು ಮತ್ತು ಸಮಾರಂಭಗಳಲ್ಲಿ ಸಾಮೂಹಿಕ ಸಭೆಗಳನ್ನು ನಿರ್ವಹಿಸುವುದು ಮತ್ತು ಕಾನೂನುಬಾಹಿರ ಸಭೆಗಳನ್ನು ತಡೆಯುವ ಗುರಿಯನ್ನು ಹೊಂದಿದೆ.ಸದನದ ನಿರ್ಣಯದ ಪ್ರಕಾರ, ಸ್ಪೀಕರ್ ಅವರು ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ವ್ಯವಹಾರ ನಡವಳಿಕೆ ನಿಯಮಗಳ ನಿಯಮ 247 ರ ಅಡಿಯಲ್ಲಿ ಮಸೂದೆಯನ್ನು ಪರಿಶೀಲಿಸಿ ವರದಿ ಸಲ್ಲಿಸಲು ವಿಧಾನಸಭೆಯ ಸದಸ್ಯರನ್ನು ಒಳಗೊಂಡ ಪರಿಶೀಲನಾ ಸಮಿತಿಯನ್ನು ರಚಿಸಿದ್ದಾರೆ ಎಂದು ಸೆಪ್ಟೆಂಬರ್ 19 ರಂದು ಮಾಧ್ಯಮಗಳಿಗೆ ಬಿಡುಗಡೆಯಾದ ವಿಧಾನಸಭೆ ಸಚಿವಾಲಯದ ಟಿಪ್ಪಣಿ ತಿಳಿಸಿದೆ.ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್, ಶಾಸಕರು - ರಿಜ್ವಾನ್ ಅರ್ಷದ್, ಶ್ರೀನಿವಾಸಯ್ಯ ಎನ್, ರವಿಶಂಕರ್ ಡಿ, ಶ್ರೀನಿವಾಸ್ ವಿ ಮಾನೆ, ಪ್ರಕಾಶ್ ಕೆ ಕೋಳಿವಾಡ್, ಎಚ್ ಡಿ ತಮ್ಮಯ್ಯ, ವಿ ಸುನಿಲ್ ಕುಮಾರ್, ಎಸ್ ಆರ್ ವಿಶ್ವನಾಥ್ ಮತ್ತು ಜಿ ಡಿ ಹರೀಶ್ ಗೌಡ ಅವರನ್ನು ಸಮಿತಿ ಒಳಗೊಂಡಿದೆ.ಜನಸಂದಣಿಯನ್ನು ನಿಯಂತ್ರಿಸುವ ಉದ್ದೇಶದಿಂದ ಸರ್ಕಾರ ಈ ಮಸೂದೆಯನ್ನು ತಂದಿದೆ ಎಂದು ಹೇಳಿದ್ದ ಗೃಹ ಸಚಿವ ಡಾ.ಜಿ ಪರಮೇಶ್ವರ್, ಸಭೆಗಳಿಗೆ ಅಗತ್ಯವಾದ ಅನುಮತಿಗಳನ್ನು ಸಹ ಈ ಮಸೂದೆ ಎತ್ತಿ ತೋರಿಸುತ್ತದೆ ಮತ್ತು ಯಾವುದೇ ಅಹಿತಕರ ಘಟನೆಗಳುನಡೆದಲ್ಲಿಕಾರ್ಯಕ್ರಮ ಆಯೋಜಕರನ್ನು ಹೊಣೆಗಾರರನ್ನಾಗಿಮಾಡಲುಅವಕಾಶನೀಡುತ್ತದೆಎಂದು ತಿಳಿಸಿದ್ದರು.7,000 ಕ್ಕಿಂತ ಕಡಿಮೆ ಜನರು ಸೇರುವ ಯಾವುದೇ ಸಾಮೂಹಿಕ ಸಭೆ ಸಮಾರಂಭಕ್ಕೆ ವ್ಯಾಪ್ತಿಯಲ್ಲಿರುವ ಪೊಲೀಸ್ ಠಾಣೆಯಿಂದ ಅನುಮತಿ ಪಡೆಯಬೇಕಾಗುತ್ತದೆ, ಆದರೆ 7,000 ಕ್ಕಿಂತ ಹೆಚ್ಚು ಮತ್ತು 50,000 ಕ್ಕಿಂತ ಕಡಿಮೆ ಜನರು ಸೇರುವ ಕಾರ್ಯಕ್ರಮಗಳಿಗೆ ಡಿವೈಎಸ್ಪಿ ಅಥವಾ ಎಸಿಪಿ (ಬೆಂಗಳೂರಿನಲ್ಲಿ) ಅನುಮತಿ ಪಡೆಯಬೇಕಾಗುತ್ತದೆ.50,000 ಕ್ಕಿಂತ ಹೆಚ್ಚು ಜನರುಸೇರುವನಿರೀಕ್ಷೆಯಿರುವಕಾರ್ಯಕ್ರಮಗಳಿಗೆಎಸ್ಪಿಅಥವಾ ಆಯುಕ್ತರ ಅನುಮತಿ ಪಡೆಯಬೇಕಾಗುತ್ತದೆ. ಮಸೂದೆಯ ಪ್ರಕಾರ, ಆಯೋಜಕರು ಉದ್ದೇಶಿತ ಕಾರ್ಯಕ್ರಮಕ್ಕೆ 10 ದಿನಗಳ ಮೊದಲು ಅನುಮತಿಗಾಗಿ ಅರ್ಜಿ ಸಲ್ಲಿಸಬೇಕು ಮತ್ತು ಆಯೋಜಕರು 1 ಕೋಟಿ ರೂ.ಗಳ ಪರಿಹಾರ ಬಾಂಡ್ ಅನ್ನು ಕಾರ್ಯಗತಗೊಳಿಸಲು ಸಹ ಇದು ಅವಕಾಶ ನೀಡುತ್ತದೆ.50,000 ಕ್ಕಿಂತ ಹೆಚ್ಚು ಜನರು ಸೇರುವ ಕಾರ್ಯಕ್ರಮಗಳಿಗೆ ಪರಿಹಾರ ಬಾಂಡ್ ಅನ್ವಯಿಸುತ್ತದೆ.ಯಾವುದೇ ಉಲ್ಲಂಘನೆ ಅಥವಾ ಯಾವುದೇ ಅಹಿತಕರ ಘಟನೆ ಅಥವಾ ತಪ್ಪು ಮಾಹಿತಿ ನೀಡಿದರೆ, ದಂಡ ವಿಧಿಸುವ ನಿಬಂಧನೆಗಳಿವೆ ಎಂದುಗೃಹಸಚಿವರುಹೇಳಿದ್ದರು.ಅನುಮತಿಯಿಲ್ಲದೆಕಾರ್ಯಕ್ರಮಗಳನ್ನು ಆಯೋಜಿಸುವವರು ಏಳು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು 1 ಕೋಟಿ ರೂ.ಗಳ ದಂಡವನ್ನು ಎದುರಿಸಬೇಕಾಗುತ್ತದೆ. ವಿಪತ್ತಿಗೆ ಕಾರಣವಾಗುವ ಯಾವುದೇ ಘಟನೆಯಲ್ಲಿ ಗಾಯಗಳಾದರೆ ಏಳು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ಸಾವುನೋವುಗಳಿಗೆ 10 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ ಜೀವಾವಧಿ ಶಿಕ್ಷೆ ವಿಧಿಸಬಹುದಾಗಿದೆ.ಒಂದು ಕಾರ್ಯಕ್ರಮದ ಸಮಯದಲ್ಲಿ ಗಲಭೆ ಅಥವಾ ಶಾಂತಿ ಭಂಗ ಉಂಟುಮಾಡಿದರೆ ಮೂರು ವರ್ಷಗಳ ಜೈಲು ಶಿಕ್ಷೆ ಮತ್ತು 50,000 ರೂ. ದಂಡ ವಿಧಿಸಬಹುದಾಗಿದೆ.

ಈಮಸೂದೆನಿಬಂಧನೆಗಳುಖಾಸಗಿಆವರಣದಲ್ಲಿನಡೆಯುವಅಥವಾನಡೆಸುವಕುಟುಂಬಕಾರ್ಯಕ್ರಮಗಳು ಅಥವಾ ಮದುವೆ ಮುಂತಾದ ಕಾರ್ಯಕ್ರಮಗಳಿಗೆ ಅನ್ವಯಿಸುವುದಿಲ್ಲ. ಗುತ್ತಿಗೆ, ಬಾಡಿಗೆ ಅಥವಾ ಗುತ್ತಿಗೆ ಪಡೆದ ಆವರಣಗಳು ಖಾಸಗಿ ಆವರಣದ ವ್ಯಾಪ್ತಿಗೆ ಸೇರಿದೆ.ಈ ಮಸೂದೆಗೆ ಹಲವಾರು ಶಾಸಕರು ವಿರೋಧ ವ್ಯಕ್ತಪಡಿಸಿದ್ದರು. ಈ ಕಾನೂನಿನಡಿಯಲ್ಲಿ ಪೊಲೀಸರಿಗೆ ಅಧಿಕಾರ ನೀಡುವುದನ್ನು ಪ್ರತಿಭಟನಾಕಾರರ ವಿರುದ್ಧ ಮತ್ತು ಸಾರ್ವಜನಿಕ ಉದ್ದೇಶಕ್ಕಾಗಿ ಹೋರಾಡುವವರನ್ನು ಗುರಿಯಾಗಿಸಲು ಬಳಸಬಹುದು ಎಂದು ಹೇಳಿದ್ದಾರೆ. ದೇವಾಲಯ ಅಥವಾ ಧಾರ್ಮಿಕ ಜಾತ್ರೆಗಳು ಮತ್ತು ಉತ್ಸವಗಳ ಬಗ್ಗೆ ಸ್ಪಷ್ಟತೆಯ ಕೊರತೆಯನ್ನು ಅವರು ಉಲ್ಲೇಖಿಸಿದ್ದರು.ಶಾಸಕರು ಎತ್ತಿದ ಕಳವಳಗಳಿಗೆ ಉತ್ತರಿಸುತ್ತಾ, ಪರಮೇಶ್ವರ 10 ದಿನಗಳ ಅನುಮತಿ ಷರತ್ತನ್ನು ಐದಕ್ಕೆ ಇಳಿಸಲಾಗುವುದು ಎಂದು ಹೇಳಿದ್ದರು.ಧಾರ್ಮಿಕ ಕಾರ್ಯಕ್ರಮಗಳಿಗೆ ಪರಿಹಾರ ಬಾಂಡ್ ನ್ನು ಅರ್ಧಕ್ಕೆ ಇಳಿಸಲಾಗುವುದುಎಂದುಅವರುಹೇಳಿದರು. ಆದರೆ, ಇದರಿಂದಸಮಾಧಾನವಾಗದವಿರೋಧಪಕ್ಷದಶಾಸಕರು, ಮಸೂದೆಯನ್ನು ಪರಿಶೀಲನೆಗಾಗಿ ಸದನ ಸಮಿತಿಗೆ ಕಳುಹಿಸಬೇಕೆಂದು ಒತ್ತಾಯಿಸಿದ್ದರು.

## ನಾಲ್ವರು ಕಾರ್ಮಿಕರು ಅಸ್ವಸ್ಥ
### ಕೆಮಿಕಲ್ ಕಾರ್ಖಾನೆ ವಿರುದ್ಧ ಜನಾಕ್ರೋಶ

ಮಲ್ಲಮ್ಮನುಡಿ ವಾರ್ತೆ

ಹುಮನಾಬಾದ್:ಸೆ.23: ಇಲ್ಲಿನ ಹೊರವಲಯದಲ್ಲಿ ಇರುವ ಕೇಮಿಕಲ್ ಕಾರ್ಖಾನೆಗಳಲ್ಲಿ ದುಡಿಯುವ ಕಾರ್ಮಿಕರಿಗೆ ಸುರಕ್ಷತೆ ಇಲ್ಲ ಎಂಬುವುದು ಸಾಬಿತಾಗಿದೆ ಎನ್ನಲಾಗುತ್ತಿದೆ. ಇತ್ತೀಚೆಗೆ ವಿಷಾನಿಲ ಸೋರಿಕೆಯಿಂದ ನಾಲ್ಕು ಜನ ಕಾರ್ಮಿಕರು ಅಸ್ವಸ್ಥಗೊಂಡಿದ್ದು. ಅವರನ್ನು ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡದೇ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಿ ಕಾರ್ಮಿಕರ ಜೀವನದ ಜೊತೆ ಚಲ್ಲಾಟ ವಾಡುತ್ತಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬರುತ್ತಿದೆ. ಕೆಮಿಕಲ್ ಕಾರ್ಖಾನೆಗಳು ಮನಬಂದಂತೆ ನಡೆಸುವುದರೊಂದಿಗೆ ಮುಗ್ದ ಕಾರ್ಮಿಕರ ಜೀವದ ಜೊತೆಗೆ ಚಲ್ಲಾಟ ಆಡುತ್ತಿವೆ. ತಕ್ಷಣ ಈ ಬಗ್ಗೆ ತನಿಖೆ ನಡೆಸಬೇಕು ತಪ್ಪಿತಸ್ಥ ಕಾರ್ಖಾನೆಗಳ ವಿರುದ್ದ ಮುಲಾಜಿಲ್ಲದೆ ಕ್ರಮ ಜರುಗಿಸಬೇಕು ಎಂಬ ಒತ್ತಾಯ ಸಾರ್ವಜನಿಕರದ್ದಾಗಿದೆ.

## ನವವಿವಾಹಿತೆ ಕೊಲೆ : ಪತಿ ಸೇರಿ ಮೂವರ ವಿರುದ್ಧ ಪ್ರಕರಣ

ಕಲಬುರಗಿ ಸೆ.23: ಗಂಗಾನಗರದಲ್ಲಿ ಸಂಜನಾ ಗಂಡ ಸಚಿನ್ ಎಂಬ ನವವಿವಾಹಿತೆಯ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆಕೆಯ ಪತಿ ಸಚಿನ್, ಅತ್ತೆ ಇಂದ್ರಮ್ಮ, ನಾದಿನಿ ಮತ್ತಿತರರ ವಿರುದ್ಧ ರಾಘವೇಂದ್ರ ನಗರ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತ ಮಹಿಳೆಯ ತಂದೆ ನೆಲೋಗಿಯ ಶರಣಪ್ಪ ತಂದೆ ಭೈಲಪ್ಪಾ ನಾಟಿಕಾರ್ ಅವರು ದೂರು ಸಲ್ಲಿಸಿ, ತನ್ನ ಎರಡನೇ ಪುತ್ರಿ ಸಂಜನಾಳಿಗೆ ಕಳೆದ 2025ರ ಏಪ್ರಿಲ್ 18ರಂದು ಗಂಗಾನಗರದ ಸಚಿನ್‌ಗೆ ಮದುವೆ ಮಾಡಿಕೊಟ್ಟಿದ್ದು, ಮದುವೆಯ ಕಾಲಕ್ಕೆ 50 ಗ್ರಾಮ್ ಚಿನ್ನಾಭರಣಗಳು, ಒಂದು ಲಕ್ಷ ರೂ.ಗಳನ್ನು ಕೊಡಲಾಗಿತ್ತು. ಮದುವೆಯಾದ ನಂತರ ಸ್ವಲ್ಪ ದಿನಗಳವರೆಗೆ ಪುತ್ರಿಯನ್ನು ಪತಿಯ ಮನೆಯವರು ಚೆನ್ನಾಗಿ ನೋಡಿಕೊಂಡು ನಂತರ ಹೆಚ್ಚಿನ ವರದಕ್ಷಿಣೆಗಾಗಿ ಪೀಡಿಸುತ್ತಿದ್ದರು ಎಂದು ಆರೋಪಿಸಿದ್ದಾರೆ.

ಕಳೆದ ಹದಿನೈದು ದಿನಗಳ ಹಿಂದೆ ಸಂಜನಾ ತವರು ಮನೆಗೆ ಹೋಗಿದ್ದು, ಆ ಸಂದರ್ಭದಲ್ಲಿ ಹೆಚ್ಚಿನ ವರದಕ್ಷಿಣೆ ಹಾಗೂ ಹಣ ತೆಗೆದುಕೊಂಡು ಬರಲು ಪತಿಯ ಮನೆಯವರು ಕಿರುಕುಳ ಕೊಡುತ್ತಿರುವ ಕುರಿತು ಹೇಳಿದ್ದಳು. ಆಗ ತಾಯಿ ಸುಜಾತಾ ತನ್ನ ಪುತ್ರಿಯನ್ನು ಗಂಗಾನಗರದ ಅಳಿಯನ ಮನೆಗೆ ಕರೆದುಕೊಂಡು ಬಂದು ಪತಿಯ ಮನೆಯವರಿಗೆ ಕಿರುಕುಳ ಕೊಡದಂತೆ ಹೇಳಿ ಮರಳಿದ್ದಳು.

ಸೋಮವಾರ ಸಂಜೆ 6 ಗಂಟೆಗೆ ತನ್ನ ಪುತ್ರಿಯನ್ನು ಕೊಲೆ ಮಾಡಿರುವ ಸಂಗತಿ ಗೊತ್ತಾಗಿ ಗಂಗಾನಗರದ ಮನೆಗೆ ಬಂದು ನೋಡಲಾಗಿ ಹಾಲ್‌ನಲ್ಲಿ ಶವವು ಅಂಗಾತವಾಗಿ ಮಲಗಿತ್ತು. ಆಕೆಯನ್ನು ಕೊಲೆ ಮಾಡಲಾಗಿದ್ದು, ಪತಿ, ಅತ್ತೆ, ನಾದಿನಿ ಹಾಗೂ ಇತರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಕೋರಿದ್ದಾರೆ. ಈ ಕುರಿತು ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

## 3.80 ಲಕ್ಷ ರೂ ಚಿನ್ನಾಭರಣ ಕಳವು

ಮಲ್ಲಮ್ಮನುಡಿ ವಾರ್ತೆ ಕಲಬುರಗಿ,ಸೆ.23: ನಗರದ ಗಂಜ್ ಬಸ್ ನಿಲ್ದಾಣದಲ್ಲಿ ಬಸ್ ಹತ್ತುತ್ತಿದ್ದ ಮಹಿಳೆಯೊಬ್ಬರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 3.80 ರೂ.ಲಕ್ಷ ಮೌಲ್ಯದ ಚಿನ್ನಾಭರಣವನ್ನು ಕಳ್ಳರು ಕದ್ದು ಪರಾರಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಚಿಂಚೋಳಿ ತಾಲ್ಲೂಕಿನ ರಾಣಾಪುರ ತಾಂಡಾ ನಿವಾಸಿ ಸೀಮಾ ಶಾಮರಾವ್ ರಾಠೋಡ ಎಂಬುವವರು ಚಿನ್ನಾಭರಣ ಕಳೆದುಕೊಂಡವರು.ಬಸ್ ಹತ್ತುತ್ತಿದ್ದವೇಳೆ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 38 ಗ್ರಾಂ ಬಂಗಾರದ ವಿವಿಧ ಆಭರಣಗಳನ್ನು ಕದಿಯಲಾಗಿದೆ ಎಂದು ಸೀಮಾ ದೂರಿನಲ್ಲಿ ತಿಳಿಸಿದ್ದಾರೆ.ಕಲಬುರಗಿ ಚೌಕ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕುಕನೂರಿನಲ್ಲಿ ಅಪಘಾತ : ಓರ್ವನ ಸಾವು

ಮಲ್ಲಮ್ಮನುಡಿವಾರ್ತೆ ಕುಕನೂರು :ಸೆ.23: ಪಟ್ಟಣದ ಜವಾಹರ ನವೋದಯ ಶಾಲೆಯ ಹತ್ತಿರ ಭೀಕರ ರಸ್ತೆ ಅಪಘಾತವಾಗಿದ್ದು, ಓರ್ವ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ ಎಂದು ತಿಳಿದು ಬಂದಿದೆ.

ಇಂದು ಬೆಳಗ್ಗೆ 10 ಗಂಟೆಯ ಸುಮಾರಿಗೆ ರಿನ್ಯೂ ಕಂಪನಿಯ ಕೂಲಿ ಕಾರ್ಮಿಕ ತಮ್ಮ ಕೆಲಸ ಮುಗಿಸಿ ಕುಕನೂರಿನಿಂದ ಗುದ್ನೇಪ್ಪನ ಮಠದ ಕಡೆಗೆ ಹೋಗುವ ವೇಳೆ ಚಲಿಸುತ್ತಿರುವ ಟ್ರ್ಯಾಕ್ಟರ್ ನಿಂದ ಕೆಳಗೆ ಬಿದ್ದು ಸಾವನ್ನಪ್ಪಿದ್ದಾನೆ ಎಂದು ಮಾಹಿತಿ ಲಭ್ಯವಾಗಿದೆ. ಮೃತ ವ್ಯಕ್ತಿ ಪಶ್ಚಿಮ ಬಂಗಾಳದ ಕಲ್ಕತ್ತಾ ಮೂಲದವನು ಪಾರಿತೋಷ್ ಬಸಕ್ (ವಯಸ್ಸು 40 ವರ್ಷ) ಎಂದು ಗುರುತಿಸಲಾಗಿದೆ.ಮೃತನು ಕಳೆದ ಎರಡು ವರ್ಷಗಳಿಂದ ಪಟ್ಟಣದ ಗುದ್ನೇಪ್ಪನ ಮಠದಲ್ಲಿರುವ ರಿನ್ಯೂ ಕಂಪನಿಯ ಮೆಟಿರೀಯಲ್ಸ್ ಸ್ಟೋರ್‌ನಲ್ಲಿ ಹೈಟೆಸನ್ ಪವರ್ ಟವರ್ ಕೂಲಿ ಕಾರ್ಮಿಕನಾಗಿದ್ದನು ಎನ್ನಲಾಗಿದೆ. ಈ ಪ್ರಕರಣವೂ ಕುಕನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಏಕರೂಪ ದರ ನಿಗದಿಗೆ ತಡೆ

ಮಲ್ಲಮ್ಮನುಡಿ ವಾರ್ತೆ ಬೆಂಗಳೂರು:ಸೆ.23: ರಾಜ್ಯದ ಎಲ್ಲಾ ಚಿತ್ರಮಂದಿರಗಳಲ್ಲೂ ಒಂದು ಟಿಕೆಟ್‌ನ ಬೆಲೆ 200 ರೂಪಾಯಿಗೆ ನಿಗದಿಪಡಿಸಿ ಸಿದ್ದರಾಮಯ್ಯ ಸರ್ಕಾರ ಹೊರಡಿಸಿದ್ದ ಆದೇಶಕ್ಕೆ ಕರ್ನಾಟಕ ಹೈಕೋರ್ಟ್ ತಡೆ ನೀಡಿದೆ.ಸರ್ಕಾರದ ದರ ನಿಗದಿ ಪ್ರಶ್ನಿಸಿ ಮಲ್ಟಿಪ್ಲೆಕ್ಸ್ ಹಾಗೂ ಹೊಂಬಾಳೆ ಫಿಲ್ಮ್ಸ್ ಹೈಕೋರ್ಟ್ ಮೊರೆ ಹೋಗಿತ್ತು. ಸರ್ಕಾರದ ಈ ಆದೇಶಕ್ಕೆ ಹೈಕೋರ್ಟ್ ಮಧ್ಯಂತರ ತಡೆಯಾಜ್ಞೆ ಕೊಟ್ಟಿದೆ.ಪರಭಾಷಾ ಸಿನಿಮಾಗಳ ಹಾವಳಿ, ಮಿತಿ ಮೀರಿದ ಟಿಕೆಟ್ ದರದ ವಿರುದ್ಧ ಇಡೀ ಇಂಡಸ್ಟ್ರಿ ಏಕರೂಪ ಟಿಕೆಟ್ ದರ ನಿಗದಿ ಮಾಡಬೇಕು ಎಂದು ದಶಕಗಳಿಂದ ಹೋರಾಟ ನಡೆದಿತ್ತು. ಹತ್ತಾರು ಬಾರಿ ಈ ವಿಚಾರವಾಗಿ ಚರ್ಚೆ, ವಾದ- ಪ್ರತಿವಾದಗಳು ನಡೆದಿದ್ದವು. ಇದನ್ನು ಗಂಭೀರವಾಗಿ ಪರಿಗಣಿಸಿದ್ದ ರಾಜ್ಯ ಸರ್ಕಾರ ಏಕರೂಪದ ಟಿಕೆಟ್ ದರ ನಿಗದಿ ಮಾಡುತ್ತು.


200 ರೂಪಾಯಿ ನಿಗದಿ ವಿರುದ್ಧ ವಿರೋಧ ಕೂಡ ವ್ಯಕ್ತವಾಗಿತ್ತು.

## ಬಾಜೋಳಗಾದಲ್ಲಿ ಮಳೆಯಿಂದಾದ ಹಾನಿ ಪರಿಶೀಲನೆ



ಮಲ್ಲಮ್ಮನುಡಿ ವಾರ್ತೆ ಬೀದರ, ಸೆ.23: ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರಿಂದು ಭಾಲ್ಕಿ ತಾಲ್ಲೂಕಿನ ಬಾಜೋಳಗಾ ಗ್ರಾಮಕ್ಕೆ ಭೇಟಿ ನೀಡಿ ಮಳೆಯಿಂದಾದಹಾನಿಕುರಿತುಪರಿಶೀಲನೆನಡೆಸಿದರು. ಜಿಲ್ಲೆಯಾದ್ಯಂತ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗಿ ಮನೆಮಠಗಳಿಗೆಹಾನಿಯಾಗಿದ್ದು, ಜನಸಾಮಾನ್ಯರುಸಂಕಷ್ಟಅನುಭವಿಸುತ್ತಿದ್ದಾರೆ. ಜನರಸಮಸ್ಯೆಗಳನ್ನು ಆಲಿಸಿ, ತಕ್ಷಣದ ಪರಿಹಾರ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಿದರು.ಸಾರ್ವಜನಿಕರ ಜೀವ, ಆಸ್ತಿ ಹಾಗೂ ಮೂಲಭೂತ ಸೌಕರ್ಯಗಳ ರಕ್ಷಣೆಗೆ ಸರ್ಕಾರ ಬದ್ಧವಾಗಿದ್ದು, ಶೀಘ್ರದಲ್ಲೇ ಪರಿಹಾರ ಕಾರ್ಯಗಳನ್ನು ಜಾರಿಗೊಳಿಸಲಾಗುವುದು ಎಂದು ಸಚಿವರು ತಿಳಿಸಿದರು.ಈ ಸಂದರ್ಭದಲ್ಲಿ ಅಧಿಕಾರಿಗಳು, ಮುಖಂಡರು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

## ರಾಜ್ಯದಲ್ಲಿ ಸೆ.29ರವರೆಗೆ ಮಳೆ



ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಬಂಗಾಳ ಕೊಲ್ಲಿಯಲ್ಲಿವಾಯುಭಾರಕುಸಿತದಹಿನ್ನೆಲೆ ರಾಜ್ಯದಲ್ಲಿಸೆ.29ರವರೆಗೆಮಳೆಯಾಗುವ ಸಾಧ್ಯತೆಯಿದೆಎಂದುಹವಾಮಾನಇಲಾಖೆ ಮುನ್ಸೂಚನೆನೀಡಿದೆ.ಬಂಗಾಳಉಪಸಾಗರದ ಉತ್ತರ ಒಡಿಶಾ, ಆಂಧ್ರದ ಕರಾವಳಿ ಭಾಗದಲ್ಲಿವಾಯುಭಾರಕುಸಿತದಿಂದಾಗಿ ಕರ್ನಾಟಕದಲ್ಲಿ ಭಾರೀಮಳೆಯಾಗಲಿದೆ. ಹೀಗಾಗಿರಾಜ್ಯದಹಲವುಜಿಲ್ಲೆಗಳಿಗೆಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.ಸೆ.23ರಿಂದಸೆ.29ರವರೆಗೆಹಲವಡೆಭಾರೀಮಳೆಯಾಗುವಸಾಧ್ಯತೆಯಿದ್ದು, ಉತ್ತರ ಒಳನಾಡು, ಕರಾವಳಿ ಭಾಗ ಹಾಗೂ ಬೆಂಗಳೂರಿನಲ್ಲಿ ಮಳೆಯಾಗಲಿದೆ ಎಂದು ಎಚ್ಚರಿಕೆ ನೀಡಿದೆ.

## ಕಂಪೌಂಡ್‌ಗೆ ಢಿಕ್ಕಿ ಹೊಡೆದ ಬಸ್



ಮಲ್ಲಮ್ಮನುಡಿ ವಾರ್ತೆ ಬೀದರ. ಸೆ. 23 : ನಗರದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಕಂಪೌಂಡ್ ಗೆ ಕೆಕೆಆರ್‌ಟಿಸಿ ಬಸ್‌ವೊಂದು ಢಿಕ್ಕಿ ಹೊಡೆದಿರುವಘಟನೆನಡೆದಿದೆ. ಇಂದು ಬೆಳಿಗ್ಗೆ ಬೀದರ್‌ನಿಂದ ಮಹಾರಾಷ್ಟ್ರದ ಉದಗೀರ್‌ಗೆಹೋಗುವಕೆಕೆಆರ್‌ಟಿಸಿ ಬಸ್ ಬೀದರ್‌ನಿಂದಪ್ರಯಾಣಿಕರನ್ನು ತುಂಬಿಕೊಂಡು ಉದಗೀರ್ ಕಡೆಗೆ ಹೊರಟಿತ್ತು. ಬಸ್ ನಿಲ್ದಾಣದ 6 ರಿಂದ 7 ಕಿ. ಮೀ. ದೂರದವರೆಗೆ ಬಂದ ಬಸ್ ಸಮಾಜಕಲ್ಯಾಣಇಲಾಖೆಕಚೇರಿಯ ಕಂಪೌಂಡ್ ಗೆ ಢಿಕ್ಕಿ ಹೊಡೆದಿದೆ. ಬಸ್‌ನಲ್ಲಿ ಸುಮಾರು 15 ಜನ ಪ್ರಯಾಣಿಕರಿದ್ದರು. ಎಲ್ಲರೂ ಸುರಕ್ಷಿತರಾಗಿದ್ದಾರೆ.

## ಪೌರ ಕಾರ್ಮಿಕರ ಸೇವೆ ಅಪ್ರತಿಮ:ಸಚಿವ ಖಂಡ್ರೆ



ಮಲ್ಲಮ್ಮನುಡಿ ವಾರ್ತೆ ಬೀದರ, ಸೆ.23 : ಸಮಾಜದ ಸ್ವಚ್ಛತೆ, ಆರೋಗ್ಯ ಹಾಗೂಸುಂದರತೆಯಹಿತದೃಷ್ಟಿಯಿಂದ ಪ್ರತಿದಿನ ದುಡಿಯುತ್ತಿರುವ ಪೌರ ಕಾರ್ಮಿಕರ ಸೇವೆ ಅಪ್ರತಿಮ ಎಂದು ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಹೇಳಿದರು. ಅವರು ಮಂಗಳವಾರ ಭಾಲ್ಕಿ ಪುರಸಭೆಯಲ್ಲಿ ನಡೆದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.ಸಮಾಜದ ನೆಲೆಯಾದ ಈ ಪರಿಶ್ರಮಿ ಕಾರ್ಮಿಕರ ಪರಿಶ್ರಮವಿಲ್ಲದೆ ಸುಂದರ ಹಾಗೂ ಆರೋಗ್ಯಕರ ಸಮಾಜ ಸಾಧ್ಯವಿಲ್ಲ, ಪೌರ ಕಾರ್ಮಿಕರ ಕಲ್ಯಾಣ, ಗೌರವ ಮತ್ತು ಭದ್ರತೆಗಾಗಿ ರಾಜ್ಯ ಸರ್ಕಾರ ಸಂಪೂರ್ಣ ಬದ್ಧವಾಗಿದೆ. ಅವರ ಜೀವನಮಟ್ಟ ಸುಧಾರಣೆಗೆ ನೂತನ ಯೋಜನೆಗಳುಮತ್ತುಕಲ್ಯಾಣಕಾರ್ಯಕ್ರಮಗಳನ್ನು ನಿರಂತರವಾಗಿ ಜಾರಿಗೊಳಿಸಲಾಗುತ್ತಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಮುಖಂಡರುಗಳು ಹಾಗೂ ಪೌರಕಾರ್ಮಿಕರು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ರೈತರು ಹೊಸ ಬೆಳೆಗೆ ಬದಲಾಗಲಿ: ಬಾದರ್ಲಿ ಸಲಹೆ




ಮಲ್ಲಮ್ಮನುಡಿವಾರ್ತೆ ರಾಯಚೂರು ಸೆ 23: ಸಿಂಧನೂರು ಸೇರಿದಂತೆ ಈ ಭಾಗದಲ್ಲಿಮೊದಲುಎಲ್ಲೆಡೆಹೈಬ್ರಿಡ್ ಹತ್ತಿ ಬೆಳೆತೆಗೆಯುತ್ತಿದ್ದರು.1985 ರಿಂದ ಹತ್ತಿ ಬೆಳೆಯ ಜಾಗದಲ್ಲಿ ಭತ್ತದ ಬೆಳೆ ಬಂದಿತು.ಕಾಲಕ್ಕೆತಕ್ಕಂತೆನಮ್ಮ ಭಾಗದ ರೈತರು ಹೊಸ ಬೆಳೆಗೆ ಬದಲಾಗಬೇಕು ಎಂದು ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಸಲಹೆ ಮಾಡಿದರು.ಸೋಮಲಾಪುರದ ಅಂಬಾ ದೇವಸ್ಥಾನದ ಬಳಿ ಸೆ.23ರಂದು ಆರಂಭಗೊಂಡ ಗ್ರಾಮೀಣ ದಸರಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ನಮಗು ವಯಸ್ಸಾ ಗುತ್ತಾ ಬಂದಿತು, ತುಂಗಭದ್ರಾ ಡ್ಯಾಂಗು ವಯಸ್ಸಾಯಿತು ಎಂದು ಹೇಳುತ್ತ ಸಭಾಂಗಣದಲ್ಲಿ ನಗೆ ಉಕ್ಕಿಸಿದ ಶಾಸಕರು, ಕಾಲ ಬದಲಾಗುತ್ತಿದೆ. ಅಂತೆಯೇ ನಾವು ಬದಲಾಗಬೇಕು. ಹೊಸತನಕ್ಕೆ ನಾವೆಲ್ಲ ಸಿದ್ಧರಾಗಲೇಬೇಕು ಎಂದು ಸಲಹೆ ಮಾಡಿದರು.ನಮ್ಮ ಸಾಮಾಜಿಕ ಪರಿಕಲ್ಪನೆ ಬದಲಾಗಲೇಬೇಕು. ಎಲ್ಲರೂ ಶಿಕ್ಷಣ ಪಡೆಯಬೇಕು. ರೈತರು ಕೃಷಿಯಲ್ಲಿ ತಂತ್ರಜ್ಞಾನ ಬಳಸಬೇಕು. ಗ್ರಾಮೀಣ ಕಲೆ ಉಳಿಯಬೇಕು. ಆರೋಗ್ಯ ಕಾಯ್ದುಕೊಳ್ಳಬೇಕು. ಗಿಡ ಮರ ಹೆಚ್ಚು ಹೆಚ್ಚು ಬೆಳೆಸಬೇಕು.ಈ ನಿಟ್ಟಿನಲ್ಲಿ ಯೋಚಿಸಿಯೇ ನಾವು ಗ್ರಾಮೀಣ ದಸರಾ, ರೈತ ದಸರಾ, ಆರೋಗ್ಯ ದಸರಾ, ಶಿಕ್ಷಣ ದಸರಾ, ಹಸಿರು ದಸರಾ ಎಂದು ವಿನೂತನ ರೀತಿಯಲ್ಲಿ ದಸರಾ ಉತ್ಸವ ಆಯೋಜನೆ ಮಾಡಿದ್ದೇವೆ ಎಂದು ತಿಳಿಸಿದರು.ನಮ್ಮ ಭಾಗದ ರೈತರು ಪ್ರಸಿದ್ಧ ಸೋನಾಮಸೂರಿ ಬೆಳೆ ತೆಗೆಯುತ್ತ ಕೃಷಿ ವಿಜ್ಞಾನಿಗಳಿಗಿಂತಲೂ ಮುಂದಿದ್ದಾರೆ ಎಂದು ಸಂತಷ ವ್ಯಕ್ತಪಡಿಸಿದ ಶಾಸಕರು, ಎಲ್ಲ ಗ್ರಾಮ ಪಂಚಾಯತಗಳಲ್ಲಿ ಆಯೋಜನೆ ಮಾಡಿದ, ಹೊಸ ಸಾಮಾಜಿಕ ಸಂದೇಶದ ಕಿರು ನಾಟಕಗಳನ್ನು ಸಾರ್ವಜನಿಕರು ವೀಕ್ಷಣೆ ಮಾಡಬೇಕು. ಆ ನಾಟಕಗಳಲ್ಲಿನ ಸಂದೇಶ ಅರಿತು ಬದಲಾವಣೆಯತ್ತ ಹೆಜ್ಜೆ ಇಡಬೇಕು ಎಂದು ಮನವಿ ಮಾಡಿದರು.ಎರಡನೇ ವರ್ಷವೂ ಅದ್ದೂರಿ: ನಮ್ಮ ಸಿಂಧನೂರ ದಸರಾ ಉತ್ಸವವು ಎರಡನೇ ವರ್ಷಕ್ಕೆ ಕಾಲಿರಿಸಿ ಅದ್ದೂರಿಯಾಗಿ ನಡೆಯುತ್ತಿದೆ.ಮೊದಲನೇ ವರ್ಷ ದಸರಾ ಕಾರ್ಯಕ್ರಮವು ಯಶ ಕಂಡ ಬಳಿಕ ತಾಲೂಕಿನ ಎಲ್ಲ ಭಾಗದ ಜನರು ಸೇರಿ ಗ್ರಾಮೀಣ ಪ್ರದೇಶದ ಜೊತೆಗೆ ಸಿಂಧನೂರ ಸಿಟಿಯಲ್ಲಿ ದಸರಾ ಆಚರಣೆ ಆಗಬೇಕು ಎಂದು ನಿರ್ಧರಿಸಿ ಈ ಬಾರಿ ಗ್ರಾಮೀಣ ದಸರಾ ಎಂದು ಐದು ದಿನಗಳ ಕಾಲ ಗ್ರಾಮಗಳಲ್ಲಿ ಕೂಡ ದಸರಾ ಕಾರ್ಯಕ್ರಮ ಮಾಡುತ್ತಿದ್ದೇವೆ. ಸಿಂಧನೂರ ಸೇರಿದಂತೆ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಉತ್ಸವದ ನಾನಾ ಕಾರ್ಯಕ್ರಮಗಳ ವೀಕ್ಷಣೆ ಮಾಡಬೇಕು ಎಂದು ಸಮಾರಂಭದ ಮೂಲಕ ಮನವಿ ಮಾಡಿದರು.

**ಜಾತಿಗಣತಿ: ಜಾತಿಗಣತಿ ಸಮೀಕ್ಷೆಗೆ ತಡೆ ಕೋರಿದ್ದ ಅರ್ಜಿ ವಿಚಾರಣೆ ಬುಧುವಾರಕ್ಕೆ ಮುಂದೂಡಿದ ಹೈಕೋರ್ಟ್**

# ಉತ್ತಮ ಆರೋಗ್ಯಕ್ಕೆ ಆಯುರ್ವೇದ ಪೂರಕ: ನರಸಮ್ಮ ಮಾಡಗಿರಿ



ಮಲ್ಲಮ್ಮನುಡಿವಾರ್ತೆರಾಯಚೂರು ಸೆ 23: ಪ್ರತಿಯೊಬ್ಬರು ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ಉತ್ತಮ ಆರೋಗ್ಯಕ್ಕೆ ಆಯುರ್ವೇದವು ಪೂರಕವಾಗಿದೆ. ಆಯುರ್ವೇದದ ಮೌಲ್ಯಿಕಅಂಶಗಳನ್ನುಎಲ್ಲರೂಅರಿತು ಸದುಪಯೋಗ ಪಡಿಸಿಕೊಳ್ಳಬೇಕು ಎಚಿದು ಮಹಾನಗರ ಪಾಲಿಕೆಯ ಅಧ್ಯಕ್ಷೆ ನರಸಮ್ಮ ನರಸಿಂಹಲು ಮಾಡಗಿರಿ ಅವರು ಹೇಳಿದರು.

ನಗರದ ಜಿಲ್ಲಾ ಸರಕಾರಿ ಆಯುರ್ವೇದ ಮತ್ತು ಯುನಾನಿ ಆಸ್ಪತ್ರೆಯಸಭಾಂಗಣದಲ್ಲಿಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆಯುಷ್ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜನರಿಗಾಗಿ ಮತ್ತು ಜಗತ್ತಿಗಾಗಿ ಆಯುರ್ವೇದ ಎಂಬ ಘೋಷವಾಕ್ಯದೊಂದಿಗೆ ಸೆ.23ರಂದು ನಡೆದ 10ನೇ ರಾಷ್ಟ್ರೀಯಆಯುರ್ವೇದದಿನಾಚರಣೆ ಉದ್ಘಾಟಿಸಿ ಹಾಗೂ ಧನ್ವಂತರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು.

ಜಿಲ್ಲಾಆಯುಷ್ ಅಧಿಕಾರಿಗಳಾದ ಡಾ.ಶಂಕರಗೌಡಅವರುಮಾತನಾಡಿ, ನಮ್ಮ ಮನಸ್ಸು, ಆತ್ಮ ಮತ್ತು ದೇಹ ಮೂರೂಆರೋಗ್ಯವಾಗಿದ್ದಲ್ಲಿಮನುಷ್ಯ ಸದಾಕಾಲ ಚೇತನದಿಂದಿರಲು ಸಾಧ್ಯಾಗುತ್ತದೆ ಎಂದರು.

ಇಡೀ ಭರತ ಖಂಡದಲ್ಲಿ ಇಂದಿನ ದಿನ ಉತ್ತರಾರ್ಧ ಗೋಳದಲ್ಲಿ ಸೂರ್ಯನು ದಕ್ಷಿಣಾರ್ಧದಲ್ಲಿ ಚಲಿಸುವುದರಿಂದ 12 ಗಂಟೆ ಹಗಲು ಮತ್ತು 12 ಗಂಟೆ ರಾತ್ರಿ ಸಮತಲವಾಗಿರುತ್ತದೆ. ಆದ್ದರಿಂದ ಈ ದಿನದಂದೇ ನಮ್ಮ ಆಯುಷ್ ಇಲಾಖೆಯಿಂದ ಆಯುರ್ವೇದ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು ಅವರು ಮಾತನಾಡಿ, ಸುಮಾರು 9 ವರ್ಷಗಳಿಂದರಾಷ್ಟ್ರೀಯಆಯುರ್ವೇದ ದಿನಾಚರಣೆಯನ್ನುಆಚರಿಸುತ್ತಿದ್ದು, ಇದನ್ನುಅಂತಾರಾಷ್ಟ್ರೀಯವಾಗಿಮತ್ತು ಪ್ರಪಂಚದಾದ್ಯಂತಆಚರಿಸಲುನಾವೆಲ್ಲ ನಮ್ಮ ಆಯುರ್ವೇದ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಆಯುರ್ವೇದ ವೈದ್ಯರು, ಅಲೋಪತಿ ಮತ್ತು ಹೋಮಿಯೋಪಥಿ ಪ್ರಾಕ್ಟೀಸ್ ಮಾಡದೆ ಚಿಕಿತ್ಸೆ ನೀಡುತ್ತಿರುವುದು ಕಾನೂನು ಬಾಹೀರವಾಗಿದ್ದು, ಅದರಡಿ ಕೆಲ ವೈದ್ಯರಿಗೆ ದಂಡ ವಿಧಿಸಲಾಗಿದೆ ಎಂದು ಹೇಳಿದರು.

ರಾಷ್ಟ್ರೀಯ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯಶನ್ ಅಧ್ಯಕ್ಷ ಡಾ.ದೇಶಪಾಂಡೆ ಅವರು ಮಾತನಾಡಿ, ಮನುಷ್ಯನು ತನ್ನ ದಿನನಿತ್ಯದ ಜೀವನದಲ್ಲಿ ದೈಹಿಕ ಆರೋಗ್ಯಕ್ಕೆ ಸಂಬಂಧಿಸಿದ ಎಲ್ಲ ಅಂಶಗಳನ್ನು ಸರಿಯಾಗಿ ಪಾಲಿಸಿದರೆ ತುಂಬಾ ವರ್ಷಗಳ ಕಾಲ ಬದುಕುಳಿಯಲು ಸಹಾಯಕವಾಗುತ್ತದೆಎಂದುಹೇಳಿದರು. ಡಾ.ಕಣಕಾಲಕ್ಷ್ಮಿ,ಡಾ.ನವೀನ್ ಹಾಗೂ ಡಾ.ಪೂಜಾ ಅವರು ಧನ್ವಂತರಿ ಮಂತ್ರದ ಪ್ರಾರ್ಥನಾ ಗೀತೆ ಹೇಳಿದರು.

ಈವೇಳೆಹಿರಿಯವೈದ್ಯಾಧಿಕಾರಿಗಳು, ಜಿಲ್ಲಾ ಸರಕಾರಿ ನೌಕರರ ಸಂಘದ ಕಾರ್ಯಾಧ್ಯಕ್ಷರಾದ ಡಾ.ಶಂಕರಗೌಡ ಪಾಟೀಲ್, ಜಿಲ್ಲಾ ಆಯುಷ್ ವೈದ್ಯಾಧಿಕಾರಿಗಳ ಸಂಘದ ಅಧ್ಯಕ್ಷರಾದ ಆಮದರ್ ಷರೀಫ್ ಹಾಗೂ ಸಿಬ್ಬಂದಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕಲ್ಯಾಣ ಪಥ ರಸ್ತೆಗೆ ಅಡಿಗಲ್ಲು ಹಾಕಿದ ಸಚಿವ ಡಾ.ಶರಣಪ್ರಕಾಶ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಸೇಡಂ. ಸೆ. 23 : 2024–25ನೇ ಸಾಲಿನ ಕಲ್ಯಾಣ ಪಥ ಯೋಜನೆ ಅಡಿಯಲ್ಲಿ ಸೇಡಂ ತಾಲೂಕಿನ ಊಡಗಿ ಗ್ರಾಮದಿಂದ ಮಳಖೇಡ ಸ್ಟೇಷನ್ ತಾಂಡಾವರೆಗೆ 3.7 ಕೋಟಿ ರೂಗಳ ಹಂಗನಹಳ್ಳಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ವೈದ್ಯಕೀಯ ಶಿಕ್ಷಣ ಸಚಿವರಾದಡಾ.ಶರಣಪ್ರಕಾಶಪಾಟೀಲ ಅಡಿಗಲ್ಲು ನೆರವೇರಿಸಿದರು.

ಕಲ್ಯಾಣ ಪಥ ಯೋಜನೆ ಮೂಲಕ ಕಲ್ಯಾಣ ಕರ್ನಾಟಕ ಭಾಗದ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳು ಭರದಿಂದ ಸಾಗುತ್ತಿವೆ. ಕೆ.ಕೆ. ಆರ್.ಡಿ.ಬಿಯಿಂದಪ್ರತ್ಯೇಕಅನುದಾನವು ಸಹ ಬಿಡಗಡೆಗೊಳಿಸಲಾಗುತ್ತಿದೆ.

ಊಡಗಿಯಿಂದ ಮಳಖೇಡ ಸ್ಟೇಷನ್ ತಾಂಡಾದ ಹಂನಗಹಳ್ಳಿ ರಸ್ತೆ ಅಭಿವೃದ್ಧಿ ಕಾಮಗಾರಿ ಗುಣಮಟ್ಟದಿಂದ ಕೂಡಿರಲಿ ಎಂದು ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಈ ಸಂದರ್ಭದಲ್ಲಿ ಊಡಗಿ ಮತ್ತು ಮಳಖೇಡ ಸ್ಟೇಷನ್ ತಾಂಡಾದ ಸಾರ್ವಜನಿಕರು, ಪಕ್ಷದ ಹಿರಿಯ ಮುಖಂಡರು

ವಿವಿಧ ಇಲಾಖೆಯ ಅಧಿಕಾರಿಗಳು ಸ್ಥಳೀಯರು ಉಪಸ್ಥಿತರಿದ್ದರು

# ಎಬಿವಿಪಿಯಿಂದ ರಾಣಿ ಚೆನ್ನಮ್ಮ-ರಾಣಿ ಅಬ್ಬಕ್ಕನ ರಥಯಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.23–ವೀರ ವನಿತೆಯರ ಇತಿಹಾಸವಿರುವ ಭಾರತದ ಮೂಲ ಮಣ್ಣಿನ ಅಸ್ಮಿತೆಯ ಪರಿಚಯ ಇಂದಿನ ಯುವ ಪೀಳಿಗೆಗೆ ಅಗತ್ಯವಾಗಿದೆ ಎಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನ ನಿಕಟಪೂರ್ವ ರಾಷ್ಟ್ರೀಯ ಕಾರ್ಯದರ್ಶಿ ಹರ್ಷ ನಾರಾಯಣ ಹೇಳಿದರು.

ನಗರದ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ವತಿಯಿಂದ ವೀರ ವನಿತೆ ಕಿತ್ತೂರ ಚೆನ್ನಮ್ಮಳ 200ನೇ ವರ್ಷದ ವಿಜಯೋತ್ಸವ ಹಾಗೂ ರಾಣಿ ಅಬ್ಬಕ್ಕದೇವಿ 500 ನೇ ಜಯಂತ್ಯೋತ್ಸವ ಪ್ರಯುಕ್ತ ನಗರದಲ್ಲಿಮಂಗಳವಾರಹಮ್ಮಿಕೊಂಡ ರಥಯಾತ್ರೆ ಹಾಗೂ ಸಾರ್ವಜನಿಕ ಕಾರ್ಯಕ್ರಮದಲ್ಲಿಮುಖ್ಯವಕ್ತಾರರಾಗಿ ಅವರು ಮಾತನಾಡಿದರು.

ಕಿತ್ತೂರ ರಾಣಿ ಚೆನ್ನಮ್ಮ ಹಾಗೂ ರಾಣಿ ಅಬ್ಬಕ್ಕ ಅವರ ಸಾಧನೆ ಕುರಿತು ವಿದ್ಯಾರ್ಥಿಗಳಿಗೆ ಹಾಗೂ ಯುವ ಜನರಿಗೆ ತಿಳಿಸುವ ಉದ್ದೇಶದಿಂದ ರಥಯಾತ್ರೆ ಮಾಡಲಾಗಿದೆ. ರಾಣಿ ಚೆನ್ನಮ್ಮಳ ಕೆಚ್ಚು, ಅಬ್ಬಕ್ಕನ ಸ್ಫೂರ್ತಿ ಪ್ರತಿ ಮನೆ ಮನೆಗಳಲ್ಲಿ ಬೆಳಗಬೇಕಿದೆ. ಪೂರ್ವಜರು ಹಾಕಿ ಕೊಟ್ಟ ಸಂಸ್ಕೃತಿ ಸಂಸ್ಕಾರ ಉಳಿಸಿ ಬೆಳೆಸುವುದರ ಜೊತೆಗೆ ವೀರವನಿತೆಯರ ಸಾಹಸ ಗಾಥೆ ಎಲ್ಲರಿಗೆ ಪ್ರೇರಣೆಯಾಗಲಿ ಎಂದರು.

ಅಧ್ಯಕ್ಷತೆವಹಿಸಿದ್ದ ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಮಾತನಾಡಿ, ರಾಣಿ ಚೆನ್ನಮ್ಮ ಹಾಗೂ ರಾಣಿ ಅಬ್ಬಕ್ಕ ಅವರ ಸಾಧನೆ ಇನ್ನು ಜನಮಾನಸದಲ್ಲಿ ಇದ್ದು ಅವರ ದೇಶಭಕ್ತಿ ಅಜರಾಮರವಾಗಿರುತ್ತದೆ. ಆ ನಿಟ್ಟಿನಲ್ಲಿ ವಿದ್ಯಾರ್ಥಿ ಪರಿಷತ್ತು ಇಂಥ ಕಾರ್ಯಕ್ರಮಗಳ ಮೂಲಕ ವಿದ್ಯಾರ್ಥಿಗಳಲ್ಲಿ ದೇಶಭಕ್ತಿಯ ಪ್ರೇರಣೆ ಬೆಳೆಸುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಸಾನಿಧ್ಯವಹಿಸಿ ಆಶೀರ್ವಚನ ನೀಡಿದ ಗುಳೆದಗುಡ್ಡ ಮುರಘಾಮಠ ಅಭಿನವ ಕಾಡಸಿದ್ದೇಶ್ವರ ಮಹಾಸ್ವಾಮೀಜಿ, ತಾಯಿಯಂತೆ ಆಶ್ರಯ ಕೊಟ್ಟಿರುವ ದೇಶಕ್ಕಾಗಿ ನಾವು ಯಾವ ತ್ಯಾಗಕ್ಕೂ ಸಿದ್ದರಾಗಿರಬೇಕು. ದೇಶ ನಮಗೆ ಏನು ಕೊಟ್ಟಿದೆ ಎನ್ನುವುದಕ್ಕಿಂತ ದೇಶಕ್ಕೆ ನಮ್ಮ ಕೊಡುಗೆ ಏನು ಎಂಬುದು ಮುಖ್ಯ ಎಂದರು.

ಪದ್ಮಶ್ರೀ ಪುರಸ್ಕೃತ ಅಂಬಾಜಿ ಸುಗತೇಕರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಎಬಿವಿಪಿ ಉತ್ತರ ಪ್ರಾಂತ ಉಪಾಧ್ಯಕ್ಷರಾದ ಡಾ.ಸುಮಾ ಬೋಳರೆಡ್ಡಿ, ಜಿಲ್ಲಾ ಸಂಚಾಲಕ ವಿಪುಲ್ ಪೇಟಕರ, ನಗರ ಅಧ್ಯಕ್ಷ ಡಾ.ಬಸವರಾಜ ಕುಂಬಾರ, ನಗರ ಕಾರ್ಯದರ್ಶಿ ರವಿ ದಂಡಗಿ ಇದ್ದರು.

ಕಾರ್ಯಕ್ರಮದಲ್ಲಿ ಸಂಘಪರಿವಾರದ ಹಿರಿಯರಾದ ಡಾ.ಸಿ.ಎಸ್.ಪಾಟೀಲ, ಎಚ್.ಡಿ.ಪಾಟೀಲ, ಬಿ.ವಿ.ವಿ.ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ,

ಗುರುಬಸವ ಸೂಳಿಭಾವಿ, ಮಹಾಂತೇಶ ಶೆಟ್ಟರ, ಮಾರುತಿ ಪಾಟೋಳಿ, ಎಲ್.ಜಿ.ವೈದ್ಯ, ವಿ.ಪಿ ಗಿರಿಸಾಗರ, ವಿಭಾಗ ಸಂಘಟನಾ ಕಾರ್ಯದರ್ಶಿ ಹರ್ಷಾ ಹಾಗೂ ಪ್ರಾಂತ ಸಂಘಟನಾ ಕಾರ್ಯದರ್ಶಿ ವೆಂಕಟೇಶ ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಮೊದಲು ನಡೆದ ರಾಣಿ ಚೆನ್ನಮ್ಮ ಹಾಗೂ ರಾಣಿ ಅಬ್ಬಕನ ಮೂರ್ತಿ ಹಾಗೂ ಸಾಧನೆಯ ಮಾಹಿತಿ ಇರುವ ರಥಯಾತ್ರೆ ನೋಡುಗರ ಗಮನ ಸೆಳೆಯಿತು. ನಗರದ ಬೀಳೂರ ಅಜ್ಜನ ಗುಡಿಯ ಆವರಣದಲ್ಲಿ ರಥಯಾತ್ರೆಗೆ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಚಾಲನೆ ನೀಡಿದರು. ರಥಯಾತ್ರೆ ಟೀಕಿನಮಠ, ಅಡತ್ ಬಜಾರ ರಸ್ತೆ, ಪೋಲೀಸ್ ಚೌಕಿ, ಮಹಾತ್ಮಗಾಂಧಿ ರಸ್ತೆ ಮೂಲಕ ಬಸವೇಶ್ವರ ವೃತ್ತ ತಲುಪಿತು. ಅಲ್ಲಿ ರಾಷ್ಟ್ರಸೇವಿಕಾ ಅವರಿಂದ ಘೋಷ ವಂದನೆ ಸಲ್ಲಿಸಲಾಯಿತು.

ರಥಯಾತ್ರೆಯಲ್ಲಿ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಡಾ.ಶ್ರೀಲತಾ ಹೆರಂಜಲ್, ಬಸವರಾಜ ಹುನಗುಂದ, ಜ್ಯೋತಿ ಕದಾಂಪುರ, ಶ್ರೀದೇವಿ ಪವಾಡಶೆಟ್ಟರ, ಸುಷ್ಮಾದೇವಿ ವಡೆಯರ ಸೇರಿದಂತೆ ವಿವಿಧ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಕಬ್ಬಡ್ಡಿಯಲ್ಲಿ ಬಾಲಕಿಯರ ಮೇಲುಗೈ, ಜಿಲ್ಲಾ ಮಟ್ಟಕ್ಕೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಾ) :ಸೆ.23: ಪಟ್ಟಣದ ನಾಲಂದಾ ಪ್ರೌಢಶಾಲೆಯ ಬಾಲಕಿಯರ ಕಬ್ಬಡ್ಡಿ ತಂಡವು ತಾಲೂಕು ಮಟ್ಟದಲ್ಲಿ ಜಯಭೇರಿಗೈದು, ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದೆ.

ನಗರದ ಹೊರವಲಯದಲ್ಲಿರುವ ತಾಲ್ಲೂಕು ಕ್ರೀಡಾಂಗಣದಲ್ಲಿ ಕಳೆದೆರಡು ದಿನಗಳಿಂದಲೂ ನಡೆಸುತ್ತಿರುವ ತಾಲ್ಲೂಕು ಮಟ್ಟದ ಪ್ರೌಢ ಶಾಲಾ ಹಂತದ ಕ್ರೀಡೆಗಳಲ್ಲಿ ನಾಲಂದಾ ಪ್ರೌಢ ಶಾಲೆಯ ಬಾಲಕಿಯರ ಕಬ್ಬಡ್ಡಿ ತಂಡವು ಪರಸ್ಪರ ಜಿದ್ದಾ–ಜಿದ್ದಿನೊಂದಿಗೆ ಎದುರಾಳಿ ತಂಡಕ್ಕೆ ಸೋಲುಣಿಸುವುದರ ಜತೆಗೆ ಮೇಲುಗೈ ಸಾಧಿಸಿ, ಪ್ರಥಮ ಸ್ಥಾನ ಪಡೆದು, ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದೆ. ಜತೆಗೆ ಬಾಲಕರ ಕಬ್ಬಡ್ಡಿ ತಂಡವೂ ಕೂಡ ದ್ವಿತೀಯ ಸ್ಥಾನ ಬಾಚಿಕೊಂಡು, ದಸರಾ ಕ್ರೀಡೆಗೆ ಭರಪೂರ ಸಿದ್ಧತೆ ಶುರು ಮಾಡಿಕೊಂಡಿದೆ.

100 ಮೀಟರ್ ಓಟದಲ್ಲಿ ಸುನೀಲ ವೆಂಕಟ್ ಎಂಬ 'ಛಲದಂಕಮಲ್ಲ' ವಿದ್ಯಾರ್ಥಿಯೂ ದ್ವಿತೀಯ ಸ್ಥಾನದಲ್ಲಿ ತೇರ್ಗಡೆಯಾಗಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಇನ್ನೂ ವಿಶೇಷವೆಂದರೆ, ಇದೇ ಸಂದರ್ಭದಲ್ಲಿ ಇತ್ತೀಚೆಗೆ 17 ರ ವಯೋಮಾನ 46 ಕೆ.ಜಿ ವಿಭಾಗದಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸಿ, ರಾಜ್ಯ ಮಟ್ಟಕ್ಕೆ ಆಯ್ಕೆಯಾದ ನಾಲಂದಾ ಪ್ರೌಢ ಶಾಲೆಯ ವಿದ್ಯಾರ್ಥಿನಿ ಕುಮಾರಿ ಶೋಭಾ ಸಂತೋಷ್ ರವರಿಗೆ ಔರಾದ(ಬಾ) ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮಾಜಿ ಸಚಿವರಾದ ಪ್ರಭು.ಬಿ.ಚೌಹಾಣ್ ರವರು ಸನ್ಮಾನಿಸಿ, ಗೌರವಿಸುವುದರ ಜತೆಗೆ ಭವಿಷ್ಯದಲ್ಲೂ ಉತ್ತಮ ಸಾಧಕಿಯಾಗಿ ಗುರುತಿಸಿಕೊಳ್ಳುವಂತೆ ಪ್ರೇರೆಪಿಸಿ, ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ಬಾಲಕಿಯರ ಕಬ್ಬಡ್ಡಿ ತಂಡದವರಿಗೆ ಶುಭ ಹಾರೈಸಿದರು.

ಮಕ್ಕಳ ಸಾಧನೆಗೆ ಎಸ್.ಪಿ.ಕೆ ಸಮಿತಿಯ ಅಧ್ಯಕ್ಷರಾದ ಕೆ. ಪುಂಡಲೀಕರಾವ ಶೇಟ್ಟಿಬಾ ಶ್ಲಾಘಿಸಿದರು. ಪ್ರೌಢ ಶಾಲೆಯ ಮುಖ್ಯಗುರು ಜಗನ್ನಾಥ. ಎಸ್.ಬಿರಾದಾರ, ದೈಹಿಕ ಶಿಕ್ಷಕರಾದ ಸುನೀಲಕುಮಾರ.ಬಿ.ವಾಗಮೋಡೆಹಾಗೂ ಸಹ ಶಿಕ್ಷಕರಾದ ದಿಲೀಪಕುಮಾರ.ಎನ್. ಮೇತ್ರೆ, ಮಲ್ಲಿಕಾರ್ಜುನ.ವ್ಹಿ.ಕೋಟೆ, ಪರಮೇಶ್ವರ.ಬಿ.ಬಿರಾದಾರ, ಅಸ್ಪಾಕ್ ಮಿಯ್ಯಾ.ಎಸ್.ಬೇಗ್, ಸಿದ್ದಾರ್ಥ. ಜೆ.ಕಾಂಬಳೆ, ಬಾಲಾಜಿ ರಣವೀರಕರ್ ಸಹ ಶಿಕ್ಷಕೀಯರಾದ ಪ್ರೀಯಾ. ಎಮ್.ಬಿರಾದಾರ, ಜ್ಯೋತಿ.ಡಿ.ಘೂಳೆ, ಮುಂಡೆ ಜ್ಞಾನೇಶ್ವರಿ. ಎಸ್ ಹರ್ಷ ವ್ಯಕ್ತಪಡಿಸಿ, ಸಾಧಕ ಮಕ್ಕಳಿಗೆ ಹೂ ಗುಚ್ಛ ನೀಡಿ ಅಭಿನಂದಸಿದರು. ಬೋಧಕೇತರ ಸಿಬ್ಬಂಧಿ ವರ್ಗದವರು ಮತ್ತು ಹಾಜರಿದ್ಧ ಮಕ್ಕಳೆಲ್ಲರೂ ಶುಭ ಹಾರೈಸಿದರು.

# ಯುವ ಪೀಳಿಗೆಗೆ ಮಾದರಿಯಾದ ಮುಧೋಳ್ ಕುಟುಂಬ



ಮಲ್ಲಮ್ಮ ನುಡಿ ವಾರ್ತೆ ಸುರಪುರ, ಸೆಪ್ಟೆಂಬರ್ 23

ಸಮಾಜಮುಖಿ ಸೇವೆಯ ಮೂಲಕ ಜನಮನ ಗೆದ್ದಿದ್ದ ಸುರಪುರ ತಾಲೂಕಿನ ನರಸಿಂಗಪೇಟೆ ಗ್ರಾಮದ ಸೊಲಬಣ್ಣ ಸಾಹುಕಾರ ಅವರ ಏಳನೆಯ ಪುಣ್ಯಸ್ಮರಣೆ ಭಕ್ತಿಭಾವದಿಂದ ಹಾಗೂ ಶ್ರದ್ಧೆಯಿಂದ ನೆರವೇರಿತು. ಈ ಕಾರ್ಯಕ್ರಮವನ್ನು ಅವರ ಕುಟುಂಬದವರಾದ ಮುಧೋಳ್ ಕುಟುಂಬದವರು ಅತ್ಯಂತ ಸಂಸ್ಕೃತಿಪೂರ್ಣವಾಗಿ ಆಯೋಜಿಸಿದ್ದರು.

ಪುಣ್ಯಸ್ಮರಣೆಯ ಅಂಗವಾಗಿ ಮಠಾಧೀಶರ ನೇತೃತ್ವದಲ್ಲಿ ವೈದಿಕ ಪಠಣ, ಹೋಮ–ಹವನ, ವಿಶೇಷ ಪೂಜಾ ವಿಧಾನಗಳು ಜರುಗಿದವು. ಸಮಾರಂಭದಲ್ಲಿ ಹಲವಾರು ಭಕ್ತರು, ಗ್ರಾಮಸ್ಥರು ಮತ್ತು ಸೊಲಬಣ್ಣ ಸಾಹುಕಾರರ ಅಭಿಮಾನಿಗಳು ಭಾಗವಹಿಸಿ, ಅವರ ಧರ್ಮ ಮತ್ತು ದಾನ ಧೋರಣೆಯನ್ನು ಸ್ಮರಿಸಿದರು.

ಮುಧೋಳ್ ಕುಟುಂಬವು ಇಂದು ಕೂಡ ತಮ್ಮ ತಂದೆಯ ಹೆಸರಿನಲ್ಲಿ ನಿರ್ಮಿಸಿದ ದೇವಸ್ಥಾನದಲ್ಲಿ ನಿತ್ಯಪೂಜೆಗಳನ್ನು ನಡೆಸುತ್ತಿದ್ದು, ತಾತ್ವಿಕ ಮೌಲ್ಯಗಳು ಹಾಗೂ ಸಂಸ್ಕೃತಿಯ ಅನ್ನು ಮುಂದಿನ ಪೀಳಿಗೆಗೆ ತಿಳಿಸುತ್ತಿದ್ದಾರೆ. ಧರ್ಮ, ದಾನ ಹಾಗೂ ನೈತಿಕತೆ ಎಂಬ ಅಂಶಗಳಲ್ಲಿ ಯುವಕರಿಗೆ ಮಾರ್ಗದರ್ಶನ ನೀಡುವಂತಹ ಈ ಕುಟುಂಬದ ಶ್ರದ್ಧಾ ಮತ್ತು ಸೇವೆ ಶ್ಲಾಘನೀಯವಾಗಿದೆ.ಇಂದು ತಂತ್ರಜ್ಞಾನ ಮತ್ತು ವೇಗದ ಯುಗದಲ್ಲಿ ಸಂಸ್ಕೃತಿಯನ್ನೂ ಮೌಲ್ಯಗಳನ್ನೂ ಮರೆತುಹೋಗುತ್ತಿರುವ ಕಾಲಘಟ್ಟದಲ್ಲಿ, ಮುಧೋಳ್ ಕುಟುಂಬದ ಈ ನಡವಳಿಕೆ ಯುವ ಪೀಳಿಗೆಗೆ ನಿಜವಾದ ಮಾದರಿಯಾಗಬೇಕಾಗಿದೆ. ಅವರು ನಡೆದುಬರುತ್ತಿರುವ ಧಾರ್ಮಿಕ ಹಾಗೂ ಸಾಂಸ್ಕೃತಿಕ ಮಾರ್ಗವು ಈಗಿನ ಯುವ ಪೀಳಿಗೆಗೆ ಮಾದರಿಯಾಗಬಲ್ಲದು. ಎಂದು ಮಠಾಧೀಶರು ಆಶೀರ್ವಚನ ನೀಡಿದರು.!ಸಮಾರೋಪದಲ್ಲಿ ಅನ್ನಪ್ರಸಾದ ವಿತರಣೆ ನಡೆಯಿತು. ಈ ರೀತಿಯ ಆಚರಣೆಗಳು ಕೇವಲ ಸ್ಮರಣೆ ಮಾತ್ರವಲ್ಲ, ಅವು ಮೌಲ್ಯಪೂರ್ಣ ಜೀವನದ ಪಾಠಗಳನ್ನೂ ನೀಡುತ್ತವೆ.!

# ನಮ್ಮ ಅಭಿವೃದ್ಧಿ ನಮ್ಮ ಕೈಯಲ್ಲಿ : ನಾಗನಾಥ ಚಿಟಮೆ




ಔರಾದ್ : ಸೆ.23:ಯುವ ಸಮೂಹದಲ್ಲಿ ಜಡ ಮನಸ್ಥಿತಿ ಬದಲಾಗಿ ನಮ್ಮ ಅಭಿವೃದ್ಧಿ ನಮ್ಮ ಕೈಯಲ್ಲಿ ಎಂಬ ಧ್ಯೇಯ ಉಸಿರಾಗಿಸಿಕೊಂಡಾಗಮಾತ್ರಕಲ್ಯಾಣ ಕರ್ನಾಟಕ ಪ್ರಗತಿಯತ್ತ ಸಾಗಲಿದೆ ಎಂದು ನಿವೃತ್ತ ಶಿಕ್ಷಕ ಸಾಹಿತಿ ನಾಗನಾಥ ಚಿಟಮೆ ನುಡಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಪದವಿ ಮಹಾವಿದ್ಯಾಲಯದಲ್ಲಿ ಮಂಗಳವಾರ ಕನ್ನಡ ಸಾಹಿತ್ಯ ಪರಿಷತ್ತು ಕಲ್ಯಾಣ ಕರ್ನಾಟಕ ಉತ್ಸವ ನಿಮಿತ್ತ ಆಯೋಜಿಸಿರುವ ಕಲ್ಯಾಣ ಕರ್ನಾಟಕ ಸಮಗ್ರ ಅಭಿವೃದ್ಧಿ ಚಿಂತನೆ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಪ್ರಪಂಚದಲ್ಲಿ ಉತ್ಕೃಷ್ಟವಾದ ಸಂಪತ್ತೆಂದರೆ ಅದು ಮಾನವ ಸಂಪತ್ತು. ಬಸವಾದಿ ಶರಣರು, ಪಂಪ, ಪೊನ್ನ, ರನ್ನ, ನೃಪತುಂಗ ಆದಿಯಾಗಿ ಬಾಳಿ ಬೆಳಗಿದ ಭವ್ಯ ನಾಡು ಕಲ್ಯಾಣ ನಾಡಾಗಿದೆ. ಗುಣಾತ್ಮಕ ಶಿಕ್ಷಣದ ಜೊತೆ ಜೊತೆಗೆ ಮಾನವ ಸಂಪನ್ಮೂಲ ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ಯೋಜನೆ ರೂಪಿಸಬೇಕಿದೆ. ಪ್ರಜ್ಞಾವಂತಿಕೆಯ ಮುತ್ಸದ್ದಿ ಕೊರತೆಯಿಂದ ಹಲವು ವರ್ಷಗಳ ವರೆಗೆ ಕಲ್ಯಾಣ ಕರ್ನಾಟಕ ಭಾಗ ನಿರ್ಲಕ್ಷ್ಯಕ್ಕೆ ಒಳಪಟ್ಟಿತ್ತು.

ಬಳಿಕ ಮಾಜಿ ಮುಖ್ಯಿಯ ಮಂತ್ರಿಗಳಾದ ವಿರೇಂದ್ರ ಪಾಟೀಲ್, ಧರಂ ಸಿಂಗ್, ಮಲ್ಲಿಕಾರ್ಜುನ ಖರ್ಗೆ, ಯಡಿಯೂರಪ್ಪ, ಹೋರಾಟಗಾರ ಡಾ. ವೈಜಿನಾಥ ಪಾಟೀಲ್ ಸೇರಿದಂತೆ ಇನ್ನಿತರ ರಾಜಕೀಯ ನಾಯಕರ ಮಹತ್ವದ ಕಾಣಿಕೆ ಸ್ಮರಿಸಿಕೊಂಡರು. 371 (ಜೆ) ಮೀಸಲಾತಿ ಮುಂದಿನ ದಿನಗಳಲ್ಲಿ ಮಹತ್ವದ ಪಾತ್ರವಹಿಸಲಿದೆ ಎಂದರು.

ಎನ್‌ಪಿಎಸ್ ನೌಕರ ಸಂಘದ ಅಧ್ಯಕ್ಷ ಮಹಾದೇವ ಚಿಟಗೀರೆ ಮಾತನಾಡಿ, ಹೈದ್ರಾಬಾದ್ ಕರ್ನಾಟಕ ವಿಮೋಚನೆಯ ಚರಿತ್ರೆ ಮೇಲೆ ಬೆಳಕು ಚೆಲ್ಲಿ ಸರ್ದಾರ ವಲ್ಲಭಭಾಯಿ ಪಟೇಲ್, ಡಾ. ಅಂಬೇಡ್ಕರ್, ಸ್ವಾಮಿ ರಾಮಾನಂದ ತೀರ್ಥ, ರಾಮಚಂದ್ರ ವೀರಪ್ಪ ಅವರ ಕೊಡುಗೆಗಳು ಸ್ಮರಿಸಿದರು. ರಾಜಕೀಯ ಇಚ್ಛಾಶಕ್ತಿ ಹಾಗೂ ಪ್ರಾಕೃತಿಕ ಅವಕಾಶಗಳ ಸದ್ಬಳಕೆಯಿಂದ ಮಾತ್ರ ಪ್ರಗತಿ ಸಾಧಿಸಲು ಸಾಧ್ಯ ಎಂದರು.

ಪ್ರಾಚಾರ್ಯೆ ಅಂಬಿಕಾ ಕೊತ್ಮಿರ್, ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷ ಅಂಬಾದಾಸ ನಳಗೆ ಮಾತನಾಡಿದರು. ಕಸಾಪ ಅಧ್ಯಕ್ಷ ಬಿ.ಎಂ ಅಮರವಾಡಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಗನ್ನಾಥ ದೇಶಮುಖ ಪ್ರಾಸ್ತಾವಿಕ ಮಾತುಗಳನ್ನಾಡಿದರು.

ಈ ಸಂದರ್ಭದಲ್ಲಿ ಪರಿಷತ್ತಿನ ಹಿರಿಯ ಸದಸ್ಯ ಧನರಾಜ ಮಾನೆ, ಮಾಧ್ಯಮ ಪ್ರತಿನಿಧಿ ಅಮರಸ್ವಾಮಿ ಸ್ಥಾವರಮಠ, ನಗರ ಘಟಕದ ಅಧ್ಯಕ್ಷ ಸಂದೀಪ ಪಾಟೀಲ್, ವಿನಾಯಕ ಕೊತ್ಮಿರ್, ಗುಡದಮ್ಮ, ಪದ್ಮಾಂಜಲಿ ಸೇರಿದಂತೆ ಕಾಲೇಜಿನ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅ.24 ಕೂಡಲಸಂಗಮದಲ್ಲಿ ನಿಸರ್ಗ ಚಿಕಿತ್ಸಾ ಸಮ್ಮೇಳನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.23–ಜಿಲ್ಲೆಯ ಕೂಡಲಸಂಗಮದಲ್ಲಿ ಅಕ್ಟೋಬರ 24ರಿಂದ 26 ರವರೆಗೆ ಅಖಿಲ ಭಾರತ ಯೋಗ ಮತ್ತು ನಿಸರ್ಗ ಚಿಕಿತ್ಸಾಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಶಿರೂರಿನ ವಿಜಯ ಮಹಾಂತತೀರ್ಥದ ಡಾ.ಬಸವಲಿಂಗ ಸ್ವಾಮೀಜಿ ಹೇಳಿದರು.

ಮಂಗಳವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಳಕಲ್‌ದ ಚಿತ್ತರಗಿ ವಿಜಯಮಹಾಂತೇಶ್ವರ ಸಂಸ್ಥಾನಮಠ, ಶಿರೂರಿನ ವಿಜಯ ಮಹಾಂತತೀರ್ಥ ಇವರ ಸಹಯೋಗದಲ್ಲಿ ಈ ಸಮ್ಮೇಳನ ಆಯೋಜನೆಯಾಗಿದೆ ಎಂದರು.

ಭಾರತೀಯ ವೈದ್ಯ ವಿಜ್ಞಾನ ಯೋಗ ಮತ್ತು ನಿಸರ್ಗ ಚಿಕಿತ್ಸೆ ಅಗತ್ಯವಾಗಿದ್ದು ಗಾಂಧೀಜಿ ಅವರ ಅಚ್ಚುಮೆಚ್ಚಿನ ಪ್ರಕೃತಿ ಚಿಕಿತ್ಸೆ ಸರಳ, ಸುಲಭ, ಸಾರ್ವತ್ರಿಕ, ಸಾರ್ವಭೌಮ ಹಾಗೂ ಕಡಿಮೆ ಖರ್ಚಿನಲ್ಲಿ ಸುಲಭವಾಗಿ ಲಭ್ಯವಾಗುವ ಮಣ್ಣು, ನೀರು, ಬಿಸಿಲು, ಗಾಳಿ ಆಕಾಶ ಈ ಪಂಚಭೂತಗಳಿಂದ ಔಷಧಿ ಸಹಾಯವಿಲ್ಲದೇ ಉತ್ತಮ ಆರೋಗ್ಯ ಪಡೆಯಬಹುದು ಎಂದು ಸ್ವಾಮೀಜಿ ಹೇಳಿದರು.

ನಿಸರ್ಗ ಚಿಕಿತ್ಸೆಯಿಂದ ಮನುಷ್ಯ ಆರೋಗ್ಯಪೂರ್ಣವಾಗಿರಬಹುದು. ಈ ಬಗೆಗಿರುವ ವಿಷಯಗಳನ್ನು ತಿಳಿಸಲು ಸಮ್ಮೇಳನ ಅವಶ್ಯವಾಗಿದ್ದು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಸಹಯೋಗದಲ್ಲಿ ಒಂದು ಸಮೂಹ ಕ್ರಾಂತಿ ಆಗಬೇಕಾಗಿದೆ ಎಂದು ಶ್ರೀಗಳು ಹೇಳಿದರು.

ಅ.24ರಿಂದ 26 ರವರೆಗೆ ಕೂಡಲಸಂಗಮದ ಸಭಾಭವನದಲ್ಲಿ ಮೂರು ದಿನಗಳ ಕಾಲ ಸಮ್ಮೇಳನವು ಜರುಗಲಿದ್ದು, 3 ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ನುರಿತ ನಿಸರ್ಗ ತಜ್ಞರಿಂದ ಉಪನ್ಯಾಸಗಳು ನಡೆಯಲಿವೆ. ಈಗಾಗಲೇ ಜಿಲ್ಲಾ ಹಾಗೂ ರಾಜ್ಯ ಸಮ್ಮೇಳನವನ್ನು ಮಾಡಿದ್ದು, ಈಗ ರಾಷ್ಟ್ರ ಮಟ್ಟದಲ್ಲಿ ಸಮ್ಮೇಳನವನ್ನು ಆಯೋಜನೆ ಮಾಡಿ ನಿಸರ್ಗ ಚಿಕಿತ್ಸೆ ಬಗ್ಗೆ ಹೇಳಲಾಗುವುದು ಎಂದು ತಿಳಿಸಿದರು.

ಸಮ್ಮೇಳನದಲ್ಲಿ ಭಾಗವಹಿಸುವವರಿಗೆ ವಸತಿ, ಪ್ರಸಾದ ವ್ಯವಸ್ಥೆ ಮಾಡಲಾಗಿದೆ. ಸಮ್ಮೇಳನಕ್ಕೆ ಮುಖ್ಯಮಂತ್ರಿಗಳು, ಆರೋಗ್ಯ ಸಚಿವರು ಸೇರಿದಂತೆ ಅನೇಕ ಗಣ್ಯರು ಬರಲಿದ್ದಾರೆಂದರು ಎಂದು ಪೂಜ್ಯರು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ರವಿ ಬೋಳಿಶೆಟ್ಟಿ, ಎಸ್.ಆರ್.ಮಠಪತಿ, ಶರಣಪ್ಪ ಅಂಗಡಿ ಇದ್ದರು.

# ಯುವ ಶಕ್ತಿ ದೇಶದ ಬಲು ದೊಡ್ಡ ಶಕ್ತಿ : ಶ್ರೀ ರಂಭಾಪುರಿ ಜಗದ್ಗುರುಗಳು



ಬಸವಕಲ್ಯಾಣ:ಸಪ್ಟಂಬರ್ -23- ಉದಾತ್ತ ಜೀವನ ಮೌಲ್ಯಗಳನ್ನುಸಂಪಾದಿಸಿಕೊಂಡು ಸನ್ಮಾರ್ಗದಲ್ಲಿ ನಡೆಯುವುದೇ ನಿಜವಾದಧರ್ಮ.ಪೂರ್ವಜರ ಅನುಭವದ ನುಡಿಗಳು ಯುವ ಜನಾಂಗಕ್ಕೆಅಮೂಲ್ಯಸಂಪತ್ತು. ಯುವಶಕ್ತಿ ದೇಶದ ಬಲು ದೊಡ್ಡ ಶಕ್ತಿ ಮತ್ತು ಆಸ್ತಿ ಎಂದು ಬಾಳೆಹೊನ್ನೂರುಶ್ರೀರಂಭಾಪುರಿಡಾ. ವೀರಸೋಮೇಶ್ವರಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಮಂಗಳವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ 2ನೇ ದಿನದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನಲ್ಲಿರುವ ಅಸುರೀ ಗುಣಗಳು ನಾಶವಾಗಿ ದೈವಿ ಗುಣಗಳು ಬಲಗೊಳ್ಳಬೇಕು. ಬದುಕಿನ ಹಿರಿಮೆ ಮತ್ತು ರಹಸ್ಯ ಬೋಧಿಸುವುದೇ ನಿಜವಾದ ಧರ್ಮ. ಜನ ಮನ ಜಾಗೃತಿಗೊಳಿಸಲು ಧರ್ಮ ಬೇಕು. ಗುರುಮಾರ್ಗದರ್ಶನಪಡೆಯಲು ಭಾಗ್ಯಬೇಕು. ಮನುಷ್ಯನ ಬುದ್ಧಿ ವಿಕಾರಗೊಳ್ಳುವುದರ ಬದಲು ವಿಕಾಸಗೊಂಡರೆ ನಾಡು ನುಡಿ-ಸಂಸ್ಕೃತಿ ಪರಂಪರೆಗಳ ಬೆಳವಣಿಗೆಸಾಧ್ಯ. ಬಾಳೆಗೊಂದು ಗೊನೆಯಿರುವಂತೆಬಾಳಿಗೊಂದು ಗುರಿಯಿರಬೇಕು. ಪ್ರಗತಿಪರವಾದ ಧ್ಯೇಯೋದ್ದೇಶಗಳು ಮಾನವನ ಶ್ರೇಯಸ್ಸಿಗೆ ದಾರಿದೀಪ. ಮನುಷ್ಯ ತಿಳಿದಿರುವುದಕ್ಕಿಂತ ತಿಳಿಯಬೇಕಾದದು ಬಹಳಷ್ಟಿದೆ. ತನಗಾಗಿ ಬಯಸುವುದು ಜೀವ ಗುಣ. ಎಲ್ಲರಿಗಾಗಿ ಬಯಸುವುದು ದೇವಗುಣ. ಬೆಳೆಯುವ ಯುವಜನಾಂಗಕ್ಕೆಇತಿಹಾಸದಅರಿವು ಮುಖ್ಯ. ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ ಮಹತ್ವದ್ದು. ಬೆಳೆಯುವ ಯುವಜನಾಂಗದಲ್ಲಿ ವೈಚಾರಿಕ ಮನೋಭಾವನೆಗಳು ಬೆಳೆದು ಬರಲಿ ಆದರೆ ನಾಸ್ತಿಕ ಭಾವನೆಗಳು ಬೆಳೆಯಬಾರದು. ಯುವಜನಾಂಗಕ್ಕೆ ಆದರ್ಶ ಗುರಿ ಮತ್ತು ಧ್ಯೇಯವಿದ್ದರೆ ಜೀವನದಲ್ಲಿ ಶ್ರೇಯಸ್ಸು ಕಟ್ಟಿಟ್ಟ ಬುತ್ತಿ. 'ರಂಭಾಪುರಿ ಯುವಸಿರಿ' ಪ್ರಶಸ್ತಿಪುರಸ್ಕೃತರಾದ ಲಾಡವಂತಿ ಗ್ರಾಮದ ವಿಶ್ವಜಿತ ತಾತೇರಾವ ಢವಳೆಯವರ ಜೀವನವೇ ಇದ-ಕ್ಕೊಂದು ನಿದರ್ಶನ. ಅವರ ಜೀವನದ ಸಾಧನೆ ಮತ್ತು ಪ್ರಯತ್ನ ಯುವ ಜನಾಂಗಕ್ಕೆ ಮಾದರಿ. ನವರಾತ್ರಿಯ ಎರಡನೇ ದಿನದಂದು ದೇವಿಯುಬ್ರಹ್ಮಚಾರಿಣಿಸ್ವರೂಪದಲ್ಲಿ ಪೂಜಿಸಲ್ಪಡುತ್ತಾಳೆ. ಬ್ರಹ್ಮಚಾರಿಣಿ ದೇವಿ ಆರಾಧನೆಯಿಂದ ಮನಸ್ಸು ದೇಹ ಮತ್ತು ಇಂದ್ರಿಯಗಳ ಮೇಲೆ ಪ್ರಭುತ್ವ ಸಾಧಿಸುವ ಶಕ್ತಿ ಬರುತ್ತದೆ. ಕಷ್ಟಕಾಲದಲ್ಲಿ ಮಾನಸಿಕ ಸಮತೋಲನ ಮತ್ತು ಆತ್ಮ ವಿಶ್ವಾಸ ಉಳಿಸಿಕೊಳ್ಳಲು ನೆರವಾಗುತ್ತದೆ ಎಂದರು. ಬೆಳಗುಂಪಾ ಹಿರೇಮಠದ ಅಭಿನವ ಪರ್ವತೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಅಜ್ಞಾನದಲ್ಲಿ ಮಲಗಿದ ಜನರನ್ನು ಎಚ್ಚರಿಸಲು ಕಾಲ ಕಾಲಕ್ಕೆ ಆಚಾರ್ಯರು ಋಷಿಮುನಿಗಳು, ಶರಣ ಸಂತ ಮಹಂತರು ಅವತರಿಸಿ ಬಾಳಿಗೆ ಬೆಳಕು ತೋರಿದ್ದಾರೆ. ದೈವೀ ಗುಣಗಳ ಬೆಳೆಗೆ ಸುಜ್ಞಾನವೇ ಭೂಮಿಯಾದರೆಅಸುರೀಗುಣಗಳಿಗೆ ಅಜ್ಞಾನವೇ ಭೂಮಿಯಾಗಿದೆ. ಸತ್ಯ ಶುದ್ಧವಾದ ಜೀವನ ಮೌಲ್ಯಗಳನ್ನು ಪರಿಪಾಲಿಸಿಕೊಂಡು ಯುವ ಜನಾಂಗ ಬೆಳೆದರೆ ಬೆಲೆ ಮತ್ತು ನೆಲೆ ಪ್ರಾಪ್ತವಾಗುತ್ತದೆ. ಯುವ ಜನಾಂಗದಲ್ಲಿ ಧರ್ಮ ಪ್ರಜ್ಞೆ ಮತ್ತು ರಾಷ್ಟ್ರ ಪ್ರಜ್ಞೆ ಜಾಗೃತಗೊಳ್ಳಬೇಕು ಎಂದರು. ಹುಡಗಿ ಸಂಸ್ಥಾನ ಹಿರೇಮಠದ ವಿರೂಪಾಕ್ಷ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಸಮ್ಮುಖ ವಹಿಸಿದ ಶ್ರೀನಿವಾಸ ಸರಡಗಿ ಡಾ॥ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಮನುಷ್ಯ ಅರಿತು ಬಾಳುವುದರಲ್ಲಿ ಸುಖ ಶಾಂತಿಯಿದೆ. ಬದುಕಿನ ಉತ್ಕರ್ಷತೆ ಮತ್ತು ಶ್ರೇಯಸ್ಸಿಗೆ ಒಳ್ಳೆಯವರ ನೆರಳಿನಲ್ಲಿ ಬಾಳಿದರೆ ಜೀವನ ವಿಕಾಸಗೊಳ್ಳುವುದು. ದುರ್ಜನರ ಒಡನಾಟದಲ್ಲಿ ಬಾಳಿದರ ಬದುಕು ಸರ್ವ ನಾಶವಾಗುತ್ತದೆ ಎಂದು ಎಚ್ಚರಿಸಿದರು. ಪ್ರಾಸ್ತಾವಿಕ ಮಾತನಾಡಿದ ಚಿಣಮಗೇರಿಯ ವೀರಮಹಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಗುಣವಿಲ್ಲದ ರೂಪ, ಶೀಲವಿಲ್ಲದವನ ಕುಲ, ಸಿದ್ಧಿ ಪಡೆಯದವನ ವಿದ್ಯೆ, ಅನುಭವಿಸದೇ ಇರುವ ಸಂಪತ್ತು ವ್ಯರ್ಥ. ಹುಟ್ಟು ಸಾವುಗಳ ದು:ಖದಿಂದ ಪಾರು ಮಾಡುವ ವಿದ್ಯೆಯೇ ನಿಜವಾದ ವಿದ್ಯೆಯೆಂದರು. ಪ್ರಶಸ್ತಿ ಪ್ರದಾನ: ಲಾಡವಂತಿಯ ವಿಶ್ವಜಿತ ತಾತೇರಾವ ಢವಳೆ ಇವರಿಗೆ 'ರಂಭಾಪುರಿ ಯುವಸಿರಿ' ಪ್ರಶಸ್ತಿ ಪ್ರದಾನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು. ತ್ರಿಪುರಾಂತಕದ ಡಾ.ಅಭಿನವಘನಲಿಂಗರುದ್ರಮುನಿ ಶಿವಾಚಾರ್ಯರು ಪ್ರಶಸ್ತಿ ವಾಚನ ಮಾಡಿದರು. ಬೀದರ ಲೋಕಸಭಾ ಕ್ಷೇತ್ರದ ಸಂಸದ ಸಾಗರ ಖಂಡ್ರೆ ಮಾತನಾಡಿ, ಶ್ರೀ ರಂಭಾಪುರಿ ಜಗದ್ಗುರುಗಳವರ ದಸರಾ ಧರ್ಮ ಸಮಾರಂಭ ಯುವಕರಿಗೆ ಮಾರ್ಗದರ್ಶನ ನೀಡುತ್ತ ಬಂದಿದೆ. ಯುವಕರೂ ಸಹ ಸಂಸ್ಕಾರವಂತರಾಗಬೇಕು. ಪ್ರತಿಯೊಬ್ಬರೂ ಸಹೋದರ ಭಾವದಿಂದ ಬಾಳಿದಾಗ ಸಮಾಜದಲ್ಲಿ ಸದ್ಭಾವನೆ ಬೆಳೆಯಲು ಸಾಧ್ಯವೆಂದರು.

ಮಾಜಿ ಎಮ್.ಎಲ್.ಸಿ. ವಿಜಯಸಿಂಗ ಧರ್ಮಸಿಂಗ, ಮಾಜಿ ಸಚಿವ ಬಸವರಾಜ ಪಾಟೀಲ ಅಟ್ಟೂರ, ಕೆ.ಪಿ.ಸಿ.ಸಿ. ಸಹಕಾರ ವಿಭಾಗದ ಅಧ್ಯಕ್ಷ ಧನರಾಜ ತಾಳಂಪಳ್ಳಿ, ಬೀದರ ಕೆಪಿಸಿಸಿ ಘಟಕದ ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ, ಬಸವೇಶ್ವರ ದೇವಸ್ಥಾನ ವಿಶ್ವಸ್ಥ ಸಮಿತಿ ಅಧ್ಯಕ್ಷ ಶಶಿಕಾಂತ ದುರ್ಗೆ, ಬಸವಕಲ್ಯಾಣದ ಆನಂದ ದೇವಪ್ಪ, ಬಸವರಾಜ ಸ್ವಾಮಿ ವಿಶ್ವಡೆವಲಪರ್ಸ, ಅರ್ಜುನ ಕನಕ, ಮನೋಹರ ಮೈಸೆ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಗೌರವಗುರುರಕ್ಷೆ:ಡೋಂಗರಗಾಂವ ರೇಣುಕಾಶ್ರಮದ ಉದಯ ರಾಜೇಂದ್ರ ಶಿವಾಚಾರ್ಯರು, ಚಿಟಗುಪ್ಪ ಸಂಸ್ಥಾನ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಮುತ್ಯಾನ ಬಬಲಾದನ ಗುರುಪಾದಲಿಂಗ ಸ್ವಾಮಿಗಳು, ಕಿಟ್ಟಾ ಸಂಸ್ಥಾನ ಹಿರೇಮಠದ ಸಿದ್ದೇಶ್ವರ ಶಿವಾಚಾರ್ಯರು, ಕಲಬುರ್ಗಿಯ ಗಿರಿಯಪ್ಪ ಮುತ್ಯಾ ಗಣೇಶ, ಶ್ರೀನಿವಾಸ ಸರಡಗಿಯ ಅಪ್ಪರಾವ ದೇವಿಮುತ್ಯಾ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗೌರವ ಗುರುರಕ್ಷೆ ನೀಡಿ ಆಶೀರ್ವದಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಬಸವಕಲ್ಯಾಣ ವೀರಶೈವ ಸದ್ಬೋಧನಾ ಸಂಸ್ಥೆ ಅಧ್ಯಕ್ಷ ಡಾ॥ ಬಸವರಾಜ ಸ್ವಾಮಿ ಇವರಿಂದ ಸ್ವಾಗತ, ಬಸವಕಲ್ಯಾಣದ ಕು.ಸ್ನೇಹ ಸರಡಗಿ ಇವರಿಂದ ಭರತನಾಟ್ಯ ಪ್ರದರ್ಶನ ಜರುಗಿತು. ಗುರುಲಿಂಗಯ್ಯಾ ಹಿತ್ತಲಶಿರೂರ ಮತ್ತು ರಾಜಶ್ರೀ ದಿಲೀಪಸ್ವಾಮಿ ಇವರಿಂದ ಸಂಗೀತ ಜರುಗಿತು. ಶಿವಮೊಗ್ಗದ ಶಾಂತಾ ಆನಂದ ಹಾಗೂ ರಮೇಶ ರಾಜೋಳೆ ಶಿವಪೂರ ಇವರು ನಿರೂಪಿಸಿದರು. ಶ್ರೀ ಚನ್ನಬಸವೇಶ್ವರ ಹಿರೇಮಠ ಸಂಸ್ಥಾನ ಸುಕ್ಷೇತ್ರ ಹಾರಕೂಡ ಇವರಿಂದ ಅನ್ನ ದಾಸೋಹ ಜರುಗಿತು.

## ಕೇಕ್ ಕತ್ತರಿಸುವ ಮೂಲಕ ಪೌರಕಾರ್ಮಿಕರ ದಿನಾಚರಣೆ

# ಪೌರ ಕಾರ್ಮಿಕರ ಸೇವೆ ಅನನ್ಯ:- ಬಗ್ದಲಕರ್





**ಮಲ್ಲಮ್ಮ ನುಡಿ ವಾರ್ತೆ**

ಚಿಟಗುಪ್ಪ:- ಪಟ್ಟಣದ ಸ್ವಚ್ಛತೆ, ನೈರ್ಮಲ್ಯ, ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಸೇವೆ ಅನನ್ಯವಾಗಿದೆ ಎಂದು ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್ ಹೇಳಿದರು. ಪಟ್ಟಣದ ಪುರಸಭೆಯಲ್ಲಿ ಮಂಗಳವಾರ ಹಮ್ಮಿಕೊಂಡಿದ ಪೌರಕಾರ್ಮಿಕರ ದಿನಾಚರಣೆಯ ಅಂಗವಾಗಿ ಮಹಾತ್ಮ ಗಾಂಧಿಯವರ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಕೇಕ್ ಕತ್ತರಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪೌರ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದು, ಯೋಜನೆಗಳ ಸದುಪಯೋಗ ಪಡೆದು-ಕೊಂಡು ಉತ್ತಮ ಬದುಕು ರೂಪಿಸಿಕೊಳ್ಳಬೇಕು ಹಾಗೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣಕ್ಕೆ ಒತ್ತು ನೀಡಿ ಉನ್ನತ ಶಿಕ್ಷಣ ಒದಗಿಸುವುದರ ಮೂಲಕ ಅವರ ಬದುಕು ಮತ್ತು ಭವಿಷ್ಯವನ್ನು ಅತ್ಯುತ್ತಮವಾಗಿ ರೂಪಿಸಬೇಕು ಎಂದರು. ತಹಶೀಲ್ದಾರ್ ಮಂಜುನಾಥ ಪಂಚಾಳ ಮಾತನಾಡಿ, ಮಹಾಮಾರಿ ಕರೋನಾ ಸಮಯದಲ್ಲಿಯೂ ಪೌರ ಕಾರ್ಮಿಕರು ತಮ್ಮ ಕೆಲಸ ಮಾಡುವುದನ್ನು ನಿಲ್ಲಿಸಿರಲಿಲ್ಲ. ಅವರನ್ನು ಕಂಡರೆ ದೂರು ಸರಿಯುತ್ತಿದ್ದರು. ಅವರು ಅಂದು ಪಟ್ಟಣ ಸ್ವಚ್ಛಗೊಳಿಸಿದ್ದರಿಂದಲೇ ಇಂದು ನಾವು ಆರೋಗ್ಯವಂತರಾಗಿರಲು ಸಾಧ್ಯವಾಗಿದೆ ಎಂದರು. ಸ್ವಂತ ಮನೆಯನ್ನು ಸ್ವಚ್ಛ ಮಾಡಲು ಕುಟುಂಬದ ಸದಸ್ಯರು ಒದ್ದಾಡುವ ಇಂಥ ದಿನಗಳಲ್ಲಿ ಇಡೀ ಊರಿನ ಸ್ವಚ್ಛತೆ ಮಾಡುವ ಅದರಲ್ಲೂ ಗಬ್ಬು ನಾರುವ ಹೊಲಸಿನ ಜತೆಗೆ ಒದ್ದಾಡುವ ಪೌರ ಕಾರ್ಮಿಕರ ಕಾರ್ಯ ಸದಾ ಸ್ಮರಣೀಯ ಎಂದರು. ಅನೀಲಕುಮಾರ್ ಸಿಂಧೆ ಮಾತನಾಡಿ, ಪೌರ ಕಾರ್ಮಿಕರು ತಮ್ಮ ಕರ್ತವ್ಯದ ಜೊತೆಗೆ ಸುರಕ್ಷಾ ಪರಿಕರಗಳನ್ನು ಉಪಯೋಗಿಸಿ ಮುಂಜಾಗ್ರತೆಯಿಂದ ಕಾರ್ಯನಿರ್ವಹಿಸುವ ಮೂಲಕ ಆರೋಗ್ಯ ಕಾಪಾಡಿಕೊಳ್ಳುವಂತೆ ತಿಳಿಸಿದರು. ನಂತರ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಪೌರ ಕಾರ್ಮಿಕರಿಗೆ ಬಹುಮಾನ ವಿತರಿಸಿದರು. ಇದಕ್ಕೂ ಮುನ್ನ ಗಾಂಧಿ ವೃತ್ತದಿಂದ ಪುರಸಭೆ ಸಭಾಂಗಣದ ವರೆಗೆ ಭವ್ಯ ಮೆರವಣಿಗೆ ಜರುಗಿತು. ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ನಸೀರ್ ಖಾನ, ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಸದಸ್ಯರಾದ ಮುಜಾಫರ್ ಪಟೇಲ್, ಬಾಬಾ ಆರ್.ಸಿ.ಸಿ., ರಾಜದೀಪ ಜಾಬಾ, ರೇವಣ್ಣಪ್ಪ ಭುತ್ತಾಳೆ, ತಬ್ಬರೇಜ್, ಹಬೀಬ್, ಪೌರಕಾರ್ಮಿಕರ ಸಂಘದ ತಾಲೂಕಾಧ್ಯಕ್ಷ ಕಂಟೆಪ್ಪ, ಉಪಾಧ್ಯಕ್ಷ ಧನರಾಜ ನೆಳಕುಡಕರ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಶಿವಕುಮಾರ್ ಸ್ವಾಮಿ, ಪ್ರಮುಖರಾದ ಮಹ್ಮದ್ ಷರೀಫ್, ಭಾಸ್ಕರ್, ಶಾಮರಾವ ಭುತ್ತಾಳೆ, ಪ್ರವೀಣ, ಸಿಬ್ಬಂದಿಗಳಾದ ವಾಣಿ ಕುಲಕರ್ಣಿ, ವಿಜಯಕುಮಾರ್, ಖಾಜಾಮಿಯಾ, ವಿಜಯದೀಪ, ರವಿಕುಮಾರ್ ಸ್ವಾಮಿ, ಸಂತೋಷ ಬಿರಾದಾರ್, ಚಿದಾನಂದ ಪತ್ರಿ, ಆನಂದ, ಕವಿತಾ, ಸರೋಜನಿ, ಸಂತೋಷ್ ಹಳ್ಳಿಖೇಡ್, ಬಸವರಾಜ ಬಿರಾದಾರ್, ಸೂರ್ಯಕಾಂತ ಕುಲಕರ್ಣಿ, ರಾಜಕುಮಾರ ಗುತ್ತೆದಾರ್, ಸಚಿನ, ನಥಾನಿಯಲ್, ಅಶ್ವಿನಿ ಚವ್ಹಾಣ, ಮಲ್ಲಮ್ಮ, ಇಲಾಹೀ, ಬಕ್ಕಣ್ಣ ಜಾಬಾ, ಭೀಮಶಾ ಕಾಂಬಳೆ, ರಾಜು ತೆಲಂಗ, ರೋಷನ್, ಬಶೀರ್, ಸೇರಿದಂತೆ ಪೌರ ಕಾರ್ಮಿಕರು ಉಪಸ್ಥಿತರಿದ್ದರು.

> ಪೌರಕಾರ್ಮಿಕರಿಗೆ ವಿಶ್ರಾಂತಿ ಪಡೆಯಲು ಹಳೆಯ ಪುರಸಭೆ ಕಟ್ಟಡ ಮೇಲೆ ವಿಶ್ರಾಂತಿ ಭವನ ಕಟ್ಟಡ ನಿರ್ಮಿಸಿದ್ದು, ವಿಶ್ರಾಂತಿ ಭವನ ಕಟ್ಟಡದಲ್ಲಿ ಪುರುಷ ಮತ್ತು ಮಹಿಳಾ ಪೌರಕಾರ್ಮಿಕರಿಗೆ ಪ್ರತ್ಯೇಕ ವಿಶ್ರಾಂತಿ ಕೋಣೆ ಮತ್ತು ಸಮವಸ್ತ್ರ ಬದಲಾಯಿಸುವ ಕೋಣೆಗಳು ಪೌರಕಾರ್ಮಿಕರಿಗೆ ಹಸ್ತಾಂತರಿಸಿದರು. ಕಾರ್ಮಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು.
>
> -ದಿಲೀಪಕುಮಾರ್ ಬಗ್ದಲಕರ್

## ಭವಾನಿ ದೇವಸ್ಥಾನದಲ್ಲಿ ಅನ್ನದಾಸೋಹ

# ಸಡಗರದಿಂದ ಜರುಗುತ್ತಿರುವ ನವರಾತ್ರಿ ಮಹೋತ್ಸವ





**ಮಲ್ಲಮ್ಮ ನುಡಿ ವಾರ್ತೆ**

ಹುಮನಾಬಾದ:ಪಟ್ಟಣದ ಭವಾನಿ ದೇವಸ್ಥಾನದಲ್ಲಿ ನವರಾತ್ರಿ ಮಹೋತ್ಸವ ಜರುಗುತ್ತಿದ್ದು, ವಿವಿಧಹಳ್ಳಿ-ಹಳ್ಳಿಗಳಿಂದಹಾಗೂ ಪಟ್ಟಣದಬಡಾವಣೆಗಳಿಂದಭಕ್ತರು ತೆರಳಿ ಜೈ ಭವಾನಿ ಮಾತೆಯ ದರ್ಶನ ಪಡೆಯುತ್ತಿದ್ದಾರೆ. ಮಂಗಳವಾರ ನಡೆದ ಭವಾನಿ ದೇವಸ್ಥಾನದಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು. ದೇವಸ್ಥಾನದಲ್ಲಿ ಮಂಗಳವಾರ ರಂದು ಬೆಳಿಗ್ಗೆಯಿಂದ ಆರಂಭಗೊಂಡ ಪೂಜೆ ಮಧ್ಯಾಹ್ನದವರೆಗೂ ನಡೆಯಿತು. ಆ ನಂತರ ಕುಂಕುಮರ್ಚನಾ, ಪುಷ್ಪಾರ್ಚನೆ ಹಾಗೂ ನೈವಿದ್ಯ ಅರ್ಪಿಸಲಾಯಿತ್ತು. ಭಕ್ತಾಧಿಗಳು ಸಾಲಲ್ಲಿ ನಿಂತು ಭವಾನಿ ಮಾತೆಯ ದರ್ಶನ ಪಡೆದು ಪುನಿತರಾದರು. ಹಾಗೂ ನವರಾತ್ರಿ ಹಬ್ಬದ ನಿಮಿತ್ತ ಶ್ರೀಮತಿ ಸಾವಿತ್ರಿ ಪತಿ ರುದ್ರ ಸ್ವಾಮಿ ಗಡವಂತಿ ಪರಿವಾರದಿಂದ ಬೆಳಿಗ್ಗೆಯಿಂದ ಸಾಯಂಕಾಲದವರೆಗೂ ವಿಶೇಷವಾಗಿ ಭಕ್ತಾಧಿಗಳಿಗೆ ಅನ್ನದಾಸೋಹ ಏರ್ಪಡಿಸಿದರು. ಭಕ್ತರು ಅನ್ನದಾಸೋಹದಲ್ಲಿ ಪಾಲ್ಗೊಂಡು ಪ್ರಸಾದ ಸ್ವೀಕರಿಸಿ ಪುನೀತರಾದರು. ಈ ಸಂದರ್ಭದಲ್ಲಿ ವೆಂಕಟ ಕಟ್ಟಿ, ಕುಮಾರ ಸ್ವಾಮಿ, ಆನಂದ ಪಸರ್ಗಿ, ದೇವೀಂದ್ರ ಪೂಜಾರಿ, ಮರಿಶಾಂತಯ್ಯ ಉಪಸ್ಥಿತರಿದ್ದರು.

# ಕಣಜಿ ಪಿಕೆಪಿಎಸ್ ವಾರ್ಷಿಕ ಮಹಾಸಭೆ ಯಶಸ್ವಿಯಾಗಿ ಜರುಗಿತು



**ಮಲ್ಲಮ್ಮ ನುಡಿ ವಾರ್ತೆ**

ಹುಮನಾಬಾದ್:- ಭಾಲ್ಕಿ ತಾಲೂಕಿನ ಕಣಜಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2024-25 ನೇ ಸಾಲಿನ ವಾರ್ಷಿಕ ಮಹಾಸಭೆಯು ಸಂಘದ ಅಧ್ಯಕ್ಷ ಶರಣಪ್ಪ ಸಂಗನಬಶೆಟ್ಟಿ ಇವರ ಅಧ್ಯಕ್ಷತೆಯಲ್ಲಿ ಜರುಗಿತು. ಈ ವರ್ಷ 26, 26, 739.58 ರೂಪಾಯಿ ನಿವ್ವಳ ಲಾಭ ಸಂಘ ಪಡೆದಿದೆ ಎಂದು ಸಂಘದ ಅಧ್ಯಕ್ಷ ಶರಣಪ್ಪ ಸಂಗನಬಶೆಟ್ಟಿ ಅವರು ತಿಳಿಸಿದರು. ರಸಗೊಬ್ಬರ ಕೊರತೆ ಇರುವುದರಿಂದ ರೈತರಿಗೆ ಚೀಟಿ ಎತ್ತುವ ಮೂಲಕ ರಸಗೊಬ್ಬರಕ್ಕೆ ಆಯ್ಕೆ ಮಾಡಲಾಯಿತ್ತು. 2024-25ನೇ ಸಾಲಿನ ಜಮಾ ಖರ್ಚಿನ ವಿವರ ಸಂಘದ ಮುಖ್ಯ ಕಾರ್ಯನಿರ್ವಾಹಕ ಸಿದ್ರಾಮಪ್ಪ ವಾರ್ಷಿಕ ಮಹಾಸಭೆಯಲ್ಲಿ ವಿವರಿಸಿದರು. ವಾರ್ಷಿಕ ಮಹಾಸಭೆಯಲ್ಲಿ ಸಂಘದ ಉಪಾಧ್ಯಕ್ಷ ಸೂರ್ಯಕಾಂತ್ ಮಂಗಲಗಿ, ಕಾರ್ಯಕಾರಿ ಮಂಡಳಿ ಸದಸ್ಯರುಗಳಾದ ಅಶೋಕ್ ಘಾಳೆಪ್ಪ, ಚೆನ್ನಯ್ಯ, ಸಂತೋಷ್, ಬಸವರಾಜ್, ಸಿದ್ದರಾಮ್, ನಸೀರಮಿಯಾ, ವಿಜಯಕುಮಾರ್, ಸುಜಾತ, ಲಲಿತಾಬಾಯಿ, ಗಣಪತಿ ಸೇರಿದಂತೆ ರೈತರು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಂಘಟನೆಗೆ ಹೆಚ್ಚು ಆದ್ಯತೆ ನೀಡಿ: ಕೆ.ವೀರೇಶ




> 24ನೇ ಕಲ್ಯಾಣ ಪರ್ವ ಉತ್ಸವದ ಅಂಗವಾಗಿ ಕರಪತ್ರಗಳನ್ನು ಬಿಡುಗಡೆ ಮಾಡಲಾಯಿತು.

**ಮಲ್ಲಮ್ಮ ನುಡಿ ವಾರ್ತೆ**

ಚಿಟಗುಪ್ಪ: ಸಂಘಟನೆಗೆ ಹೆಚ್ಚು ಆದ್ಯತೆ ನೀಡಿ, ಬಸವ ತತ್ವ ಮನೆ ಮನಗಳಿಗೆ ಪ್ರಚಾರ ಮಾಡಬೇಕು ಎಂದು ರಾಷ್ಟ್ರೀಯ ಬಸವದಳದ ರಾಜ್ಯಾಧ್ಯಕ್ಷ ಕೆ. ವೀರೇಶ ಚಳ್ಳಕೇರಿ ತಿಳಿಸಿದರು. ತಾಲೂಕಿನ ಕಂದಗೋಳ ಗ್ರಾಮದ ರಾಷ್ಟ್ರೀಯ ಬಸವ ದಳದ ಕಾರ್ಯಾಲಯದಲ್ಲಿ ಹಮ್ಮಿಕೊಂಡ ತಾಲೂಕು ಸಂಘಟನಾ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು

ಬಸವದಳದ ಪ್ರಮುಖ ಉದ್ದೇಶಗಳ ಬಗ್ಗೆ ಪ್ರಸ್ತಾಪಿಸಿ, ಅವುಗಳನ್ನು ಕಡ್ಡಾಯವಾಗಿ ಪಾಲಿಸಿ, ಜಾರಿಗೆ ತರುವ ಕೆಲಸ ಆಗಬೇಕು. ನಿರಂತರವಾಗಿ ತಾಲೂಕಿನಾದ್ಯಂತ ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳಿಗೊಮ್ಮೆ ಸಭೆ ಆಗಲೇಬೇಕು. ಸದಸ್ಯತ್ವ ಅಭಿಯಾನ ನಿರಂತರವಾಗಿ ನಡೆಸಬೇಕು.

ಬಸವ ತತ್ವ ಬೆಳೆಸುವ ಕಾಯಕ ಪ್ರಾಮಾಣಿಕವಾಗಿ ಮಾಡಬೇಕೆಂದು ಹೇಳಿದರು. ಸಾನಿಧ್ಯ ವಹಿಸಿದ್ದ, ಬಸವ ಧರ್ಮ ಪೀಠದ ಸಾಧಕರಾದ

ಪರಮ ಪೂಜ್ಯ ನಿಮಿಷಾನಂದ ಸ್ವಾಮಿಜಿಗಳು ಮಾತನಾಡಿ, ಲಿಂಗೈಕ್ಯ ಲಿಂಗಾನಂದ ಸ್ವಾಮಿಜಿಗಳು ಹಾಗೂ ಮಾತಾಜಿ ರವರ ನಿಸ್ವಾರ್ಥ ಸೇವೆ, ತ್ಯಾಗದ ಪರಿಣಾಮದಿಂದ ಇಂದು ರಾಷ್ಟ್ರೀಯ ಬಸವ ದಳ ಸಂಘಟನೆ ರಾಷ್ಟ್ರ ಮಟ್ಟದಲ್ಲಿ ಹೆಮ್ಮರವಾಗಿ ಬೆಳೆದು ನಿಂತಿದೆ. ಅವರುಗಳು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಬೇಕು. ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಪ್ರತಿ ದಿನ ಕೆಲಸ ಮಾಡಲು ತಿಳಿಸಿದರು. ತಾಲೂಕಾಧ್ಯಕ್ಷ ರಾಜಶೇಖರ ದೇವಣಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ಸಭೆಯಲ್ಲಿ ಸಾಹಿತಿ ಸಂಗಮೇಶ ಎನ್ ಜವಾದಿ, ಚಂದ್ರಶೇಖರ ತಂಗಾ, ವೀರೇಶ ಮಠಪತಿ, ಜಗನ್ನಾಥ ದೇವಣಿ, ಬಂಡೆಪ್ಪಾ ಮೂಲಗೆ, ಅನೀಲಕುಮಾರ ಸಿಂದಗಿರಿ, ಬಸವಂತರಾವ ಮಾಲಿ ಪಾಟೀಲ, ರವೀಂದ್ರ ಪವಾಡಶೆಟ್ಟಿ, ಶಿವರಾಜ್ ಸಜ್ಜನ್ ಶೆಟ್ಟಿ , ಪ್ರವೀಣ ಕಲ್ಯಾಣಿ, ಮಲ್ಲಶೆಟ್ಟಿ ಧೂಳಾ, ಶರಣಪ್ಪಾ ಚಿಟನ್ನಳ್ಳಿ, ಶ್ರೀನಿವಾಸ ಧೂಮಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಅಖಿಲ ಕರ್ನಾಟಕ ಶಾಲಾ ಕಾಲೇಜುಗಳ ನೌಕರರ ಸಂಘದ ಜಿಲ್ಲಾ ಘಟಕ ಪ್ರಕಟಣೆಯ ಸಂಧರ್ಭದಲ್ಲಿ ರಾಜ್ಯಧ್ಯಕ್ಷರಾದ ಜಿ. ಹನುಮಂತಪ್ಪ ಹೇಳಿಕೆ

# ರಾಜ್ಯ ಸರ್ಕಾರದಿಂದ ಶೀಘ್ರವೇ ಪಿಂಚಣಿ ಜಾರಿ



**ಮಲ್ಲಮ್ಮ ನುಡಿ ವಾರ್ತೆ**

ಬೀದರ: ಶ್ರೀಮತಿ ಇಂದಿರಾಬಾಯಿ ಗುರುತಪ್ಪಶೆಟಕಾರ ಪ್ರೌಢ ಶಾಲೆಯಲ್ಲಿ ಅಖಿಲ ಕರ್ನಾಟಕ ಅನುದಾನಿತ ಶಾಲಾ ಕಾಲೇಜುಗಳ ನೌಕರರ ಸಂಘದ ಸಂಯುಕ್ತಾಶ್ರಯದಲ್ಲಿ ಸಭೆ ಜರುಗಿತ್ತು.

ಸಭೆಯ ಅಧ್ಯಕ್ಷತೆಯನ್ನು ಇಂದು ಜಿಲ್ಲೆಗೆ ಅಖಿಲ ಕರ್ನಾಟಕ ಶಾಲಾ ಕಾಲೇಜುಗಳ ನೌಕಕರ ಸಂಘದ ರಾಜ್ಯಧ್ಯಕ್ಷರಾದ ಜಿ. ಹನುಮಂತಪ್ಪ ವಹಿಸಿದರು. ರಾಜ್ಯಧ್ಯಕ್ಷರ ಅಧ್ಯಕ್ಷತೆಯಲ್ಲಿ ಪಿಂಚಣಿ ಕುರಿತು ಸುಧೀರ್ಘ ಚರ್ಚೆ ನಡೆಸಿದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಅನುದಾನಿತ ಶಾಲಾ ಕಾಲೇಜು ನೌಕರರ ಸಂಘದ ರಾಜ್ಯಧ್ಯಕ್ಷರಾದ ಜಿ. ಹನುಮಂತಪ್ಪ ಅವರು ರಾಜ್ಯ ಸರಕಾರವು ಶೀಘ್ರದಲ್ಲೇ ನೌಕರರಿಗೆ ಪಿಂಚಣಿ ನೀಡಲಿದೆ, ಒಂದು ವೇಳೆ ವಿಳಂಬವಾದಲ್ಲಿ ಉಗ್ರಹೋರಾಟಕ್ಕೆ ಮುಂದಾಗಬೇಕಾಗುತ್ತದೆ ಎಂದು ಸಂಘದ ಸದಸ್ಯರಿಗೆ ಕಿವಿಮಾತು ಹೇಳಿದರು.

ಇದೇ ಸಂಧರ್ಭದಲ್ಲಿ ಅಖಿಲ ಕರ್ನಾಟಕ ಅನುದಾನಿತ ಜಿಲ್ಲಾ ಘಟಕ ಪ್ರಕಟಿಸಿ ನಾಮ ನಿರ್ದೇಶನ ಹೊರಡಿಸಲಾಯಿತು. ಈ ಜಿಲ್ಲಾ ಘಟಕದ ಗೌರವಧ್ಯಕ್ಷರಾಗಿ ಮಲ್ಲಿಕಾರ್ಜುನ ಕನಕಟ್ಟೆ, ಜಿಲ್ಲಾಧ್ಯಕ್ಷರಾಗಿ ಪ್ರಶಾಂತರಾಗಾ, ಗೌರವಕಾರ್ಯದರ್ಶಿಯಾಗಿ ಸುರ್ಯಕಾಂತಐನಾಪೂರೆ, ಖಜಾಂಚಿಯಾಗಿ ಪರಮೇಶ್ವರ ಬಿರಾದಾರ, ಉಪಾಧ್ಯಕ್ಷರಾಗಿ ಗಣೇಶ ಬಿರಾದಾರ, ಅಶೋಕ ತೆಲಂಗೆ, ಮಹಮ್ಮದ್ ಹನೀಫ್, ಸಂಘಟನಾ ಕಾರ್ಯದರ್ಶಿಯಾಗಿ ಶ್ರೀನಿವಾಸ ಬರೂರಕರ್, ಮಹಿಳಾ ಸಂಘಟನಾ ಕಾರ್ಯದರ್ಶಿಯಾಗಿ ದೀಪ ರಾಗಾ, ಸಹ ಕಾರ್ಯದರ್ಶಿಯಾಗಿ ಲಕ್ಷ್ಮಣ್ ಪೂಜಾರಿ, ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ಪಾಂಡುರಂಗ ಮಾಸಿಮಡೆಯವರನ್ನು ರಾಜ್ಯಧ್ಯಕ್ಷರಾದ ಜಿ. ಹನುಮಂತಪ್ಪ ಅವರ ನೇತೃತ್ವದಲ್ಲಿ ನೇಮಕ ಮಾಡಲಾಯಿತು.

ಈ ಸಂಧರ್ಭದಲ್ಲಿ ಅಖಿಲ ಕರ್ನಾಟಕ ಶಾಲಾ ಕಾಲೇಜುಗಳ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಡೊಣ್ಣುರು, ವಿಜಯಕುಮಾರ ಪಾಟೀಲ ಯರನಳ್ಳಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷರಾದ ಸುಧೀರ ರಾಗಾ, ಪ್ರಮುಖರಾದ ರಮೇಶ ಪಾಟೀಲ, ರಾಜಕುಮಾರ ಗಾದಾ, ಬಸವರಾಜ ಹೆಗ್ಗೆ, ರಾಜಕುಮಾರ ಹೆಗ್ಗೆ, ಮಲ್ಲಯ್ಯ ಸ್ವಾಮಿ, ಕಾಮನಂದಿನಿ, ನಿಲವಾ, ಶಿವಕುಮಾರ, ಜೆಟ್ಟೆಪ್ಪಾ ಪೂಜಾರಿ, ಪ್ರಭಣ್ಣ ಕಾಳಗೊಂಡ, ಸಂತೋಷ ಸಜ್ಜನ, ಸೇರಿದಂತೆ ಇನ್ನೂ 100ಕ್ಕೂ ಹೆಚ್ಚು ಜನರು ಭಾಗವಹಿಸಿ ಸಂಘಕ್ಕೆ ಬಲವರ್ಧನೆ ನೀಡಿದರು.

ಸಂಚಾಲನೆ ಸೂರ್ಯಕಾಂತ ಐನಾಪುರೆ, ಸ್ವಾಗತವನ್ನು ನಾಗನಾಥ ಬಿರಾದರ, ವಂದನಾರ್ಪಣೆಯನ್ನು ಡಾ. ಚಂದ್ರಕಾಂತ ಭತಮುರ್ಗೆ ನಡೆಸಿಕೊಟ್ಟರು ಎಂದು ಅಖಿಲ ಕರ್ನಾಟಕ ಶಾಲಾ ಕಾಲೇಜು ನೌಕರರ ಸಂಘದ ಉಪಾಧ್ಯಕ್ಷರಾದ ವಿಜಯಕುಮಾರ ಪಾಟೀಲ ಯರನಳ್ಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜವಾಹರ ನವೋದಯ ವಿದ್ಯಾಲಯ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.23-ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಚಿಕ್ಕಜೋಗಿಹಳ್ಳಿಯಲ್ಲಿರುವ ಜವಾಹರ ನವೋದಯ ವಿದ್ಯಾಲಯದ 9ನೇ ಮತ್ತು 11ನೇ ತರಗತಿಯ (2026-27ನೇ ಸಾಲಿಗಾಗಿ) ಪ್ರವೇಶ ಪರೀಕ್ಷೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಅಕ್ಟೋಬರ್ 07 ಕೊನೆಯ ದಿನವಾಗಿದೆ.

ಆಸಕ್ತರು ಆನ್ ಲೈನ್ ವೆಬ್‌ಸೈಟ್: 9ನೇ ತರಗತಿಗಾಗಿ- https://cbseitms.nic.in/2025/nvsix9/registrationclassIX/registrationclassIX ಮತ್ತು 11ನೇ ತರಗತಿಗಾಗಿ- https://cbseitms.nic.in/2025/nvsxi_11/registrationclassXI/registrationclassXI ಗೆ ಭೇಟಿ ನೀಡಬಹುದು ಎಂದು ಪ್ರಾಚಾರ್ಯರಾದ ಸುದೇಶ ಗೋಪಾಲ ಮಲಾಜುರೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳಿಗೆ ತಂತ್ರಜ್ಞಾನದ ಅರಿವು ಅವಶ್ಯಕ




ಗ್ರಾಮೀಣ ಭಾಗದ ಹೈಸ್ಕೂಲ್, ಪಿಯುಸಿ, ಪದವಿ ವಿದ್ಯಾರ್ಥಿಗಳು ತಂತ್ರಜ್ಞಾನದ ಅರಿವು ಪಡೆದು ಕೊಂಡು ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮ ಸಾಧನೆ ತೋರಬೇಕು.

–ಚಂದ್ರಶೇಖರ ಬನ್ನಾಳೆ ಅಧ್ಯಕ್ಷರು ತಾಲೂಕು ಸರಕಾರಿ ನೌಕರರ ಸಂಘ ಭಾಲ್ಕಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.23: ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಸ್ಪರ್ಧೆಯೊಡ್ಡಲು ಗ್ರಾಮೀಣ ಭಾಗದ ಮಕ್ಕಳು ತಂತ್ರಜ್ಞಾನ ಅರಿವು ಮತ್ತು ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಅವಶ್ಯಕವಾಗಿದೆ ಎಂದು ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ಹೇಳಿದರು. ತಾಲೂಕಿನ ಮೇಥಿ ಮೇಳಕುಂದಾ ಗ್ರಾಮದ ಪಂಚಾಯತಿ ಅರಿವು ಕೇಂದ್ರದಲ್ಲಿ ಮಂಗಳವಾರ ಆಯೋಜಿಸಿದ್ದ ಉಚಿತ ಕಂಪ್ಯೂಟರ್ ತರಬೇತಿ ಕೇಂದ್ರ ಉದ್ಘಾಟಿಸಿ ಅವರು ಮಾತನಾಡಿದರು.ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯನ್ನು ಉತ್ತೇಜಿಸಲು ಕಂಪ್ಯೂಟರ್ ಕಲಿಕೆ ಪೂರಕವಾಗಲಿದೆ.

ರಾಜ್ಯದಲ್ಲಿಯೇ ಮೊದಲ ಬಾರಿಗೆ ಈ ಗಡಿಭಾಗದ ಪಂಚಾಯತಿ ಕೇಂದ್ರದಲ್ಲಿ ಉಚಿತ ಕಂಪ್ಯೂಟರ್ ತರಬೇತಿ ಆರಂಭಿಸಲಾಗಿದೆ. ತರಬೇತಿ ಅವಧಿ ಒಂದು ತಿಂಗಳಾಗಿದ್ದು ತರಬೇತಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಕಲಿಕಾ ಪ್ರಮಾಣ ಪತ್ರ ವಿತರಿಸಲಾಗುತ್ತದೆ.

ಈಗಾಗಲೇ ಕಂಪ್ಯೂಟರ ಕಲಿಕೆಗೆ 20ಕ್ಕೂ ಅಧಿಕ ವಿದ್ಯಾರ್ಥಿಗಳು ತಮ್ಮ ಹೆಸರು ನೊಂದಾಯಿಸಿದ್ದಾರೆ. ದಸರಾ ರಜೆಯಲ್ಲಿರುವ ಎಲ್ಲ ವರ್ಗದ ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೇ ಉಚಿತ ಕಂಪ್ಯೂಟರ ತರಬೇತಿಯ ಲಾಭ ಪಡೆದು ತಮ್ಮ ಜ್ಞಾನವನ್ನು ವೃದ್ಧಿಸಿ ಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಉತ್ತಮಬಾಯಿ ಬಳಿರಾಮ ಭುಜಂಗೆ, ಎಸ್‌ಡಿಎಂಸಿ ಅಧ್ಯಕ್ಷ ಸತೀಶ ಧನರಾಜ ಕರಕರೆ, ಶಿವಾಜಿ ರೆಡ್ಡಿ, ಗ್ರಂಥಪಾಲಕ ವಿಶಾಲ, ರಾಜೀವ ಗಾಂಧಿ ಪಂಚಾಯತ್ ರಾಜ್‌ನ ಫೇಲೋಶಿಪ್ ವೆಂಕೋಬ್ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.

# ಹಿರಿಯ ಸಾಹಿತಿ ಜಿ.ಬಿ.ವಿಸಾಜಿ ಪ್ರಥಮ ಪುಣ್ಯಸ್ಮರಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಸೆ.23:ಗಡಿಭಾಗದ ಸಾಹಿತ್ಯ ಕ್ಷೇತ್ರಕ್ಕೆ ಹಿರಿಯ ಸಾಹಿತಿ ಜಿ.ಬಿ.ವಿಸಾಜಿ ಅವರು ವಿಶಿಷ್ಟ ಕೊಡುಗೆ ನೀಡಿದ್ದಾರೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಆಡಳಿತಾಧಿಕಾರಿ ಮೋಹನರೆಡ್ಡಿ ಹೇಳಿದರು. ತಾಲೂಕಿನ ತಳವಾಡ(ಕೆ) ಗ್ರಾಮದ ಅಲ್ಲಮಪ್ರಭು ಬಿ.ಇಡಿ ಕಾಲೇಜಿನಲ್ಲಿ ಶಬನಮ್ ಎಜುಕೇಷನ್ ಮತ್ತು ಚಾರಿಟೇಬಲ್ ಟ್ರಸ್ಟ್ ವತಿಯಿಂದ ಸೋಮವಾರ ಆಯೋಜಿಸಿದ್ದ ಹಿರಿಯ ಸಾಹಿತಿ ಜಿ.ಬಿ.ವಿಸಾಜಿ ಪ್ರಥಮ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಹಿರೇಮಠ ಸಂಸ್ಥಾನದ ಧಾರ್ಮಿಕ, ಶೈಕ್ಷಣಿಕ, ಸಾಹಿತಿಕ ಕಾರ್ಯಕ್ರಮಗಳಲ್ಲಿ ಹಿರಿಯ ಸಾಹಿತಿ ಜಿ.ಬಿ.ವಿಸಾಜಿ ಅವರ ಸೇವೆ ವಿಶಿಷ್ಟವಾಗಿ ಇರುತ್ತಿತ್ತು. ಶತಾಯಷಿಡಾ.ಚನ್ನಬಸವಪಟ್ಟದ್ದೇವರ ಕುರಿತು ಕಾಯಕ ಪರಿಣಾಮಿ, ಭಾಲ್ಕಿ ಇತಿಹಾಸ ಸೇರಿ ಮುಂತಾದ ಪುಸ್ತಕ ರಚಿಸಿ ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆ ನೀಡಿದ್ದಾರೆ. ಉತ್ತಮ ಸಾಹಿತ್ಯ ಪಟು ಆಗಿದ್ದರಿಂದ ಕನ್ನಡ ಭಾಷೆಯ ಮೇಲೆ ಪ್ರಭುತ್ವ ಸಾಧಿಸಿದ್ದರು. ಅವರ ಸರಳ ವ್ಯಕ್ತಿತ್ವ ನಮ್ಮೆಲ್ಲರಿಗೂ ಪ್ರೇರಣೆ ಆಗಿದೆ ಎಂದು ತಿಳಿಸಿದರು.

ಹಿರಿಯ ಸಾಹಿತಿ ಗಣಪತಿ ಭೂರೆ ಮಾತನಾಡಿ, ಹಿರಿಯ ಸಾಹಿತಿ ಜಿ.ಬಿ.ವಿಸಾಜಿ ಅವರ ಮಾರ್ಗದರ್ಶನದಲ್ಲಿ 15 ಪುಸ್ತಕಗಳನ್ನು ಬರೆಯಲು ಸಾಧ್ಯವಾಗಿದೆ. ಅವರು ಒಬ್ಬ ಕನ್ನಡದ ಭೀಷ್ಮರಾಗಿದ್ದರು ಎಂದು ತಿಳಿಸಿದರು.

ಶಬನಮ್ ಎಜುಕೇಷನ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷೆಡಾ.ಮಕ್ತುಂಬಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಗುರು ಭಕ್ತಿ ಹೆಚ್ಚಾಗಬೇಕು. ಜಿ ಬಿ ವಿಸಾಜಿ ಅವರ ಪ್ರೇರಣೆಯಿಂದ ಇಂದು ನಾನು ಕನ್ನಡ ಸಾಹಿತ್ಯದಲ್ಲಿ ಬೆಳೆಯಲು ಸಾಧ್ಯವಾಯಿತು. ಅವರು ನನ್ನ ಗುರುಗಳು. ಅವರ ನೆನಪು ಮಾಡಿಕೊಳ್ಳುವದು ನಮ್ಮ ಕರ್ತವ್ಯ ಎಂದರು. ಪ್ರಾಚಾರ್ಯ ಪಾಂಡುರಂಗ ಕುಂಬಾರ್ ಮಾತನಾಡಿ, ಚನ್ನಬಸವ ಪಟ್ಟದೇವರು ಕನ್ನಡಕ್ಕಾಗಿ ದುಡಿದು ಕನ್ನಡ ಮಠ ಕಟ್ಟಿದರು. ಅದಮ್ಮಿ ಡಾ.ಬಸವಲಿಂಗ ಪಟ್ಟದ್ದೇವರು ಮುಂದುವರಿಸಿದರು. ಅದರ ಪರಿಣಾಮವಾಗಿ ಇಂತಹ ಹಿರಿಯ ಸಾಹಿತಿಗಳು ಹುಟ್ಟಿಕೊಂಡರು. ಜೀವನದಲ್ಲಿ ನಿರಂತರ ಅಧ್ಯಯನ ಮುಖ್ಯ.ವಿದ್ಯಾರ್ಥಿಗಳು ಪಾಠ ಕಲಿಬೇಕು, ಜತೆಗೆ ಸಾಹಿತ್ಯ ಓದಬೇಕು ಎಂದರು. ಉಪ ಪ್ರಾಚಾರ್ಯ ಮಾಣಿಕರಾವ ಪಾಂಚಾಳ ಸ್ವಾಗತಿಸಿದರು. ರಾಜೇಂದ್ರ ವರವಟ್ಟೆ ನಿರೂಪಿದರು. ಅರ್ಚನಾ ವಂದಿಸಿದರು.

# ಮಾಜಿ ಶಾಸಕ ಅಶೋಕ್ ಖೇಣಿ ಅವರಿಂದ ಪಂಚ ಗ್ಯಾರಂಟಿ ಸಮಿತಿ ತಂಡಕ್ಕೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ ಬೀದರ. ಸೆ. 23 : ರಾಜ್ಯದ ಪಂಚ ಗ್ಯಾರಂಟಿ ಯೋಜನೆಗಳನ್ನು ಗ್ರಾಮಾಂತರ ಮಟ್ಟದಲ್ಲಿ ಸಮರ್ಪಕವಾಗಿ ಜಾರಿಗೊಳಿಸುತ್ತಿರುವ ಹಿನ್ನೆಲೆಯಲ್ಲಿ, ಮಾಜಿ ಶಾಸಕ ಅಶೋಕ್ ಖೇಣಿ ಅವರು ಪಂಚ ಗ್ಯಾರಂಟಿ ಸಮಿತಿ ತಂಡಕ್ಕೆ ವಿಶೇಷವಾಗಿ ಸನ್ಮಾನ ಸಲ್ಲಿಸಿದರು.

ಸಮಿತಿಯ ಸದಸ್ಯರು ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಪ್ರಯೋಜನಗಳು ಪ್ರತೀ ಮನೆ ಮನೆಗೆ ತಲುಪುವಂತೆ ಕೈಗೊಂಡಿರುವ ಕಾರ್ಯಗಳನ್ನು ವಿವರಿಸಿದರು. ತಂಡದ ಪರಿಶ್ರಮವನ್ನು ಮೆಚ್ಚಿ, "ಜನಜೀವನದಲ್ಲಿ ನೇರಬದಲಾವಣೆಯನ್ನು ತರುತ್ತಿರುವ ಈ ಯೋಜನೆಗಳನ್ನು ಯಶಸ್ವಿಯಾಗಿ ನೆಲೆಗೊಳಿಸುವುದು ಸಮಾಜಮುಖಿ ಕಾರ್ಯ" ಎಂದು ಹೇಳಿದರು, ಯಾವುದೇ ಕುಟುಂಬವೂ ಗ್ಯಾರಂಟಿ ಯೋಜನೆಗಳಿಂದ ವಂಚಿತವಾಗದಂತೆ ಪ್ರತಿಯೊಂದು ಕುಟುಂಬ ಇದರ ಲಾಭ ಮತ್ತು ಸದುಪಯೋಗ ಪಡೆಯಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಕಮಿಟಿಯ ಅಧ್ಯಕ್ಷರಾದ ಚಂದ್ರಶೇಖರ ಚನಶೆಟ್ಟಿ, ಪಂಚ ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ರಾಜಕುಮಾರ ಮಡಕಿ, ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ, ಲೋಕೇಶ್ ಕನಶೆಟ್ಟಿ , ಕಾಂಗ್ರೆಸ್ ಪಕ್ಷದ ಎಲ್ಲಾ ಪದಾಧಿಕಾರಿಗಳು ಮುಂಚೂಣಿ ಘಟಕದ ಅಧ್ಯಕ್ಷರು ಕಾರ್ಯಕರ್ತರು ಮತ್ತು ಅಶೋಕ್ ಖೇಣಿ ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

# ಬೀದರ ನಗರ ಪ್ರದೇಶದಲ್ಲಿ ಮುಖ್ಯ ರಸ್ತೆ ಮತ್ತು ಚರಂಡಿಗಳ ದುರಸ್ತಿಗೆ ಆಗ್ರಹ





ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 23 : ಇತ್ತೀಚಿನ ಅತಿವೃಷ್ಟಿ ಮಳೆಯಿಂದ ಬೀದರ ನಗರ ಮತ್ತು ಬೀದರ ನಗರದ ವಿವಿಧ ಭಾಗದ ವಿಸ್ತೀರ್ಣ ಪ್ರದೇಶದದಲ್ಲಿಯ ಪ್ರಮುಖ ರಸ್ತೆಗಳು ಹಾಗೂ ಬಡಾವಣೆಗಳ ರಸ್ತೆಗಳು ಅತಿವೃಷ್ಟಿಯಿಂದ ಕೊಚ್ಚಿಕೊಂಡು ಹೋಗಿ ರಸ್ತೆಗಳ ಮೇಲೆ ಗುಂಡಿಗಳು, ತಗ್ಗುಗಳು ಉಂಟಾಗಿವೆ ಅಲ್ಲದೆ ಮಳೆ ನೀರು ಚರಂಡಿಗಳ ಮುಖಾಂತರ ಹರಿದು ಹೋಗದೆ ರಸ್ತೆ ತುಂಬೆಲ್ಲ ತುಂಬಿ ಹರಿದು ಸಾರ್ವಜನಿಕರಗೆ ಅತಿ ತೊಂದರೆ ಉಂಟಾಗಿದ್ದಲ್ಲದೆ ಸುಗಮ ಸಂಚಾರಕ್ಕೆ ಅಡ್ಡಿ ಉಂಟಾಗಿ ಅಪಘಾತಗಳು ಸಂಭವಿಸುತ್ತಿವೆ. ಹಾಗೂ ಚರಂಡಿಗಳ ಹೊಲಸು ರಸ್ತೆ ಮೇಲೆಲ್ಲಾ ಹರಿದು ದುರ್ವಾಸನೆ ಹರಡಿ ಪಾದಚಾರಿಗಳಿಗೆ ಹಾಗೂ ಓಡಾಡುವ ಸಾರ್ವಜನಿಕರಿಗೆ ತೀವ್ರ ಮುಜಗುರ ಉಂಟಾಗುತ್ತಿದೆ. ಕಾರಣ ರಸ್ತೆ ಹಾಗೂ ಚರಂಡಿಗಳ ದುರಸ್ತಿ ಕಾಮಗಾರಿಗಳು ಕೈಕೊಳ್ಳಲು ಸಂಭಾದಿತಾ ಅಧಿಕಾರಿಗಳಿಗೆ ಕಟ್ಟು ನಿಟ್ಟಾಗಿ ನಿರ್ದೇಶಿಸಲು ಸೂಚಿಸಬೇಕಾಗಿ ವಿನಂತಿಸುತ್ತೇವೆ.

ಏಕೆಂದರೆ ಬೀದರ ನಗರಾಭಿವೃದ್ಧಿ ಹಾಗೂ ಮಹಾನಗರ ಪಾಲಿಕೆಗಳಿಗೆ ಹಲವಾರು ಸಲ ಪತ್ರ ಬರೆದು ವಿನಂತಿಸಿದರು ಶಾಶ್ವತ ಯಾವುದೆ ದುರಸ್ತಿ ಕಾಮಗಾರಿ ಮಾಡದೇ ನಾಮಕೇವಾಸ್ತೆ. ಕಾಮಗಾರಿಗಳು ಮಾಡುತ್ತಿವದರಿಂದ ಸರ್ಕಾರಕ್ಕು ಹಣಕಾಸು ಹೊರೆ ಅಲ್ಲದೆ ಸಾರ್ವಜನಿಕರಿಗೂ ಸಮಸ್ಯೆ ಬಗೆಹರಿಯುತ್ತಿಲ.

ಅಧ್ಯಕ್ಷರು ಬಿ.ಜಿ. ಶೆಟಕಾರ ಕಾರ್ಯದರ್ಶಿಗಳು ಡಾ. ವೀರೇಂದ್ರ ಶಾಸ್ತ್ರೀ ಆದ್ದರಿಂದ ಬೀದರ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಬೀದರ ನಾಗರೀಕರ, ಕೈಗಾರಿಕೊದ್ಯಮಿಗಳ ಹಾಗೂ ವ್ಯಾಪಾರೋದ್ಯಮಿಗಳ ಪರವಾಗಿ ವಿನಂತಿಸುತ್ತೇವೆಂ ದು ತಿಳಿಸಿದ್ದಾರೆ.

# ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ: ಸಿಬ್ಬಂದಿಯಿಂದ ಚುನಾವಣಾ ಪ್ರಚಾರ ಕ್ರಮಕ್ಕೆ ಪಾಟೀಲ ಆಗ್ರಹ



ಬೀದರ. ಸೆ. 23 : ದಿನಾಂಕ 27–09–2025 ರಂದು ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ ಚುನಾವಣೆ ನಡೆಯುತ್ತಿದ್ದು ಕಾರ್ಖಾನೆಯ ಸಿಬ್ಬಂದಿಗಳು ಅಕ್ರಮವಾಗಿ ಚುನಾವಣಾ ಪ್ರಚಾರದಲ್ಲಿ ತೊಡಗಿ ಕೆಲವು ಸಿಬ್ಬಂದಿಗಳು ಈಗಾಗಲೇ ತಮ್ಮ ಮೊಬೈಲ್ ಫೋನನಲ್ಲಿ ಚುನಾವಣೆಯ ಒಂದು ಪೆನಲ್‌ನ ಅಭ್ಯರ್ಥಿಗಳಿಗೆ ಮತದಾನ ಮಾಡಬೆಕೆಂದು ಬ್ಯಾಲೇಟ್ ಪೆಪರನ್ ಮೊಡಲ್ ತಮ್ಮ ಸ್ಟೆಟಸನಲ್ಲಿ ಇಟ್ಟಿಕೊಂಡಿದ್ದಾರೆ,

ಉದಾಹರಣೆಗಾಗಿ ಮನ್ನಾಯಖೇಳ್ಳಿ ಫಿಲ್ಮ್ಯಾನ್ ರಾಜಪ್ಪ ಹಾಗೂ ಬಸಪ್ಪಾ ಎನ್ನುವರು ದೂರವಾಣಿ ಸಂಖ್ಯೆ 8861054605 ಹಾಗೂ 9900620133 ದಲ್ಲಿ ಸ್ಟೆಟಸ ಇಟ್ಟದ್ದು ಆದರ ಪೈಕಿ ಒಂದರ ನಕಲ ಪ್ರತಿ ಲಘತಿಸಿದ್ದೆ ಇವರಿಬ್ಬರನ್ನು ಕೂಡಲೇ ಅಮಾನತ್ತು ಗೊಳಿಸಬೆಕೆಂದು ಬೀದರ ಜಿಲ್ಲಾ ಭಾರತೀಯ ಜನತಾ ಪಾರ್ಟಿಯ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರು ಇಂದು ಕಾರ್ಖಾನೆಯ ಚುನಾವಣೆ ಅಧಿಕಾರಿ ಹಾಗೂ ಸಹಾಯಕ ಆಯುಕ್ತರು ಬೀದರ ಇವರಿಗೆ ಮನವಿ ಮಾಡಿದ್ದಾರೆ.

ಕಾರ್ಖಾನೆ ಸಿಬ್ಬಂದಿಗಳು ಈ ರೀತಿ ಚುನಾವಣಾ ಪ್ರಚಾರ ಮಾಡುವುದು ಹಾಗೂ ಅನೇಕ ಫಲ್ಲೀನ್‌ಗಳು ರೈತ ಮತದಾರರನ್ನು ಸಂಪರ್ಕಿಸಿ ಕಾರ್ಖಾನೆಯ ಒಂದು ಪೆನಲಗೆ ಮತದಾನ ಮಾಡಲು ಆಗ್ರಹಿಸುತ್ತಿದ್ದಾರೆ. ಇಲ್ಲದಿದ್ದರೆ ನಿಮ್ಮ ಕಬ್ಬನ್ನು ಕಾರ್ಖಾನೆಗೆ ಈ ವರ್ಷ ತೆಗೆದುಕೊಂಡು ಹೋಗುವುದಿಲ್ಲ ಎಂದು ಬೆದರಿಕೆ ಹಾಕುತ್ತಿದ್ದಾರೆ ಇಂತಹ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು

ಹಾಗೂ ಚುನಾವಣಾ ಅಕ್ರಮ ತಡೆಯುವ

ದೃಷ್ಟಿಯಿಂದ ಹಾಗೂ ನಿಸ್ಪಕ್ಷಪಾತ ಚುನಾವಣೆ ನಡೆಯಬೇಕೆಂದರೆ ಕಾರ್ಖಾನೆಯ ಎಲ್ಲಾ ಸಿಬ್ಬಂದಿಗಳು ಚುನಾವಣೆ ಮುಗಿಯುವರೆಗೆ ಕಾಖಾನೆಯ ಆವರಣದಲ್ಲಿಯೇ ಇರಲು ಆದೇಶಿಸಬೇಕೆಂದು ಸೋಮನಾಥ ಪಾಟೀಲ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಳೆಯಲ್ಲೇ ಸಡಗರದ ನವರಾತ್ರಿ ಆರಂಭ



ಬೀದರ. ಸೆ. 23 : ಮಳೆಯ ನಡುವೆಯೇ ನವರಾತ್ರಿ ಉತ್ಸವದ ಧಾರ್ಮಿಕ ವಿಧಿ ವಿಧಾನಗಳು ಸೋಮವಾರ ಜಿಲ್ಲೆಯಾದ್ಯಂತ ಆರಂಭಗೊಂಡವು.

ಮನೆ ಹಾಗೂ ವಿವಿಧ ಮಂದಿರಗಳಲ್ಲಿ ಘಟಸ್ಥಾಪನೆ ಮಾಡಿ, ಶ್ರದ್ಧಾ, ಭಕ್ತಿಯಿಂದ ದೇವಿಗೆ ಪೂಜೆ ನೆರವೇರಿಸಲಾಯಿತು. ಇದರೊಂದಿಗೆ ವಿವಿಧ ಧಾರ್ಮಿಕ ವ್ರತಾಚರಣೆಗಳು ಪ್ರಾರಂಭವಾದವು.

ಸೋಮವಾರದಿಂದ ಒಂಬತ್ತು ದಿನಗಳವರೆಗೆ ನಿತ್ಯ ದೇವಿಗೆ ವಿಶೇಷ ಅಲಂಕಾರ, ಪೂಜೆ, ನೈವೇದ್ಯ ಸಮರ್ಪಣೆ, ಸಂಗೀತ ಕಾರ್ಯಕ್ರಮಗಳು ಜರುಗಲಿವೆ.

ನಗರದ ಕುಂಬಾರವಾಡ, ಚಿದ್ರಿ ಸೇರಿದಂತೆ ಹಲವು ದೇವಸ್ಥಾನಗಳಲ್ಲಿ ಪೂಜಾ ಕೈಂಕರ್ಯಗಳು ಜರುಗಿದವು. ಜನರು ಶ್ರದ್ಧಾ, ಭಕ್ತಿಯಿಂದ ಪಾಲ್ಗೊಂಡು, ದೇವರ ದರ್ಶನ ಪಡೆದರು. ಭಾನುವಾರವೇ ದೇವಸ್ಥಾನಗಳಿಗೆ ವಿದ್ಯುತ್ ದೀಪಾಲಂಕಾರ ಮಾಡಿ, ತಳಿರು ತೋರಣಗಳಿಂದ ಅಲಂಕರಿಸಲಾಗಿದೆ.

ಖರೀದಿ ಭರಾಟೆ:

ನವರಾತ್ರಿಯ ಮೊದಲ ದಿನ ಹಬ್ಬದ ಖರೀದಿ ಭರಾಟೆ ಜೋರಾಗಿತ್ತು. ಸೋಮವಾರ ಬೆಳಕು ಹರಿಯುತ್ತಿದ್ದಂತೆ ಮಾರುಕಟ್ಟೆಗಳಲ್ಲಿ ಹೆಚ್ಚಿನ ಜನಸಂದಣಿ ಕಂಡು ಬಂತು.

ನಗರದ ಮೋಹನ್ ಮಾರ್ಕೆಟ್, ಶಿವನಗರದ ವಾಕಿಂಗ್ ಪಾತ್, ನೌಬಾದ್, ಭಗತ್ ಸಿಂಗ್ ವೃತ್ತ, ಬಸವೇಶ್ವರ ವೃತ್ತ, ಬೊಮ್ಮಗೊಂಡೇಶ್ವರ ವೃತ್ತ, ಹಾರೂರಗೇರಿ ಕಮಾನ್, ವಿದ್ಯಾನಗರ, ಮೈಲೂರ ಕ್ರಾಸ್, ಕುಂಬಾರವಾಡ, ಗುಂಪಾ ರಿಂಗ್ ರೋಡ್ ಎಲ್ಲೆಡೆ ಜನಜಾತ್ರೆ ಇತ್ತು.

ಕಬ್ಬು, ಬಾಳೆದಿಂಡು, ಹೂ, ಬೂದುಗುಂಬಳ, ಅಲಂಕಾರಿಕ ವಸ್ತುಗಳು, ಪೂಜಾ ಸಾಮಗ್ರಿಗಳು, ಹಣ್ಣು, ತರಕಾರಿಯನ್ನು ಜನ ಖರೀದಿಸಿದರು. ಬೆಳಿಗ್ಗೆ ಕೆಲಕಾಲ ಜಿಟಿಜಿಟಿ ಮಳೆಯಾಯಿತು. ಮಳೆಯಲ್ಲೇ ಅಗತ್ಯ ವಸ್ತುಗಳನ್ನು ಖರೀದಿಸಿದರು. ಕೆಲಸಮಯ ಬಿಡುವು ಕೊಟ್ಟ ಮಳೆ ಮಧ್ಯಾಹ್ನದಿಂದ ಬಿರುಸಾಗಿ ಸುರಿಯಿತು. ಆದರೆ, ಅಷ್ಟೊತ್ತಿಗೆ ವ್ಯಾಪಾರ ವಹಿವಾಟು ಬಹುತೇಕ ಪೂರ್ತಿಗೊಂಡಿತ್ತು.

# ಕಮಲನಗರ ರೈಲ್ವೆ ನಿಲ್ದಾಣದಲ್ಲಿ ಎಲ್ಲಾ ಎಕ್ಸ್‌ಪ್ರೇಸ್ ರೈಲುಗಳ ನಿಲುಗಡೆ ಆಗ್ರಹ




ಮಲ್ಲಮ್ಮ ನುಡಿ ವಾರ್ತೆಕಮಲ ನಗರ:ಸೆ.23:ಕಮಲನಗರ ರೇಲ್ವೆ ನಿಲ್ದಾಣದಲ್ಲಿ ಎಲ್ಲಾ ಎಕ್ಸ್‌ಪ್ರೆಸ್ ರೈಲುಗಳ ನಿಲುಗಡೆ ಮಾಡುವ ಕುರಿತು ವಿಭಾಗೀಯ ರೇಲ್ವೆ ವ್ಯವಸ್ಥಾಪಕರು, ದಕ್ಷಿಣ ಮಧ್ಯ ರೈಲ್ವೆ ಸಿಕಿಂದ್ರಾಬಾದ ಅವರಿಗೆ ವಿವಿಧ ಸಂಘಟನೆ ಮೂಲಕ ಅರ್ಜಿ ನೀಡಿ ಆಗ್ರಹ ಮಾಡಲಾಯಿತು. ಕಮಲನಗರ ರೈಲು ನಿಲ್ದಾಣದಲ್ಲಿ ಎಲ್ಲಾ ಎಕ್ಸ್‌ಪ್ರೆಸ್ ರೈಲುಗಳು ನಿಲ್ಲಿಸುವಂತೆ ದಶಕ ದಿಂದ ಬೇಡಿಕೆ ಅಥವಾ ಹೋರಾಟ ನಡೆಯುತ್ತಿದೆ. ಇಂತಹ ಸಂದರ್ಭದಲ್ಲಿ ನಾಂದೇಡ್–ಬೆಂಗಳೂರು ಎಕ್ಸ್‌ಪ್ಲೇಸ್ ರೈಲು ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ರೈಲು ನಿಲುಗಡೆಯಿದ್ದು, ಆದರೆ ಈವಾಗ ನಾಂದೇಡ್–ಬೆಂಗಳೂರು ಎಕ್ಸ್‌ಪ್ರೆಸ್ ರೈಲು ರದ್ದುಪಡಿಸಿರುವುದು ಸಾರ್ವಜನಿಕರಿಗೆ ಅನ್ಯಾಯ ಮಾಡಿರುತ್ತೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು. ಆದಷ್ಟು ಬೇಗ ಕಮಲನಗರ ರೈಲ್ವೆ ನಿಲ್ದಾಣದಿಂದ ಹಾದು ಹೋಗುವ ಎಲ್ಲಾ ಎಕ್ಸ್‌ಪ್ರೆಸ್ ರೈಲು ನಿಲ್ಲಿಸಬೇಕೆಂದು ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇವೆ. ಒಂದು ವೇಳೆ ನಮ್ಮ ಮನವಿಗೆ ಸ್ಪಂದಿಸದೆ ಇದ್ದಲ್ಲಿ ಎಲ್ಲಾ ಎಕ್ಸ್ಪೆಸ್ ರೈಲುಗಳ ನಿಲುಗಡೆಗಾಗಿ ಉಗ್ರ ಹೋರಾಟ ಮಾಡಲಾಗುವುದು ಎಂದು ತಮಗೆ ತಿಳಿಯಬಯಸುತ್ತಿದ್ದೇವೆ. ಮುಂದೆ ಆಗುವ ಆಗು–ಹೋಗುಗಳಿಗೆ ತಾವೇ ನೇರ ಹೊಣೆಗಾರರು ಎಂದು ಹೋರಾಟಗಾರು ಎಚ್ಚರಿಕೆ ನೀಡಿದರು.

**ಕಮಲನಗರ ನಿಲ್ದಾಣ ದಲ್ಲಿ ನಿಲುಗಡೆ ಮಾಡಬೇಕಾದ ರೈಲುಗಳ ಪಟ್ಟಿ:**

1) ನಾಂದೇಡ್–ಬೆಂಗಳೂರು ಎಕ್ಸ್‌ಪ್ರೆಸ್ (ಖಕಐ06520) ಮೊದಲಿನಂತೆ ನಿಲ್ಲಿಸಬೇಕು.

2) ಮುಂಬೈ–ಬೀದರ್ (ಖಕಐ02043)

3) ಔರಂಗಾಬಾದ–ಹೈದ್ರಾಬಾದ (ಖಕಐ07050) ಮೊದಲಿನಂತೆ ನಿಲ್ಲಿಸಬೇಕು.

4) ಪುಣೆ–ಹೈದ್ರಾಬಾದ ಎಕ್ಸ್‌ಪ್ರೆಸ್ (ಖಕಐ17013)

5) ಔರಂಗಾಬಾದ–ರೇನಿಗುಂಟಾ ಎಕ್ಸ್‌ಪ್ರೋಸ್ – 2 (ಖಕಐ17621)

6) ಲೋಕಮಾನ್ಯ ತಿಲಕ್ ಮುಂಬೈ–ಬೀದರ್ ಎಕ್ಸ್‌ಪ್ರೆಸ್ (11075) ಅನ್ನು ಪುನರಾರಂಭಿಸಬೇಕು.

7) ಸಾಯಿನಗರ ಶಿರಡಿ ಎಕ್ಸ್‌ಪ್ರೆಸ್ ರೈಲುಗಳು (17001, 17205, 17207)

**ರೈಲು ನಿಲ್ದಾಣ ಹೆಚ್ಚಿಸುವ ಬದಲು ಕಡಿಮೆ ಮಾಡಲಾಗುತ್ತಿದೆ**

ದಶಕಗಳಿಂದ ಎಲ್ಲಾ ರೈಲು ನಿಲ್ಲಿಸುವ ಬಗ್ಗೆ ಅನೇಕ ಹೋರಾಟ ಮಧ್ಯವೂ ಎಕ್ಸ್‌ಪ್ರೆಸ್ ರೈಲು ನಿಲ್ಲಿಸುವ ಸಂಖ್ಯೆ ಕಡಿಮೆಯಾಗುತ್ತಿರುವುದು ವಿಪರ್ಯಾಸವೆ ಸರಿ, ಹೀಗಾಗಿ ಬೇಡಿಕೆ ಕೇವಲ ಮನವಿ ಪತ್ರಕ್ಕೆ ಸೀಮಿತವಾಗಬಾರದು. ಚುನಾಯಿತ ಪ್ರತಿನಿಧಿಗಳು ಕೇವಲ ಚುನಾವಣೆ ಪ್ರಚಾರಕ್ಕೆ ನಿಲ್ದಾಣದ ಬಗ್ಗೆ ಮಾತನಾಡುವುದು ಇದ್ದಕೆ ಕಾರಣ ಎಂದು ಜನ ಸಾಮಾನ್ಯರ ಮಾತಾಗಿದೆ.

# ಯಾವಾಗಲೂ ಶುಚಿತ್ವ ಕಾಪಾಡಿಕೊಳ್ಳಿ : ಡಾ. ಲಕ್ಷ್ಮೀ ಪಾಟೀಲ ಮಾಕಾ



ಕಲಬುರಗಿ:ಸೆ.23: ಜಂಕ್ ಫುಡ್‌ಗೆ ಮೊರೆಹೋಗದೆ, ನಿಯಮಿತ ವ್ಯಾಯಮ ಮಾಡಿ ಯಾವಾಗಲೂ ಶುಚಿತ್ವ ಕಾಪಾಡಿಕೊಳ್ಳಿ ಎಂದು ಶರಣಬಸವ ವಿಶ್ವವಿದ್ಯಾಲಯದ ಡೀನ್ ಡಾ. ಲಕ್ಷ್ಮೀ ಪಾಟೀಲ ಮಾಕಾ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅವರು ಮಂಗಳವಾರದಂದು ಶರಣಬಸವ ವಿಶ್ವವಿದ್ಯಾಲಯದ, ವ್ಯವಹಾರ ಅಧ್ಯಾಯನ ನಿಕಾಯದ ಮಹಿಳಾ ಬಿ.ಬಿ.ಎ. ವಿಭಾಗ ಮತ್ತು ಶರಣಬಸವ ಆಯುರ್ವೆದಿಕ ಆಸ್ಪತ್ರೆ ಹಾಗೂ ವಿವಿಯ ಮಹಿಳಾ ಸಬಲೀಕರಣ ಕೋಶದ ವತಿಯಿಂದ ಆಯೋಜಿಸಿದ "ಮಹಿಳೆಯರ ಆರೋಗ್ಯ ಮತ್ತ ನೈರ್ಮಲ್ಯ" ಕುರಿತಾದ ಜಾಗ್ರತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ಬೆಳಿಗ್ಗೆ ಬೇಗನೆ ಎದ್ದೇಳುವದನ್ನು ರೂಢಿಸಿಕೊಳ್ಳಿ, ನಿಮ್ಮ ಮನೆಗೆಲಸದಲ್ಲಿ ಹಿರಿಯರ ಕೈ ಜೋಡಿಸಿ. ಬೇರೆಯವರನ್ನು ನೋಡಿ ಅಸೂಯೆ ಪಡಬೇಡಿ ಹಾಗೂ ನಿಮ್ಮನ್ನು ನೀವು ಯಾರೊಂದಿಗೂ ಹೋಲಿಸಿಕೊಳ್ಳಬೇಡಿ. ಸದಾ ಲವಲವಿಕೆಯಿಂದಿದ್ದು, ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿರಿಸಿಕೊಳ್ಳಿ. ಯಾವಗಲೂ ಕೈ ತೊಳೆಯುವ ಅಭ್ಯಾಸ ರೂಢಿಸಿಕೊಳ್ಳಿ ಇದ–ರಿಂದ ಮನಸ್ಸು ಉಲ್ಲಾಸವಾಗಿ ಆರೋಗ್ಯದಿಂದಿರುವಿರಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಶರಣಬಸವ ಆಯುರ್ವೆದಿಕ ಆಸ್ಪತ್ರೆಯ ಡಾ. ರುದ್ರಾಣಿ ದೇಶಮುಖ ಮಾತನಾಡಿದರು. ಮಹಿಳಾ ಬಿ.ಬಿ.ಎ. ವಿಭಾಗದ ಚೇರ್‌ಪರ್ಸನ್ ಡಾ. ಶಿಲ್ಪಾ ಕಂದಗೂಳ, ವಿವಿಯ ಮಹಿಳಾ ಸಬಲೀಕರಣ ಕೋಶದ ಚೇರ್‌ಪರ್ಸನ್ ಡಾ. ಶಿಲ್ಪಾ ಶ್ರೀಗಿರಿ ಹಾಗೂ ನೀರಜ ತಡಕಲ, ಶಿವರಾಜ ನಾಲವಾರ, ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಎಸ್ಸಿ ಕ್ರೈಸ್ತ ಜಾತಿಗಳನ್ನು ಸರ್ಕಾರ ಈ ಕೂಡಲೇ ಕೈಬಿಡಲು ಜಿಲ್ಲಾ ಬಿಜೆಪಿ ಆಗ್ರಹ




**ಮಲ್ಲಮ್ಮ ನುಡಿ ವಾರ್ತೆ**

ಯಾದಗಿರಿ: ಸಮೀಕ್ಷೆಗೆ ಸಿದ್ಧಪಡಿಸಿರುವ ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿರುವ ಎಸ್ಸಿ ಕ್ರೈಸ್ತ ಜಾತಿಗಳನ್ನು ಸರ್ಕಾರ ಈ ಕೂಡಲೇ ಕೈಬಿಡಬೇಕು ಮತ್ತು ಕ್ರೈಸ್ತ ಟ್ಯಾಗ್ ತೆಗೆದು ಈ ಬಗ್ಗೆ ಆಯೋಗ ಸ್ಪಷ್ಟನೇ ನೀಡಬೇಕು. ಇದಕ್ಕೆ ನಿರ್ಲಕ್ಷ್ಯವಹಿಸಿದರೇ ಜಿಲ್ಲೆಯ ಎಲ್ಲಡೆ ದಲಿತರು ಬೀದಿಗಿಳಿದು ಹೋರಾಟ ಮಾಡಬೇಕಾಗುತ್ತದೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ಬಸವರಾಜ ವಿಭೂತಿಹಳ್ಳಿ ಎಚ್ಚರಿಸಿದ್ದಾರೆ.

ಸೋಮವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿವಿಧ ಪ್ರಬಲ ಜಾತಿಗಳ ಅನಧಿಕೃತವಾಗಿ ಹಾಕಲಾಗಿದ್ದ ಈ ಪದವನ್ನು ತೆಗೆದ ಸರ್ಕಾರ, ಎಸ್ಸಿ ಜಾತಿಗಳನ್ನು ಉಳಿಸಿದ್ದರ ಷಡ್ಯಂತರವಿದೆ. ಒಳಮೀಸಲಾತಿಯ ಹಂಚಿಕೆಯನ್ನು ದಿಕ್ಕು ತಪ್ಪಿಸಲು ಸರ್ಕಾರ ಮುಂದಾಗಿದೆ ಎಂದು ದೂರಿದರು.

ಒಳಮೀಸಲಾತಿ ವರ್ಗೀಕರಣದ ವಿಷಯ ಇನ್ನೂ ಬಗೆಹರಿದಿಲ್ಲ, ಅಲ್ಲಿಯೇ ಇರುವ ಸಾಕಷ್ಟು ಗೊಂದಲಗಳನ್ನು ನಿವಾರಣೆ ಮಾಡಲು ಆಗದ ಸರ್ಕಾರ ಈಗ ಕ್ರೈಸ್ತ ಪದವನ್ನು ಮತ್ತಷ್ಟು ಗೊಂದಲ ಮೂಡಿಸಿ ಏನು ಸಾಧನೆ ಮಾಡಲು ಹೊರಟಿದೆ ಎಂದು ವಿಭೂತಿಹಳ್ಳಿ ಪ್ರಶ್ನಿಸಿದರು.

48 ಹಿಂದೂ ಜಾತಿಗಳನ್ನು ಕ್ರಿಶ್ಚಿಯನ್ ಗುರುತಿಸಿದ್ದರಲ್ಲಿ 33 ಜಾತಿಗಳನ್ನು ತೆಗೆದುಹಾಕಿರುವ ಆಯೋಗ, ಪರಿಶಿಷ್ಟಜಾತಿಗಳನ್ನೇ ಯಾಕೆ ಉಳಿಸಿಕೊಂಡಿದೆ, ಇದು ಆತಂಕದ ಬೆಳವಣಿಗೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಕ್ರಮಬದ್ಧತೆಯೇ ಇಲ್ಲದ ಈ ಜಾತಿ ಸಮೀಕ್ಷೆಯ ಹಿಂದೆ ಕೊಳಕು ರಾಜಕಾರಣದ ಹುನ್ನಾರ ಅಡಗಿದೆ. ಎರಡು ತಿಂಗಳ ಹಿಂದೆಯೇ ಆಯೋಗ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಮಾಡಿದೆ. ಇದಕ್ಕೆ 150 ಕೋಟಿ ರೂ. ಖರ್ಚು ಸಹ ಮಾಡಿದೆ. ಈಗ ಮತ್ತೇ ದಲಿತರ ಸಮೀಕ್ಷೆ ಮಾಡುವ ಅಗತ್ಯವಾದರೂ ಏನಿತ್ತು ಎಂದು ಪ್ರಶ್ನಿಸಿರುವ ಜಿಲ್ಲಾಧ್ಯಕ್ಷ ಬಸವರಾಜಪ್ಪ, ತನ್ನ ಹೈಕಮಾಂಡ್ ಅನ್ನು ಓಲೈಸಲು ರಾಜ್ಯ ಸರ್ಕಾರ ಸಾಮಾಜಿಕ ನ್ಯಾಯದ ಬಲಿ ಕೊಡುತ್ತಿದೆ ಎಂದು ಜರಿದರು.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿ ಮತ್ತು ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಬಿಜೆಪಿ ಮುಖಂಡರಾದ ರಾಚಣ್ಣಗೌಡ ಮುದ್ನಾಳ, ನಾಗರತ್ನ ಕುಪ್ಪಿ, ಯುವ ಮುಖಂಡ ಮಹೇಶರಡ್ಡಿ ಮುದ್ನಾಳ, ದೇವೇಂದ್ರನಾಥನಾದ್, ಸಿದ್ದಣ್ಣಗೌಡ ಕಾಡಂನೋರ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಗುರು ಕಾಮಾ ಮತ್ತು ಪರಶುರಾಂ ಕುರಕುಂದಾ, ಜಿಲ್ಲಾ ವಕ್ತಾರ ಮತ್ತು ನಗರಸಭೆ ಸದಸ್ಯ ಹಣಮಂತ ಇಟಗಿ, ನಗರ ಮಂಡಲ ಅಧ್ಯಕ್ಷ ಲಿಂಗಪ್ಪ ಹತ್ತಿಮನಿ, ಜಿಲ್ಲಾ ಮಾಧ್ಯಮ ಸಂಚಾಲಕ ವಿರುಪಾಕ್ಷಯ್ಯಸ್ವಾಮಿ ಹೆಡಗಿಮದ್ರಾ ಸೇರಿದಂತೆಯೇ ಇತರರಿದ್ದರು.

## ಜಾನುವಾರುಗಳಿಗೆ ಚರ್ಮಗಂಟು ರೋಗ ಹಿನ್ನೆಲೆ: ರೈತರು ಆತಂಕಕ್ಕೆ ಒಳಗಾಗದೆ ದನಕರುಗಳಿಗೆ ಲಸಿಕೆ ಕೊಡಿಸಲು ಡಿ.ಸಿ. ಮನವಿ

**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ,ಸೆ.23:ನೆರೆಯ ಮಹಾರಾಷ್ಟ್ರದಲ್ಲಿ ಜಾನುವಾರುಗಳಿಗೆ ಚರ್ಮಗಂಟು ರೋಗ ಕಾಣಿಸಿಕೊಂಡಿದ್ದರಿಂದ ಗಡಿ ಭಾಗದಲ್ಲಿರುವ ಜಿಲ್ಲೆಯ ಆಳಂದ, ಅವಜಲಪೂರ ಮತ್ತು ಕಲಬುರಗಿ ತಾಲ್ಲೂಕುಗಳ ಜಾನುವಾರುಗಳಲ್ಲಿಯೂ ಸಹ ಈ ರೋಗದ ಲಕ್ಷಣಗಳು ಹೆಚ್ಚು ಕಂಡುಬರುತ್ತಿದ್ದು, ರೈತರು ಆತಂಕ-ಕ್ಕೆ ಒಳಗಾಗದೆ ದನಕರುಗಳಿಗೆ ಸಮೀಪದ ಪಶು ಕೇಂದ್ರಕ್ಕೆ ಕರೆದುಕೊಂಡು ಹೋಗಿ ಲಸಿಕೆ ಕೊಡಿಸಬೇಕೆಂದು ರೈತಾಪಿ ವರ್ಗದಲ್ಲಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮನವಿ ಮಾಡಿದ್ದಾರೆ.

1 ರಿಂದ 6 ತಿಂಗಳ ಅವಧಿಯ ದನಕರುಗಳಲ್ಲಿ ಈ ಚರ್ಮಗಂಟು ರೋಗವು ವಿಶೇಷವಾಗಿ ಕಂಡುಬರುತ್ತದೆ. ರೋಗ ಪೀಡಿತ ಜಾನುವಾರುಗಳ ಮೈತುಂಬಾ ಸಣ್ಣ ಗಾತ್ರದ ಗುಳ್ಳೆಗಳು ಕಾಣಿಸಿಕೊಂಡು ಜಾನುವಾರುಗಳು ರೋಗದಿಂದ ಬಳಲುತ್ತವೆ. ಚರ್ಮಗಂಟು ರೋಗ (ಐಣಟಿಥಿ ಖಿಞಟಿ ಆಜಭಿಜ) ಒಂದು ವೈರಾಣು ರೋಗವಾಗಿದ್ದು ಒಂದು ಪ್ರಾಣಿದಿಂದ ಇನ್ನೊಂದು ಪ್ರಾಣಿಗೆ ವೇಗವಾಗಿ ಹರಡುತ್ತದೆ. ಹೀಗಾಗಿ ರೋಗಪೀಡಿತ ಜಾನುವಾರುಗಳನ್ನು ಪ್ರತ್ಯೇಕವಾಗಿ ಕಟ್ಟಬೇಕು ಮತ್ತು ತಕ್ಷಣವೇ ಪಶುವೈದ್ಯಕೀಯ ಸಂಸ್ಥೆಗೆ ಭೇಟಿ ನೀಡಿ ಚಿಕಿತ್ಸೆ ಕೊಡಿಸಬೇಕು ಎಂದಿದ್ದಾರೆ.

ಜಿಲ್ಲೆಯಲ್ಲಿ ಈಗಾಗಲೆ ಚರ್ಮಗಂಟು (LSD) ರೋಗದ ವಿರುದ್ಧ 1 ಲಕ್ಷ ಲಸಿಕೆ ಸಂಗ್ರಹವಿದ್ದು, ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಹಂತ ಹಂತವಾಗಿ ಅದತ್ಯ ಮೇರೆಗೆ ಪಶು ವೈದ್ಯಕೀಯ ತಂಡದೊಂದಿಗೆ ಲಸಿಕೆ ಕಾರ್ಯಕ್ರಮ ಅಯೋಜಿಸಲಾಗುತ್ತದೆ. ರೈತ ಬಾಂಧವರು 1 ತಿಂಗಳ ಮೇಲ್ಪಟ್ಟ ಎಲ್ಲಾ ದನಕರುಗಳಿಗೆ ತಪ್ಪದೇ ಲಸಿಕೆ ಹಾಕಿಸಿಕೊಳ್ಳಬೇಕು. ಇದಕ್ಕಾಗಿ ಪಶು ಸಂಗೋಪನೆ ಇಲಾಖೆ ಸಿದ್ಧತೆ ಮಾಡಿಕೊಳ್ಳುತ್ತಿದೆ ಎಂದು ಡಿ.ಸಿ. ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಮೀಪದ ಪಶು ವೈದ್ಯಕೀಯ ಸಂಸ್ಥೆಯನ್ನು ಮತ್ತು ತುರ್ತು ಸಂದರ್ಭದಲ್ಲಿ ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆ ವರೆಗೆ ಜಾನುವಾರುಗಳ ಸಂಚಾರಿ ಚಿಕಿತ್ಸಾ ಘಟಕದ ಉಚಿತ ಸಹಾಯವಾಣಿ ಸಂಖ್ಯೆ 1962 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಆಕ್ಷೇಪಣೆ ಅರ್ಜಿಗೆ ಅವಕಾಶ


**ಮಲ್ಲಮ್ಮ ನುಡಿ ವಾರ್ತೆ**

ಯಾದಗಿರಿ: ಸೆಪ್ಟೆಂಬರ್ 23,: ಯಾದಗಿರಿ ಜಿಲ್ಲೆಯ ಸೌಹಾರ್ದ ಸಹಕಾರಿಗಳ ಸದಸ್ಯರುಗಳಿಗೆ ಮತ್ತು ಸಾರ್ವಜನಿಕರಿಗೆ ಗಮನಕ್ಕೆ 2025ರ ಮಾರ್ಚ್ 31 ಇದ್ದಂತೆ ಒಟ್ಟು 03 ವಿವಿಧ ರೀತಿಯ ಸಹಕಾರಿಗಳು ಕರ್ನಾಟಕ ಸೌಹಾರ್ದ ಸಹಕಾರಿ ಕಾಯ್ದೆ 1997ರ ಅಡಿಯಲ್ಲಿ ನೊಂದಣಿಗೊಂಡು ಸಂಘದ ಬೈಲಾ ರಿತ್ಯ ಕಾರ್ಯನಿರ್ವಹಿಸದೆ ಇರುವದರಿಂದ ಸ್ಥಗಿತಗೊಂಡಿದ್ದು, ಆಕ್ಷೇಪಣೆಗೆ ಅವಕಾಶ ಕಲ್ಪಿಸಿದೆ ಎಂದು ಯಾದಗಿರಿ ಸಹಕಾರ ಸಂಘಗಳ ಉಪ ನಿಬಂಧಕರು ಅವರು ತಿಳಿಸಿದ್ದಾರೆ.

ಶಹಾಪೂರ ಶ್ರೀ ಚಂದ್ರಲಾ ಸ್ವಶಕ್ತಿ ಸೌಹಾರ್ದ ಸಹಕಾರಿ.ನಿ, ಕೆಂಭಾವಿ, ಗ್ರಾಂಫ್ಲೋ ಇಂಟರ್ ನ್ಯಾಷನಲ್ ವಿವಿದೋದ್ಧೇಶ ಸೌಹಾರ್ದ ಸಹಕಾರಿ.ನಿ, ಯಾದಗಿರ ಪ್ರಜ್ಞಾ ಸೌಹಾರ್ದ ಪತ್ತಿನ ಸಹಕಾರಿ.ನಿ, ಈ ಸ್ಥಗಿತಗೊಂಡ ಸಹಕಾರಿಗಳನ್ನು ಸಮಾಪನೆ ಮಾಡಲು ಕ್ರಮವಿಡಲಾಗುತ್ತಿದ್ದು, ಈ ಬಗ್ಗೆ ತಮ್ಮ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಸಹಕಾರ ಸಂಘಗಳ ಉಪ ನಿಬಂಧಕರು ಯಾದಗಿರಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ಯಾದಗಿರಿ ಇಲ್ಲಿಗೆ ದಾಖಲಾತಿಗಳೊಂದಿಗೆ ಈ ಪ್ರಕಟಣೆ ಹೊರಡಿಸಿದ 15 ದಿನಗಳ ಒಳಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾಜದ ನೈರ್ಮಲ್ಯವನ್ನು ಕಾಪಾಡಲು ನಿರಂತರವಾಗಿ ಶ್ರಮಿಸುವ ಪೌರ ಕಾರ್ಮಿಕರ ಸೇವೆ ಶ್ಲಾಘನೀಯ – ಭಾರತಿ ದಂಡೋತಿ

**ಮಲ್ಲಮ್ಮ ನುಡಿ ವಾರ್ತೆ**




ಪುರಸಭೆಯಲ್ಲಿ ಪೌರ ಕಾರ್ಮಿಕರ ದಿನಾಚರಣೆ.

ಗುರುಮಠಕಲ್:ಸೆ.23 ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಬಿ ಬಸಲಿಂಗಪ್ಪ ಮಾಜಿ ಪೌರಕಾರ್ಮಿಕ ಸಚಿವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಸಸಿಗೆ ನೀರೆರಿಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಪುರಸಭೆ ಮುಖ್ಯಾಧಿಕಾರಿಗಳಾದ ಶ್ರೀಮತಿ ಭಾರತಿ ದಂಡೋತಿ ಪಟ್ಟಣದ ಸ್ವಚ್ಛತೆಗೆ ಪೌರಕಾರ್ಮಿಕರ ಪಾತ್ರ ಬಹು ಮುಖ್ಯವಾಗಿದೆ ಪೌರಕಾರ್ಮಿಕರು ಪಟ್ಟಣವನ್ನು ಶುಚಿಗೊಳಿಸುವ ಮೂಲಕ ಇಡೀ ಸಮಾಜವನ್ನು ಆರೋಗ್ಯವಾಗಿ ಇಡುವುದಕ್ಕೆ ಪ್ರತ್ಯಕ್ಷ ಕಾರಣಿಕರ್ತರು ಎಂದು ಹೇಳಿದರು. ಸಂತೋಷ ನೀರೆಟಿ ಪೌರ ಕಾರ್ಮಿಕರ ಕಾರ್ಯ ಕುರಿತಾಗಿ ಸ್ವ ರಚಿತ ಕವನ ವಾಚನ ಮಾಡಿದರು, ಪುರಸಭೆ ಕಾರ್ಯಾಲಯದ ಒಟ್ಟು 44 ಜನ ಪೌರಕಾರ್ಮಿಕರಿಗೆ ಪುರಸಭೆ ವತಿಯಿಂದ ಸನ್ಮಾನಿಸಿ ಕಿರು ಕಾಣಿಕೆ ನೀಡಿ ಸತ್ಕರಿಸಲಾಯಿತು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ಜಯಶ್ರೀ ಪೊಲೀಸ್ ಪಾಟೀಲ, ಉಪಾಧ್ಯಕ್ಷೆ ರೇಣುಕಾ ಪಡಿಗೆ, ಪುರಸಭೆ ಸದಸ್ಯರು, ನಾಮ ನಿರ್ದೇಶಕ ಸದಸ್ಯರು, ಪುರಸಭೆ ಕಾರ್ಯಾಲಯದ ಸಿಬ್ಬಂದಿ ಭಾಗವಹಿಸಿದರು.

## ಪೌರ ಕಾರ್ಮಿಕರು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಿ : ಶಾಸಕ ತುನ್ನೂರ

**ಮಲ್ಲಮ್ಮ ನುಡಿ ವಾರ್ತೆ**



ಯಾದಗಿರಿ : ಪ್ರಸಕ್ತ ದಿನಗಳಲ್ಲಿ ಪ್ರತಿಯೊಬ್ಬರು ನಾನಾ ಕಾರಣಗಳಿಂದ ಅನಾರೋಗ್ಯಕ್ಕೆ ಒಳಗಾಗುತ್ತಿದ್ದಾರೆ, ಇಂತಹ ಸಂದರ್ಭದಲ್ಲಿ ನಗರದ ಸ್ವಚ್ಚತೆಗೆ ಹಾಗೂ ಅಭಿವೃದ್ಧಿಗೆ ಶ್ರಮವಹಿಸುತ್ತಿರುವ ಪೌರಕಾರ್ಮಿಕರು ಆಗಾಗ ತಮ್ಮ ಆರೋಗ್ಯವನ್ನು ತಪಾಸಣೆ ಮಾಡಿಸಿಕೊಳ್ಳಬೇಕೆಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಸಲಹೆ ನೀಡಿದರು.

ನಗರಸಭೆ ಆವರಣದಲ್ಲಿ 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ನಿಮಿತ್ಯ ಪೌರ ಕಾರ್ಮಿಕರಿಗಾಗಿ ಹಮ್ಮಿಕೊಂಡಿದ್ದ ಆರೋಗ್ಯ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಭಾರತೀಯ ವೈದ್ಯ ಪದ್ಧತಿಯಲ್ಲಿ ಆಯುರ್ವೇದ ಚಿಕಿತ್ಸೆಗೆ ಹೆಚ್ಚಿನ ಪ್ರಾಮುಖ್ಯತೆಯಿದೆ, ಈ ಚಿಕಿತ್ಸೆಯಿಂದ ಜನರ ಆರೋಗ್ಯದ ಮೇಲೆ ಯಾವುದೇ ರೀತಿಯಿಂದ ಕೆಟ್ಟಪರಿಣಾಮ ಬೀರುವುದಿಲ್ಲ, ನಗರದಲ್ಲಿ ಜಿಲ್ಲಾ ಆಯುಷ್ ಆಸ್ಪತ್ರೆ ನಿರ್ಮಾಣಕ್ಕೆ ಸರ್ಕಾರ ಮಟ್ಟದಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ ಎಂದು ತಿಳಿಸಿದರು.

ಈ ಭಾಗದಲ್ಲಿ ಆಯುಷ್ ಇಲಾಖೆಯ ಚಿಕಿತ್ಸೆಗಳ ಲಾಭ ಜನರಿಗೆ ಅರಿವು ಕಡಿಮೆ, ಕಾರಣ ವೈದ್ಯರು ಹಾಗೂ ಸಿಬ್ಬಂಧಿಗಳು ಜಾಗೃತಿ ಮೂಡಿಸಿ, ಜನರಿಗೆ ವೈದ್ಯಕೀಯ ಸೇವೆ ನೀಡುವ ಮೂಲಕ ಆರೋಗ್ಯಕರ ವಾತಾವರಣ ನಿರ್ಮಾಣಕ್ಕೆ ಗಮನಹರಿಸಬೇಕೆಂದರು.

ನಗರಸಭೆ ಅಧ್ಯಕ್ಷರು ಹಾಗೂ ಸಿಬ್ಬಂದಿಗಳು ಕ್ರೀಯಾಶೀಲವಾಗಿ ನಗರದ ಬದಲಾವಣೆಗಾಗಿ ಕೆಲಸ ಮಾಡುತ್ತಿದ್ದಾರೆ, ನಾನು ಕೂಡ ಸರ್ಕಾರದ ವಿವಿಧ ಯೋಜನೆಗಳ ಅಡಿಯಲ್ಲಿ ಜನರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಯತ್ನಿಸುತ್ತಿದ್ದೇನೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ ನಗರಸಭೆ ಅಧ್ಯಕ್ಷೆ ಕು. ಲಲಿತಾ ಅನಪೂರ ಮಾತನಾಡಿ, ನಮ್ಮ ಪೌರ ಕಾರ್ಮಿಕರು ಕರ್ತವ್ಯ ಪ್ರಜ್ಞೆಯಿಂದ ನಗರದ ಜನರಿಗೆ ಒಳಿತಾಗಲು ಪ್ರಾಮಾಣಿಕ ಕೆಲಸ ಮಾಡುತ್ತಾರೆ, ಅವರ ಆರೋಗ್ಯ ತಪಾಸಣೆ ಮಾಡಲು ಆಯುಷ್ ಇಲಾಖೆ ಮುಂದಾಗಿರುವುದರಿಂದ ಅವರ ಅನೇಕ ಸಮಸ್ಯೆಗಳಿಗೆ ಪರಿಹಾರ ಸಿಗಲಿವೆ ಎಂದು ಹೇಳಿದರು.

ಈ ವರ್ಷ ಅತೀ ಹೆಚ್ಚು ಮಳೆ ಸುರಿದಿರುವುದರಿಂದ ಪೌರ ಕಾರ್ಮಿಕರು ತಮ್ಮ ಆರೋಗ್ಯವನ್ನು ಲೆಕ್ಕಿಸದೇ ನಗರದ ಸ್ವಚ್ಚತೆಗೆ ಶ್ರಮ ವಹಿಸಿದ್ದಾರೆ, ಅವರಿಗೆ ಸರ್ಕಾರದಿಂದ ಸಿಗುವ ಎಲ್ಲಾ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ಆಯುರ್ವೇದ ಚಿಕಿತ್ಸೆ ಬಹಳ ಪ್ರಾಚೀನವಾಗಿದೆ, ಈ ಹಿಂದೆ ನಮ್ಮ ಹಿರಿಯರು ಆಸ್ಪತ್ರೆಗಳಿಗೆ ದಾಖಲಾಗದೇ ಈ ಚಿಕಿತ್ಸೆಯನ್ನು ಋಷಿ ಮುನಿಗಳಿಂದ ಪಡೆದು ಆರೋಗ್ಯದಿಂದ ಬಾಳಿದರು, ಅದು ಇಂದಿಗೂ ಕೂಡ ಬೆಳವಣಿಗೆಯಾಗುತ್ತಾ ಬಂದಿದೆ, ಇಲಾಖೆ ನೀಡುವ ಔಷಧಿಗಳಿಂದ ದೇಹದಲ್ಲಿ ರೋಗನಿರೋಧಕ ಶಕ್ತಿ ವೃದ್ಧಿಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ವೈದ್ಯರು ಪೌರ ಕಾರ್ಮಿಕರ ಆರೋಗ್ಯ ತಪಾಸಣೆ ಮಾಡಿ, ಸೂಕ್ತ ಔಷಧಿಗಳನ್ನು ವಿತರಿಸಿದರು.

ವೇದಿಕೆ ಮೇಲೆ ನಗರಸಭೆ ಉಪಾಧ್ಯಕ್ಷೆ ರುಖೀಯಾ ಬೇಗಂ, ಯುಡಾ ಅಧ್ಯಕ್ಷ ಬಾಬುರಾವ್ ಕಾಡ್ಲೂರ, ನಗರಸಭೆ ಪೌರಾಯುಕ್ತ ಉಮೇಶ ಚವ್ಹಾಣ, ವ್ಯವಸ್ಥಾಪಕಿ ಅಶ್ವಿನಿ ಚವ್ಹಾಣ, ಸದಸ್ಯರಾದ ವೆಂಕಟರಡ್ಡಿ ವನಕೇರಿ, ಮನ್ಸೂರ ಆಫ್ಘಾನಿ, ಮಶೇಪ್ಪ ನಾಯಕ, ಪೌರ ಕಾರ್ಮಿಕರ ಸಂಘದ ಮುಖಂಡ ರವಿ ದಾಸನಕೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪ್ರಾಸ್ತಾವಿಕವಾಗಿ ಜಿಲ್ಲಾ ಆಯುಷ್ ಅಧಿಕಾರಿ ಡಾ. ವಂದನಾ ಜೆ. ಗಾಳಿಯವರು ಮಾತನಾಡಿ, ಜಿಲ್ಲೆಯಲ್ಲಿ ಕೈಗೊಂಡಿರುವ ಆಯುಷ್ ಇಲಾಖೆ ಚಟುವಟಿಕೆಗಳನ್ನು ವಿವರಿಸಿದರು.

ಡಾ. ಪ್ರಕಾಶ ರಾಜಾಪೂರ ಸ್ವಾಗತಿಸಿದರೆ, ಸಂಗಮೇಶ ಕೆಂಭಾವಿ ನಿರೂಪಿಸಿದರು, ಡಾ. ಪ್ರಮೋದ ಕುಲಕರ್ಣಿ ವಂದಿಸಿದರು.

## ಬೀದರ್ ಸ್ವಾಭಿಮಾನಿ ಗೆಳೆಯರ ಬಳಗಕ್ಕೆ ವನ್ಯಜೀವಿ ಸಂರಕ್ಷಣಾ ಪ್ರಶಸ್ತಿ



**ಮಲ್ಲಮ್ಮ ನುಡಿ ವಾರ್ತೆ**

ಬೀದರ್ ತಾಲೂಕಿನ ಮರಕುಂದಾ ಗ್ರಾಮದಲ್ಲಿ ಪರಿಸರ ವಾಹಿನಿ ಮತ್ತು ಚಾಲುಕ್ಯ ಶಿಕ್ಷಣ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಲಿಂ. ಗದಗಯ್ಯಾ ಕಾವಡಿಮಠ ಇವರ 12ನೇ ಪುಣ್ಯಸ್ಮರಣೆ ಅಂಗವಾಗಿ ಪ್ರರಿಸರೋತ್ಸವ ಕಾರ್ಯಕ್ರಮದಲ್ಲಿ ಸ್ವಾಭಿಮಾನಿ ಗೆಳೆಯರ ಬಳಗಕ್ಕೆ ಜಿಲ್ಲಾಧ್ಯಕ್ಷರಾದ ಚಂದು ಪಡಶೆಟ್ಟಿ ಸೇರಿದಂತೆ ಪ್ರಮುಖರಾದ ಸಂಜು ಪಾಟಿಲ್, ರವಿ ಬೆಳಕುಣೆ, ಬಸವರಾಜ ಸ್ವಾಮಿ ಮತ್ತು ವಿನೋದ್ ಹೊಕರಾಣಾ ರವರಿಗೆ ವನ್ಯಪ್ರಾಣಿಗಳ ಸಂರಕ್ಷಣೆಗೆ ಬೇಸಿಗೆಯಲ್ಲಿ ಕಾಡಿನಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುತ್ತಿದ್ದು ಇಂತಹ ಮಾದರಿ ಸೇವೆಗೆ ಶ್ರೀ ಶಿವಲಿಂಗೇಶ್ವರ ಸ್ವಾಮಿಗಳು 'ವನ್ಯಜೀವಿ ಸಂರಕ್ಷಣಾ ಪ್ರಶಸ್ತಿ' ನೀಡಿ ಸನ್ಮಾನಿಸಿ ಆಶೀರ್ವದಿಸಿದರು.

ಬೀದರ್ ಜಿಲ್ಲಾ ಗ್ಯಾರೆಂಟಿ ಯೋಜನೆ ಅಧ್ಯಕ್ಷರಾದ ಅಮೃತ ರಾವ್ ಚಿಮ್ಕೋಡ. ಬೀದರ್ ಟಿಪಿಎಸ್ ಕಾರ್ಯನಿರ್ವಣಾಧಿಕಾರಿ. ಮಾಣಿಕ ರಾವ್ ಪಾಟೀಲ್. ಪರಿಸರವಾದಿ ಶೈಲೇಂದ್ರ ಕಾವಡಿ ಪ್ರಶಸ್ತಿ ಪ್ರಧಾನಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ಬಸವಕಲ್ಯಾಣ :- ತಾಲೂಕಿನ ಸರಜವಳಗಿ ಗ್ರಾಮದಲ್ಲಿ ರಭಸವಾಗಿ ಸುರಿದ ಮಳೆಯಿಂದ ಸಂಪೂರ್ಣ ರಸ್ತೆ ಮೇಲಿಂದ ನೀರು ಹರಿಯುತ್ತಿರುವ ದೃಶ್ಯ ಆದಕಾರಣ ಸಂಬಂಧ ಪಟ್ಟ ಅಧಿಕಾರಿಗಳು ಈ ಕೂಡಲೇ ಅಗತ್ಯ ಕ್ರಮ ವಹಿಸಿ ಹೊಸ ಸೇತುವೆ ಕಾಮಗಾರಿಗೆ ಅನುಮೋದನೆಯನು ಪಡೆದು ಕಾಮಗಾರಿ ಆರಂಬಿಸಿ ಜನರಿಗೆ ಆಗುವ ತೊಂದರೆಯನ್ನು ತಪಿಸಬೇಕು ಎಂದು ಹಾರಕೂಡ ಗ್ರಾಮ ಪಂಚಾಯತ್ ಸದಸ್ಯರಾದ ಚನ್ನಪ್ಪ ಹೋಳ್ಕರ್ ಅವರು ಆಗ್ರಹಿಸಿದರು. (ಮಲ್ಲಮ್ಮ ನುಡಿ ಚಿತ್ರ)

## ವಿಕಲಚೇತನರಿಗೆ ನೇರಳೆ ಮೇಳ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ**

ಯಾದಗಿರಿ : ಸೆಪ್ಟೆಂಬರ್ 23– ವಿಕಲಚೇತನರಿಗಾಗಿ ನೇರಳೆ ಮೇಳ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಪಾಟೀಲ್ ಅವರು ತಿಳಿಸಿದ್ದಾರೆ.

ಸೆಪ್ಟೆಂಬರ್ 24, 25 ರಂದು ಅಂಗವಿಕಲ ವ್ಯಕ್ತಿಗಳಿಗಾಗಿ ಸಂಯೋಜಿತ ಪ್ರಾದೇಶಿಕ ಕೇಂದ್ರ ಸಿಆರ್‌ಸಿ ಯಾದಗಿರಿಯ ಸರ್ಕಾರಿ ಪದವಿ ಕಾಲೇಜಿನಲ್ಲಿ ನೇರಳೆ ಮೇಳವನ್ನು ನಡೆಸುತ್ತದೆ, ನೇರಳೆ ಮೇಳದ ಮೂಲಕ ಅಂಗವಿಕಲ ವ್ಯಕ್ತಿಗಳಿಗಾಗಿ ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿಯನ್ನು ಪ್ರಸಾರ ಮಾಡಲಾಗುತ್ತದೆ. ದಿವ್ಯಾಂಗಜನ ವಿಕಲಚೇತನರು ಮತ್ತು ಅಂಗವಿಕಲರ ಕೌಶಲ್ಯಗಳನ್ನು ವಿಶೇಷವಾಗಿ ಸಾಂಸ್ಕೃತಿಕ ಕೌಶಲ್ಯಗಳು, ಕ್ರೀಡಾ ಪ್ರತಿಭೆಗಳು ಮತ್ತು ಉದ್ಯಮಶೀಲತೆಯನ್ನು ಗುರುತಿಸಲಾಗುತ್ತದೆ. 2017 ರಿಂದ ಸಿಆರ್‌ಸಿ, ಓಊಇಕಖಆ, ಆಇಕಫಆ, ಒಖಖ&ಇ, ಉಔಐಐ ಆಡಳಿತ ನಿಯಂತ್ರಣದಲ್ಲಿ ಸೇವೆಗಳನ್ನು ಒದಗಿಸುತ್ತದೆ. 11,162 ವಿಕಲಚೇತನರು (ಪಿಡಬ್ಲ್ಯೂಡಿಗಳು) 48,772 ಬಾರಿ ಸಿಆರ್‌ಸಿಗೆ ಭೇಟಿ ನೀಡಿದರು ಮತ್ತು ಭೌತಚಿಕಿತ್ಸೆ ಕ್ಲಿನಿಕಲ್ ಸೈಕಾಲಜಿ, ಸ್ಪೀಚ್ ಥೆರಪಿ, ವಿಶೇಷ, ಶಿಕ್ಷಣ, ಔದ್ಯೋಗಿಕ ಚಿಕಿತ್ಸೆ, ಪ್ರಾಸ್ಥೆಟಿಕ್ ಮತ್ತು ಆರ್ಥೋಟಿಕ್ ಸೇವೆಗಳು, ವೃತ್ತಿಪರ ತರಬೇತಿ, ಸಾಮಾಜಿಕ ಕಾರ್ಯ ಮತ್ತು ಉದ್ಯೋಗ ಬೆಂಬಲ ಸೇವೆಗಳನ್ನು ಪಡೆದರು, ಇದರಲ್ಲಿ ಯುಡಿಐಡಿ ನೋಂದಣಿಗೆ ಬೆಂಬಲಿತವಾದ 2,669 ಪಿಡಬ್ಲ್ಯೂಡಿಗಳು ಮತ್ತು ನಿರಾಮಯ ವಿಮಾ ನೋಂದಣಿಗೆ 176 ಪಿಡಬ್ಲ್ಯೂಡಿಗಳು ಸೇರಿವೆ.

6,761 ಅಂಗವಿಕಲರು, ಹಿರಿಯ ನಾಗರಿಕರು ಸಿಆರ್‌ಸಿಯಲ್ಲಿ ಮತ್ತು ಶಿಬಿರದಲ್ಲಿ ಮೊಬಿಲಿಟಿ ಏಡ್ಸ್ (ವೀಲ್ ಚೇರ್, ಕ್ರಚಸ್, ಪ್ರೋಸ್ಥೆಸಿಸ್, ಆರ್ಥೋಸಿಸ್ ಇತ್ಯಾದಿ) ಸಂವಹನ ಏಡ್ಸ್ (ಬಿಟಿಇ ಶ್ರವಣ ಸಾಧನಗಳು) ಮತ್ತು ಬೋಧನಾ ಕಲಿಕಾ ಸಾಮಾಗ್ರಿಗಳುಂತಹ ಉಚಿತ ಸಹಾಯಕ ಸಾಧನಗಳನ್ನು ಪಡೆದರು.

ನಾವು 3 ಡಿಪ್ಲೋಮಾ ಕೋರ್ಸ್ಗಳನ್ನು ನಡೆಸುತ್ತೇವೆ (ಡಿ.ಎಡ್. ವಿಶೇಷ ಶಿಕ್ಷಣ ಬೌದ್ಧಿಕ ಮತ್ತು ಅಭಿವೃದ್ಧಿ ಅಂಗವೈಕಲ್ಯ, ಡಿ.ಎಡ್. ವಿಶೇಷ ಶಿಕ್ಷಣ ಶ್ರವಣ ದೋಷ, ಭಾರತೀಯ ಸಂಕೇತ ಭಾಷಾ ವ್ಯಾಖ್ಯಾನದಲ್ಲಿ ಡಿಪ್ಲೋಮಾ, ಅಂಗವಿಕಲರು, ಅವರ ಪೋಷಕರು ಮತ್ತು ಒಡಹುಟ್ಟಿದವರಿಗೆ ನಾವು 6 ತಿಂಗಳ, 2 ಪ್ರಮಾಣಪತ್ರ ಉಚಿತ ಕೋರ್ಸ್ಗಳನ್ನು ನಡೆಸುತ್ತೇವೆ, ಆರೈಕೆ ನೀಡುವವರ ತರಬೇತಿ, ೦ಖಆ/ಖಆ/ ಅಕ/ಒಆ ಹೊಂದಿರುವ ಮಕ್ಕಳ ಪೋಷಕರಿಗೆ ಉಚಿತ ಕೋರ್ಸ್ ಸಮುದಾಯ ಆಧಾರಿತ ಅಂತರ್ಗತ ಅಭಿವೃದ್ಧಿ, ಅಂಗವಿಕಲರಿಗೆ ಉಚಿತ, ಅವರ ಪೋಷಕರು ಮತ್ತು ಒಡಹುಟ್ಟಿದವರಿಗೂ ಸಹ ಉಚಿತ ಕೋರ್ಸ್ಗಳನ್ನು ನಡೆಸುತ್ತದೆ.

824 ತರಬೇತಿ ಕಾರ್ಯಕ್ರಮಗಳ ಮೂಲಕ 77,898 ಜನರಿಗೆ ತರಬೇತಿ ನೀಡಲಾಗಿದೆ (104 ಪೋಷಕರ ತರಬೇತಿ, 509 ಜಾಗೃತಿ, 211 ವೃತ್ತಿಪರ ತರಬೇತಿ) ಫೆಬ್ರವರಿ 2024 ರಿಂದ, ನಮ್ಮ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮವು 65 ವಿದ್ಯಾರ್ಥಿಗಳಿಗೆ (ಉದಾ ಸಹಾಯಕ ಸಸ್ಯ ಆರೈಕೆದಾರರ ತರಬೇತಿ ಮತ್ತು ಐಬಿಪಿಎಸ್ ಉಚಿತ ತರಬೇತಿ ತರಗತಿ) ಪ್ರಯೋಜನವನ್ನು ನೀಡುತ್ತದೆ.

ಈ ಕಾರ್ಯಕ್ರಮಕ್ಕೆ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ, ಹಾಗೂ ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಮಹೇಶ್ ಬಿರಾದಾರ ಆಹ್ವಾನಿತರಾಗಿ ಪಾಲ್ಗೊಳ್ಳುವರು.

ಇದು ಒಂದು ವಿಶಿಷ್ಟ ಕಾರ್ಯಕ್ರಮವಾಗಿರುವುದರಿಂದ ಅಂಗವಿಕಲ ವ್ಯಕ್ತಿಗಳನ್ನು ತೊಡಗಿಸಿಕೊಳ್ಳುವ, ಸಕ್ರಿಯಗೊಳಿಸುವ ಮತ್ತು ಸಬಲೀಕರಣಗೊಳಿಸುವ ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರಾದ ಶ್ರೀ ದಾಸ್ ಸೂರ್ಯವಂಶಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಇತರ ಹಿರಿಯ ರಾಜ್ಯ ಸರ್ಕಾರಿ ಅಧಿಕಾರಿಗಳು, ಕರ್ನಾಟಕ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಅಂಗವಿಕಲ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಾರ್ಯದರ್ಶಿ ಡಾ. ಶಮ್ಲಾ ಇಕ್ಬಾಲ್, ಬೆಂಗಳೂರಿನ ಅಂಗವಿಕಲ ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ನಿರ್ದೇಶಕರಾದ ಶ್ರೀ ರಾಘವೇಂದ್ರ ಟಿ. ಅವರನ್ನು ಆಹ್ವಾನಿಸಲಾಗಿದೆ. ಈ ಚಟುವಟಿಕೆಗಳನ್ನು ನಡೆಸಲು ಉದ್ದೇಶಿಸಲಾಗಿದೆ.

15 ಮಳಿಗೆಗಳು ಪುನರ್ವಸತಿಯಲ್ಲಿ ಮುಂದುವರಿದ ತಂತ್ರಜ್ಞಾನದ ಪಾಲುದಾರರಿಂದ ಉತ್ಪನ್ನಗಳನ್ನು ಪ್ರದರ್ಶಿಸುತ್ತವೆ, ವೈಯಕ್ತಿಕ ಪಿಡಬ್ಲ್ಯೂಡಿ ಪ್ರದರ್ಶಕರು ಪಿಡಬ್ಲ್ಯೂಡಿಗಳಿಗಾಗಿ ಕೆಲಸ ಮಾಡುವ ಪಿಡಬ್ಲ್ಯೂಡಿಗಳು, ಸಂಸ್ಥೆಗಳು, ನ್ಯೂರೋ ರೊಬೊಟಿಕ್, ರೈಮೋ, ಕ್ರಾಂತಿಕಾರಿ ವ್ಯಾಯಾಮ ಚಿಕಿತ್ಸಾ ವಸ್ತುಗಳು ಇತ್ಯಾದಿ), ಕ್ರೀಡಾ ಚಟುವಟಿಕೆಗಳಲ್ಲಿ ಕ್ಯಾರಮ್, ಚೆಸ್ ಬೊಕಿಯಾ, ಸಾಫ್ಟಾಲ್, ಥ್ರೋ, ನಿಂಬೆ ಚಮಚ ಮುಂತಾದ ಒಳಾಂಗಣ ಕ್ರೀಡೆಗಳು ಸೇರಿವೆ. ಪಿಡಬ್ಲ್ಯೂಡಿ ವ್ಯಕ್ತಿಗಳಿಂದ ಕಲೆ, ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ಭಾಷಣವು ಎಲ್ಲಾ ಭಾಗವಹಿಸುವವನ್ನು ಪ್ರೇರೆಪಿಸುತ್ತದೆ. ಪೋಷಕರು, ಎನ್‌ಜಿಒಗಳು ಮತ್ತು ಸಾರ್ವಜನಿಕರು 1000 ಕ್ಕೂ ಹೆಚ್ಚು ಭಾಗವಹಿ ಭೇಟಿ ನೀಡುವ ನಿರೀಕ್ಷೆಯಿದೆ, ಈ ಕಾರ್ಯಕ್ರಮದ ಮೂಲಕ ಅಂಗವಿಕಲ ವ್ಯಕ್ತಿಗಳ ಸಮಾಜದ ಮೌಲ್ಯಯುತ, ಸೇರ್ಪಡೆಗೊಂಡ ಮತ್ತು ಹೆಮ್ಮೆಯ ಭಾಗವೆಂದು ಭಾವಿಸುವಂತೆ ಮಾಡಲಾಗುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಾಸ್ವಾಮಿಗಳು ಲೋಕ ಕಲ್ಯಾಣ ಗೋಸ್ಕರ ಮೌನ ಅನುಷ್ಠಾನ

**ಮಲ್ಲಮ್ಮ ನುಡಿ ವಾರ್ತೆ**




ಬಸವಕಲ್ಯಾಣ :- ತಾಲೂಕಿನ ಮಂಠಾಳ ಗ್ರಾಮದ ಶ್ರೀ ಗುರುಲಿಂಗೇಶ್ವರ ಚೌಕಿ ಮಠದ ಪೂಜ್ಯ ಶ್ರೀ. ಮ. ನಿ. ಪ್ರ. ಅಭಿನವ ಚನ್ನಬಸವ ಮಹಾಸ್ವಾಮಿಗಳು ಲೋಕ ಕಲ್ಯಾಣ ಗೋಸ್ಕರ ದಿನಾಂಕ 21 ರಿಂದ ಅಕ್ಟೋಬರ್ 2 ರ ವರೆಗೆ 11 ದಿನಗಳ ಮೌನ ಅನುಷ್ಠಾನ ಕೈ ಗೂಳ್ಳಲಿದ್ದಾರೆ. ಬರುವ 2 ರಂದು ಬೆಳಗ್ಗೆ ಮೌನ ಅನುಷ್ಠಾನ ಮಂಗಲಗೊಳ್ಳಲಿದೆ ಎಂದು ಮಲ್ಲಿಕಾರ್ಜುನ ಪೋಲಿಸ್ ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ: ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಚಾಲನೆ ನೀಡಿದ ಜಿಲ್ಲಾಡಳಿತ

# ಸಾರ್ವಜನಿಕರು ಸಮೀಕ್ಷೆಗೆ ಸಹಕರಿಸಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.23-ರಾಜ್ಯಹಿಂದುಳಿದ ವರ್ಗಗಳ ಆಯೋಗದಿಂದ ರಾಜ್ಯಾದ್ಯಂತಆರಂಭಗೊಂಡಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ನಡೆಸುವ ಸಮೀಕ್ಷಾಕಾರ್ಯಕ್ಕೆಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ಬಳ್ಳಾರಿ ನಗರದ ಗುಗ್ಗರಹಟ್ಟಿಯ ವೆಂಕಟಮ್ಮ ಕಾಲೋನಿಯಲ್ಲಿ ಸೋಮವಾರ ಚಾಲನೆ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿರ್ದೇಶನದಂತೆ ರಾಜ್ಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಬೆಳವಣಿಗೆಗೆ ಸಮೀಕ್ಷೆಯು ಆರಂಭಗೊಂಡಿದೆ. ಈ ಸಮೀಕ್ಷಾ ಕಾರ್ಯವು ಅಕ್ಟೋಬರ್ 7 ರ ವರೆಗೆ ನಡೆಯಲಿದೆ. ಇದಕ್ಕೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. 60 ಪ್ರಶ್ನಾವಳಿಗಳುಳ್ಳ ಸಮೀಕ್ಷಾ ಕಾರ್ಯವು ಆಪ್ ಮೂಲಕ ನಡೆಯಲಿದ್ದು, ಇದಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಕೋರಿದರು.

ಸಮೀಕ್ಷಾ ಕಾರ್ಯಕ್ಕೆ ತರಬೇತಿ ಪಡೆದ ಮಾಸ್ಟರ್ ಟ್ರೇನರ್‌ಗಳು ತಮ್ಮ ಕೆಳಹಂತದ ಗಣತಿ-ದಾರರು ಮತ್ತು ಮೇಲ್ವಿಚಾರಕರಿಗೆ ಮಾರ್ಗದರ್ಶನ ಮಾಡಲಾಗಿದೆ. ಪ್ರತಿ 108 ಮನೆಗಳಿಗೆ ಒಬ್ಬ ಗಣತಿದಾರ, 20 ಗಣತಿದಾರರಿಗೆ ಒಬ್ಬರು ಮೇಲ್ವಿಚಾರಕರಂತೆ ನೇಮಿಸಿ ಸಮೀಕ್ಷೆ ನಡೆಸಲಾಗುತ್ತಿದೆ. ಯಾವ ಕುಟುಂಬವೂ ಸಮೀಕ್ಷೆಯಿಂದ ಹೊರಗುಳಿಯದಂತೆ ಎಚ್ಚರದಿಂದ ಕಾರ್ಯನಿರ್ವಹಿಸಲು ಸೂಚನೆ ನೀಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ ಸೇರಿದಂತೆ ಸಮೀಕ್ಷಾದಾರರು, ಸಾರ್ವಜನಿಕರು ಇದ್ದರು.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ವೃತ್ತಿಪರ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**



ಕೊಪ್ಪಳ : ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗಾಗಿ ವೃತ್ತಿಪರ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡಲಾಗುತ್ತಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳು ಅಲ್ಪಸಂಖ್ಯಾತರ ನಿರ್ದೇಶನಾಲಯದ ಜಾಲತಾಣ https://dom.karnataka.gov.in ದಲ್ಲಿ ಲಭ್ಯವಿರುವ ಅರ್ಜಿ ನಮೂನೆಯನ್ನು ಪಡೆದು ಮಾರ್ಗಸೂಚಿಗಳನ್ವಯ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಅಕ್ಟೋಬರ್ 3 ಕೊನೆಯ ದಿನವಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು.

ವಿದ್ಯಾರ್ಥಿಗಳು ಅಲ್ಪಸಂಖ್ಯಾತ ಸಮುದಾಯ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಜೈನ್, ಬೌದ್ಧ ಮತ್ತು ಪಾರ್ಸಿ ಜನಾಂಗಕ್ಕೆ ಸೇರಿದವರಾಗಿರಬೇಕು. ವಿದ್ಯಾರ್ಥಿಯ ಗರಿಷ್ಠ ವಯೋಮಿತಿ ಕನಿಷ್ಠ 18 ಹಾಗೂ ಗರಿಷ್ಠ 35 ವರ್ಷ ನಿಗದಿಪಡಿಸಲಾಗಿದೆ (ಅರ್ಜಿ ಸಲ್ಲಿಸುವ ಅಂತಿಮ ದಿನಾಂಕದೊಳಗೆ). ಕೇಂದ್ರ ಮತ್ತು ರಾಜ್ಯ ಸರ್ಕಾರದ ನೌಕರಿಯಲ್ಲಿರುವ ಅಭ್ಯರ್ಥಿಗಳು ಅರ್ಹರಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಜಿಲ್ಲಾ ಅಲ್ಪಸಂಖ್ಯಾತರ ಕಛೇರಿ ಹಾಗೂ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಕೊಪ್ಪಳ: 8088894549, ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಗಂಗಾವತಿ: 9986244408, ಕುಷ್ಟಗಿ: 8880482486, ಯಲಬುರ್ಗಾ: 8095191406 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿ ರವಿ ಪೂಜಾರ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಜನಾದ್ರಿಯ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ: ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ

**ಮಲ್ಲಮ್ಮ ನುಡಿ ವಾರ್ತೆ**

ಕೊಪ್ಪಳ : ಜನಾದ್ರಿಯ ಎಲ್ಲಾ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಎಂದು ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ ಇಟ್ನಾಳ ಅವರು ಸೂಚಿಸದರು.

ಅವರು ಶನಿವಾರ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಅಂಜನಾದ್ರಿಯಲ್ಲಿ ಗಂಗಾವತಿ ಶಾಸಕರೊಂದಿಗೆ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ವಿವಿಧ ಅಭಿವೃದ್ಧಿ ಕಾಮಗಾರಿಗಳ ವೀಕ್ಷಣೆ ಮಾಡಿ, ನಂತರ ಪ್ರವಾಸೋದ್ಯಮ ಇಲಾಖೆಯಿಂದ ಆಯೋಜಿಸಲಾದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಂಜನಾದ್ರಿಗೆ ಸಂಬಂಧಿಸಿದ ಕಾಮಗಾರಿಗಳ ಬಾರ್ ಚಾಟ್ ತಕ್ಷಣ ಒದಗಿಸಿ, ಈಗಾಗಲೇ ಕೈಗೊಂಡ ಎಲ್ಲಾ ಕೆಲಸಗಳನ್ನು ನವೆಂಬರ್ ಅಂತ್ಯದಲ್ಲಿ ಪೂರ್ಣಗೊಳಿಸಲು ಪ್ರಯತ್ನಿಸಬೇಕು. ಮೊದಲು ಅಂಜನಾದ್ರಿ ಬೆಟ್ಟಕ್ಕೆ ಸಂಪರ್ಕ ಕಲ್ಪಿಸುವಂತಹ ಹಿಂಬದಿಯ ರಸ್ತೆಗಳಿಗೆ ಒತ್ತು ನೀಡಿ. ಅಂಜನಾದ್ರಿ ಬೆಟ್ಟದ ಹತ್ತಿರ ಪ್ರಗತಿಯಲ್ಲಿರುವ ಪ್ರವಾಸಿ ಮಂದಿರ (ಡಾರ್ಮಿಟರಿ Block ABC ) ಕಾಮಗಾರಿಗಳನ್ನು ವೀಕ್ಷಿಸಿ ಡಿಸೆಂಬರ ತಿಂಗಳಲ್ಲಿ ಹನುಮಮಾಲಾ ಕಾರ್ಯಕ್ರಮ ಇರುವುದರಿಂದ ಪ್ರವಾಸಿಗರು ಹಾಗೂ ಭಕ್ತಾದಿಗಳ ಅನುಕೂಲಕ್ಕಾಗಿ ತ್ವರಿತಗತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಹಾಗೂ ಡಾರ್ಮಿಟರಿ ಬ್ಲಾಕ್‌ಗಳಿಗೆ ಅಗತ್ಯವಿರುವ, ವಿದ್ಯುತ್ ಸಂಪರ್ಕ, ಕುಡಿಯುವ ನೀರು, ಸೆಪ್ಟಿಕ್ ಟ್ಯಾಂಕ್, ಬೋರ್‌ವೆಲ್, ಪಾತ್ ವೇ ಕಾಮಗಾರಿಗಳನ್ನು ಶೀಘ್ರವಾಗಿ ಟೆಂಡರ್ ಕರೆದು ಅನುಷ್ಠಾನಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಪ್ರದಕ್ಷಿಣ ಪಥ ಹಾಗೂ ಥೀಮ್ ಆಧಾರಿತ ಮೆಟ್ಟಿಲುಗಳ ಕಾಮಗಾರಿಗಳಿಗೆ ಅಗತ್ಯವಿರುವ ಭೂಮಿಗೆ ಅರಣ್ಯ ಇಲಾಖೆಯಿಂದ ನಿರಾಕ್ಷೇಪಣ ಪತ್ರ ಪಡೆಯಲು ಎಲ್ಲಾ ದಾಖಲೆಗಳನ್ನು ಉಪ ಅರಣ್ಯ ಸಂರಕ್ಷಣಾಧಿಕಾರಿಗಳಲ್ಲಿ ಪರಿಶೀಲಿಸಿದ ನಂತರ ಪರಿವೇಶ್ 2.0 ವೆಬ್ಸೈಟ್ ಮೂಲಕ ಅರ್ಜಿ ಸಲ್ಲಿಸಬೇಕು ಹಾಗೂ ಅಂಜನಾದ್ರಿ ಬೆಟ್ಟದ ಮುಖ್ಯ ರಸ್ತೆಯನ್ನು ಅಗಲೀಕರಣ ಮತ್ತು ವಿದ್ಯುತ್ ಕಂಬಗಳನ್ನು ಅಳವಡಿಸಲು ಗಂಗಾವತಿ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಗಂಗಾವತಿ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಗಾಲಿ ಜನಾರ್ಧನ ರೆಡ್ಡಿ ಅವರು ಮಾತನಾಡಿ, ಅಂಜನಾದ್ರಿ ಅಭಿವೃದ್ಧಿಯ ವಿವಿಧ ಕಾಮಗಾರಿಗಳಾದ ಪ್ರದಕ್ಷಿಣೆ ಪಥ, ಮೆಟ್ಟಿಲುಗಳ ವಿನ್ಯಾಸ, ನಿರ್ಮಾಣದ ಕಾರ್ಯವನ್ನು ಆದಷ್ಟು ಬೇಗನೆ ಪೂರ್ಣಗೊಳಿಸಬೇಕು. ನಂತರದಲ್ಲಿ ಕ್ಷೇತ್ರಕ್ಕೆ ಭೇಟಿ ನೀಡುವ ಭಕ್ತರಿಗೆ ಶಾಶ್ವತ ಪ್ರಸಾದ ನಿಲಯ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಒದಗಿಸಬೇಕು. ಅಂಜನಾದ್ರಿಯ ಬೆಟ್ಟ, ಪಂಪಾ ಸರೋವರ, ಆನೆಗುಂದಿಗೆ ಉತ್ತರ ಭಾರತದ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುತ್ತಿದ್ದು, ಹಾಗಾಗಿ ಅವರು ರಸ್ತೆಯ ಪಕ್ಕದಲ್ಲಿ ಅಡುಗೆ ಮಾಡಲು ಅಂಜನಾದ್ರಿಯ ಸುತ್ತ ಮುತ್ತ ಉಳಿದು ಕೊಳ್ಳುತ್ತಾರೆ. ಅವರ ಸುರಕ್ಷತೆ ದೃಷ್ಟಿಯಿಂದ ದೇವಸ್ಥಾನಕ್ಕೆ ಸಂಪರ್ಕಿಸುವ ರಸ್ತೆಗಳ ಅಗಲೀಕರಣ ಮತ್ತು ರಸ್ತೆಯ ಪಕ್ಕದಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸುವುದರಿಂದ ಎಲ್ಲರಿಗೂ ಅನುಕೂಲವಾಗತ್ತದೆ. ಅದ್ದರಿಂದ ಆದಷ್ಟು ಬೇಗ ಈ ವ್ಯವಸ್ಥೆ ಮಾಡಬೇಕು.

ಈಗಾಗಲೇ ಅಂಜನಾದ್ರಿ ಬೆಟ್ಟಕ್ಕೆ ರೋಪ ವೇ ಕಾಮಗಾರಿಯ ಡಿ.ಪಿ.ಆರ್. ರೆಡಿಯಾಗಿದ್ದು ಟೆ-ಂಡರ್ ಹಂತದಲ್ಲಿದೆ. ಅದನ್ನು ಕಾರ್ಯರೂಪಕ್ಕೆ ತರಲು ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಮಾತನಾಡಿ, ಅಂಜನಾದ್ರಿ ಶ್ರೀ ಹನುಮಾನ ಕ್ಷೇತ್ರಕ್ಕೆ ಆಗಮಿಸುವಂತಹ ಭಕ್ತಾದಿಗಳಿಗೆ ಉಳಿದುಕೊಳ್ಳಲು ತಂಗುದಾಣಗಳನ್ನು ನಿರ್ಮಾಣ ಮಾಡುತ್ತಿದ್ದು, ಶಾಪಿಂಗ್ ಕಾಂಪ್ಲೆಕ್ಸ್ ಕಟ್ಟಡಗಳು ನಿರ್ಮಾಣವಾಗುತ್ತಿವೆ. ಈಗಾಗಲೇ ಕಾಮಗಾರಿಯು ಕೊನೆಯ ಹಂತದಲ್ಲಿದ್ದು, ಇನ್ನೂ ಬಾಕಿ ಉಳಿದ ಕೆಲಸಗಳಾದ ಶೌಚಾಲಯ, ಟೈಲ್ಸ್ ವರ್ಕ್, ಲ್ಯಾಂಡ್ ಸ್ಕೇಪ್, ಗಾರ್ಡನ್ ನಿರ್ಮಾಣ, ಕಂಪೌಂಡ್, ಪೇಟಿಂಗ್ ಹಾಗೂ ಇತರೆ ಕೆಲಸಗಳಿಗೆ ಸಂಬಂಧಿಸಿದಂತೆ ಹಂತ ಹಂತವಾಗಿ ಬಾರ್ ಚಾರ್ಟ್ ಗಳನ್ನು ಸಿದ್ದಪಡಿಸಿ, ಎಲ್ಲಾ ಕೆಲಸಗಳನ್ನು ಆದಷ್ಟು ಬೇಗನೆ ಪೂರ್ಣಗೊಳಿಸಬೇಕು ಎಂದರು. ಈ ಸಂದರ್ಭದಲ್ಲಿ ಕೊಪ್ಪಳ ಉಪವಿಭಾಗ ಅಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರದ ಆಯುಕ್ತರಾದ ರಮೇಶ, ಗಂಗಾವತಿ ಡಿವೈಎಸ್ಪಿ ಸಿದ್ದಲಿಂಗಪ್ಪಗೌಡ ಪಾಟೀಲ, ಪುರಾತತ್ವ ಮತ್ತು ವಸ್ತು ಪರಂಪರೆ ಸಂಗ್ರಹಾಲಯ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ ನಾಯ್ಕ್, ಗಂಗಾವತಿ ತಹಶಿಲ್ದಾರ ಯು.ನಾಗರಾಜ, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಯಂ.ಹೆಚ್. ಪ್ರಕಾಶ್ ರಾವ್ ಹಾಗೂ ಸೃಷ್ಟಿ ಆರ್ಕಿಟೆಕ್ಟ್ ಮುಖ್ಯಸ್ಥ ಶ್ರೀಪಾದ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅ.07 ರಂದು ಮಹರ್ಷಿ ವಾಲ್ಮೀಕಿ ಜಯಂತಿ; ಜಿಲ್ಲಾಡಳಿತದಿಂದ ಅರ್ಥಪೂರ್ಣ ಆಚರಣೆ-ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ

**ಮಲ್ಲಮ್ಮ ನುಡಿ ವಾರ್ತೆ**




ಬಳ್ಳಾರಿ,ಸೆ.23-ಬರುವ ಅಕ್ಟೋಬರ್ 07 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಜಿಲ್ಲಾಡಳಿತದಿಂದ ಅರ್ಥಪೂರ್ಣವಾಗಿ ಆಚರಿಸಲು ಎಲ್ಲಾ ರೀತಿಯ ಸಿದ್ಧತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ಹೇಳಿದರು.

ಜಿಲ್ಲಾ ಕೇಂದ್ರದಲ್ಲಿ ಸೀಗೆ ಹುಣ್ಣಿಮೆ ದಿನದಂದು ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕುರಿತಂತೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸೋಮವಾರ ಕರೆದಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹನೀಯರ ಜೀವನ ಚರಿತ್ರೆ, ಸಮಾಜಕ್ಕೆ ನೀಡಿರುವ ಸಾಧನೆಯ ಕೊಡುಗೆಗಳ ಕುರಿತು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಸರ್ಕಾರ ಜಯಂತಿ ಕಾರ್ಯಕ್ರಮಗಳನ್ನು ಆಚರಿಸಲು ನಿರ್ದೇಶಿದೆ. ಹಾಗಾಗಿ ಜಯಂತಿ ಕಾರ್ಯಕ್ರಮಗಳ ಯಶಸ್ವಿಗೆ ಎಲ್ಲರ ಸಹಕಾರವೂ ಅಗತ್ಯವಿದೆ ಎಂದು ತಿಳಿಸಿದರು.

ಅ.07 ರಂದು ಬೆಳಿಗ್ಗೆ 09 ಗಂಟೆಗೆ ನಗರದ ವಾಲ್ಮೀಕಿ ವೃತ್ತದ ಬಳಿಯ ಮಹರ್ಷಿ ವಾಲ್ಮೀಕಿ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುತ್ತದೆ. ಸುತ್ತಲೂ ಸ್ವಚ್ಛತೆ, ಅಲಂಕಾರ ವ್ಯವಸ್ಥೆ ಕೈಗೊಳ್ಳಬೇಕು ಎಂದು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಳಿಕ ಶ್ರೀ ಕನಕದುರ್ಗಮ್ಮ ದೇವಸ್ಥಾನದಿಂದ ಮೆರವಣಿಗೆ ನಡೆಯಲಿದ್ದು, ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಹಳೆ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಮುಂಭಾಗದಿಂದ ತೇರುಬೀದಿಯ ಮಾರ್ಗವಾಗಿ ಹೆಚ್.ಆರ್.ಗವಿಯಪ್ಪ ವೃತ್ತದಿಂದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ, ಬಳಿಕ ನಲ್ಲಚೇರುವು ಪ್ರದೇಶದ ವಾಲ್ಮೀಕಿ ಭವನದ ವೇದಿಕೆ ಕಾರ್ಯಕ್ರಮದವರೆಗೆ ನಡೆಯಲಿದ್ದು, ಸಂಚಾರ ಮಾರ್ಗಕ್ಕೆ ಅಡಚಣೆ-ಯಾಗದಂತೆ ಸೂಕ್ತ ಬಂದೋಬಸ್ತ್ ಕೈಗೊಳ್ಳಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ಮೆರವಣಿಗೆಯಲ್ಲಿ ರಾಮಾಯಣ ಕಥಾ ಸಂಗ್ರಹದ ವೇಷಧಾರಿಗಳು ಒಳಗೊಂಡ ಕಲಾತಂಡಗಳನ್ನು ನಿಯೋಜಿಸಲಾಗುವುದು. ವೇದಿಕೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು. ವಾಲ್ಮೀಕಿ ಅವರ ಕುರಿತು ಅಧ್ಯಯನ ಮಾಡಿರುವ ಸಂಪನ್ಮೂಲ ವ್ಯಕ್ತಿಯ ಉಪನ್ಯಾಸ ಆಯೋಜಿಸಬೇಕು. ಸಮಾಜದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ಸನ್ಮಾನಿಸಲಾಗುವುದು.

ಎಸ್.ಎಸ್.ಎಲ್.ಸಿ,ಪಿ.ಯು.ಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಸಮುದಾಯದ ವಿದ್ಯಾರ್ಥಿಗಳು ಹಾಗೂ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು ಗೌರವಿಸಲಾಗುವುದು ಎಂದರು.

ಕಾರ್ಯಕ್ರಮದ ಬಳಿಕ ಊಟದ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಕೈಗೊಳ್ಳಬೇಕು ಎಂದರಲ್ಲದೇ, ಶಿಷ್ಠಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು. ಜನಪ್ರತಿನಿಧಿಗಳು, ಜಿಲ್ಲಾಮಟ್ಟದ ಅಧಿಕಾರಿಗಳು, ಸಿಬ್ಬಂದಿ, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಹಾಜರಿರಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಯಂತಿ ಆಚರಣೆಗೆ ಸಂಬಂಧಿಸಿದಂತೆ ಸಮಾಜದ ಮುಖಂಡರು ಸೂಕ್ತ ಸಲಹೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಶೋಭಾರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್. ಮಂಜುನಾಥ, ಜಿಲ್ಲಾಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ರಾಜು ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಜಿಲ್ಲೆಯ ವಿವಿಧ ಸಂಘ-ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಸಂಗನಕಲ್ಲು: "ಗ್ಯಾರಂಟಿ ನಡೆ ಗ್ರಾಮ ಪಂಚಾಯತಿ ಕಡೆ"

# ಗ್ರಾಮೀಣ ಭಾಗದ ಜನರಿಗೆ ಶಕ್ತಿ ತುಂಬಿದ ಪಂಚ ಗ್ಯಾರಂಟಿ ಯೋಜನೆಗಳು: ಕೆ.ಇ.ಚಿದಾನಂದಪ್ಪ



**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.23-ಕರ್ನಾಟಕ ರಾಜ್ಯದಲ್ಲಿ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಗ್ರಾಮೀಣ ಭಾಗದ ಜನರ ಜೀವನಕ್ಕೆ ಶಕ್ತಿ ತುಂಬುವ ಯೋಜನೆಗಳಾಗಿವೆ ಎಂದು ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ತಾಲ್ಲೂಕು ಆಡಳಿತ ಮತ್ತು ಗ್ರಾಮ ಪಂಚಾಯಿತಿ ಸಂಗನಕಲ್ಲು ಇವರ ಸಹಯೋಗದಲ್ಲಿ "ಗ್ಯಾರಂಟಿ ನಡೆ ಗ್ರಾಮ ಪಂಚಾಯತಿ ಕಡೆ" ಕಾರ್ಯಕ್ರಮದಡಿ ಬಳ್ಳಾರಿ ತಾಲ್ಲೂಕಿನ ಸಂಗನಕಲ್ಲು ಗ್ರಾಮದ ಗ್ರಾಪಂ ನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ ಮತ್ತು ಫಲಾನುಭವಿಗಳೊಂದಿಗೆ ಪಂಚ ಗ್ಯಾರಂಟಿ ಯೋಜನೆಗಳ ಕುಂದು-ಕೊರತೆಗಳ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಜನಸಾಮಾನ್ಯರಿಗೆ ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ತಲುಪಿಸಬೇಕು ಎಂಬ ಮಹಾದಾಸೆಯಾಗಿದ್ದು, ಅವರ ಆದೇಶದಂತೆ ಪ್ರತಿಯೊಂದು ಗ್ರಾಮದ ಗ್ರಾಪಂ ಮಟ್ಟದಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ತಲುಪಿಸುವಲ್ಲಿ ಆಗುವ ಲೋಪದೋಷಗಳು ಹಾಗೂ ಈ ಯೋಜನೆಗಳಿಂದ ಹೊರಗುಳಿದ ಫಲಾನುಭವಿಗಳ ಕುರಿತು ಚರ್ಚಿಸಲು "ಗ್ಯಾರಂಟಿ ನಡೆ ಗ್ರಾಮ ಪಂಚಾಯತಿ ಕಡೆ" ಎಂಬ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳಿಗೆ ಸುಮಾರು 51 ಸಾವಿರ ಕೋಟಿ ಅನುದಾನ ಖರ್ಚು ಮಾಡಿದ್ದರೂ ಅಭಿವೃದ್ಧಿ ಯೋಜನೆಗಳಿಗೆ ಹಣದ ಕೊರತೆ ಆಗದಂತೆ ಸರ್ಕಾರ ಕ್ರಮ ಕೈಗೊಂಡಿ-ದೆ. ಪ್ರತಿ ಪಕ್ಷಗಳು ನೀಡುವ ಟೀಕೆಗಳಿಗೆ ಕಿವಿಕೊಡದೇ ಇಂತಹ ಜನಪ್ರಿಯ ಕಾರ್ಯಕ್ರಮಗಳು ನಿರಂತರವಾಗಿ ನಡೆಯಲಿವೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯವು ಎಲ್ಲಾ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿದ್ದು, ಬಸವಣ್ಣನವರ ಆದರ್ಶ ಪರಿಕಲ್ಪನೆಗಳನ್ನು ಅಳವಡಿಸಿಕೊಂಡು ಸರ್ಕಾರವು ಈ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಮಹಿಳೆಯರ ಕನಸುಗಳ ನನಸಾಗಿಸುವ ಶಕ್ತಿ ಯೋಜನೆ, ಬಡವರ ಕತ್ತಲೆಯ ಬದುಕು ಬೆಳಗಿದ ಗೃಹ ಜ್ಯೋತಿ ಯೋಜನೆ, ಬಡವರ ಹಸಿವು ನಿಗಿಸಿದ ಅನ್ನಭಾಗ್ಯ ಯೊಜನೆ, ಮನೆಯ ಯಾಜಮಾನಿಯ ಖರ್ಚು ವೆಚ್ಚಗಳಿಗೆ ಗೃಹಲಕ್ಷ್ಮೀ ಯೋಜನೆ, ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಅನುಕೂಲಕ್ಕೆ ಯುವನಿಧಿ ಯೋಜನೆ. ಈ ಎಲ್ಲಾ ಯೋಜನೆಗಳು ಬಡವರ ಪಾಲಿಗೆ ಆಶಾಕಿರಣವಾಗಿವೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪೈಕಿ ಗೃಹಲಕ್ಷ್ಮೀ ಯೋಜನೆಯ 3 ತಿಂಗಳ ಬಾಕಿ ಇದ್ದ ಹಣವನ್ನು ಶೀಘ್ರದಲ್ಲೇ ಬಿಡುಗಡೆಗೊಳಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಗೋನಾಳ್ ನಾಗಭೂಷಣ ಗೌಡ ಅವರು ಮಾತನಾಡಿ, ಬಳ್ಳಾರಿ ತಾಲ್ಲೂಕಿನಲ್ಲಿ ಶಕ್ತಿ ಯೋಜನೆಯಡಿ 112.17 ಕೋಟಿ ರೂ., ಅನ್ನಭಾಗ್ಯ ಯೋಜನೆಯಡಿ 125.60 ಕೋಟಿ ರೂ., ಗೃಹಲಕ್ಷ್ಮೀ ಯೋಜನೆಯಡಿ 481.33 ಕೋಟಿ ರೂ., ಗೃಹಜ್ಯೋತಿ ಯೋಜನೆಯಡಿ 175.5 ಕೋಟಿ ರೂ. ಮತ್ತು ಯುವನಿಧಿ ಯೋಜನೆಯಡಿ 7.23 ಕೋಟಿ ರೂ. ಅನುದಾನ ಪಾವತಿಸಲಾಗಿದೆ ಎಂದು ತಿಳಿಸಿದರು.

ಬಳ್ಳಾರಿ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾರ್ಯಕ್ರಮ ಮಾಡಿ ಗ್ಯಾರಂಟಿ ಯೋಜನೆಗಳ ಕುರಿತಾಗಿ ಅಲ್ಲಿಯ ಜನರ ದೂರು ಸ್ವೀಕರಿಸಿ, ಸ್ಥಳದಲ್ಲಿಯೇ ಸೂಕ್ತ ಪರಿಹಾರ ನೀಡಲು ಸರ್ಕಾರ ಮುತುವರ್ಜಿ ವಹಿಸಿದೆ. ಈ ಯೋಜನೆಗಳಡಿ ಕೇವಲ ಮಹಿಳೆಯರಷ್ಟೇ ಫಲಾನುಭವಿಗಳಾಗಿಲ್ಲ, ಪರೋಕ್ಷವಾಗಿ ಪುರುಷರು, ವಿದ್ಯಾರ್ಥಿಗಳು ಸಹ ಫಲಾನುಭವಿಗಳಾಗಿದ್ದಾರೆ. ಈ ಯೋಜನೆಗಳಿಗೆ ಸಂಬಂಧಿಸಿದಂತೆ ಸಮಸ್ಯೆಗಳು, ತಾಂತ್ರಿಕ ದೋಷ ಮತ್ತು ಇನ್ನಿತರೆ ತೊಂದರೆಗಳಿದ್ದರೆ ನೇರವಾಗಿ ಸಂವಾದ ನಡೆಸಿ ಪರಿಹಾರ ಕಂಡುಕೊಳ್ಳಬಹುದು ಎಂದರು.

ಕಾರ್ಯಕ್ರಮಕ್ಕೂ ಮುನ್ನ ಸಂವಿಧಾನ ಪೀಠಿಕೆ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ವಿಜಯಕುಮಾರ್, ಗ್ರಾಪಂ ಅಧ್ಯಕ್ಷರಾದ ಗೋವಿಂದಮ್ಮ ನಾಗಿರೆಡ್ಡಿ, ಉಪಾಧ್ಯಕ್ಷರಾದ ಮಾರೆಕ್ಕ ಹನುಮಂತಪ್ಪ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ವೆಂಕಟೇಶ್, ಕೆ-ಕೆಆರ್‌ಟಿಸಿ ಸಾರಿಗೆ ಇಲಾಖೆಯ ಬಸವರಾಜ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೋಹನ ಕುಮಾರಿ, ಆಹಾರ ಇಲಾಖೆಯ ಶರಣಯ್ಯ, ಜೆಸ್ಕಾಂನ ಕಾರ್ಯನಿವಾಹಕ ಅಭಿಯಂತರರಾದ ಮೋಹನಬಾಬು, ಸಂಗನಕಲ್ಲು ಗ್ರಾಪಂ ಅಭಿವೃದ್ಧಿ ಅಧಿಕಾರಿ ಆದಿಲಕ್ಷ್ಮೀ, ಎಸ್‌ಡಿಎಂಸಿ ಅಧ್ಯಕ್ಷ ಗೃಹಲಕ್ಷ್ಮೀಪತಿ, ಮುಖಂಡರಾದ ಅಲ್ಲಂ ಪ್ರಶಾಂತ್ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ಸಾರ್ವಜನಿಕರು ಇತರರು ಉಪಸ್ಥಿತರಿದ್ದರು.

# ಸಿರುಗುಪ್ಪ: ಸೆ.23 ರಿಂದ 30 ರ ವರೆಗೆ ವಿವಿಧೆಡೆ ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಸೆ.23-ಸಿರುಗುಪ್ಪ ಪಟ್ಟಣದ ವೈಷ್ಣವಿ ಹೋಟೆಲ್ ನಿಂದ ರಿಲಾಯನ್ಸ್ ಟ್ರೆಂಡ್‌ವರೆಗೆ ಎನ್‌ಹೆಚ್ 150ಎ ದ ರಸ್ತೆ ಅಗಲೀಕರಣ ಕಾಮಗಾರಿ ನಡೆಯುತ್ತಿರುವುದರಿಂದ ರಸ್ತೆ ಬದಿಯ ವಿದ್ಯುತ್ ಮಾರ್ಗಗಳನ್ನು ಸ್ಥಳಾಂತರಿಸುವ ಕಾರ್ಯ ಕೈಗೊಳ್ಳಲಾಗುತ್ತಿದ್ದು, ಸೆ.23 ರಿಂದ 30 ರ ವರೆಗೆ 110/33/11ಕೆವಿ ಸಿರುಗುಪ್ಪ ವಿದ್ಯುತ್ ವಿತರಣಾ ಕೇಂದ್ರದಿಂದ ಹಾದು ಹೋಗುವ ಎಫ್‌ಐಬಿ ಎಪಿಎಂಸಿ ಫೀಡರ್ ನಿಂದ ವಿದ್ಯುತ್ ಪೂರೈಕೆಯಾಗುವ ಸಿರುಗುಪ್ಪ ಪಟ್ಟಣದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಸಿರುಗುಪ್ಪ ಪಟ್ಟನದ ವಿಶ್ವಜ್ಯೋತಿ ಶಾಲೆ ಹತ್ತಿರ, ಮುರಾರಿ ಬಡಾವಣೆ, ಮಹಾವೀರ ಬಡಾವಣೆ, ಸಿರಿ ನಗರ, ದೇವಲಾಪುರ ಕ್ರಾಸ್, ಮಹಾವೀರ ಎನ್‌ಕ್ಲೇವ್, ವಿವೈ ಸಿಟಿ, ಹೈದರ್ ಅಲಿ ಕಾಲೋನಿ, ಎವಿಎಸ್ ಫಂಕ್ಷನ್ ಹಾಲ್, ಸಿದ್ದಪ್ಪ ನಗರ, ಸಾಯಿಬಾಬಾ ದೇವಸ್ಥಾನ, ದೇವಲಾಪುರ ಗ್ರಾಮ, ಲಕ್ಷ್ಮೀ ವೆಂಕಟೇಶ್ವರ ನಗರ, ರಾಘವಯ್ಯ ಕಾಲೋನಿ, ಎಪಿಎಂಸಿ ಆವರಣ, ಕುವೆಂಪು ನಗರ, ತ್ಯಾಗರಾಜ ನಗರ, ನೀಲಾಂಜನೇಯ ಬಡಾವಣೆ, ವಿನಾಯಕ ನಗರ, ಕೃಷ್ಣ ನಗರ, ಸೌಭಾಗ್ಯ ನಗರ, ಹನುಮಂತ ನಗರ, ಆಶ್ರಯ ಕಾಲೋನಿ, ಕೆಹೆಚ್‌ಬಿ ಕಾಲೋನಿ, ಕರಿಬಸಪ್ಪ ಬಡಾವಣೆ, ವೆಂಕಟಾದ್ರಿ ಬಡಾವಣೆ, ಜಯನಗರ, ಶಾಂತಿನಗರ, ಕುಮಾರಸ್ವಾಮಿ ಬಡಾವಣೆ, ಕುಂಬಾರ ಓಣಿ, ವಿಷ್ಣು ವಿಲಾಸ ನಗರ, ಶ್ರೀ ಕೃಷ್ಣದೇವರಾಯ ಶಾಲೆ ಹತ್ತಿರ ಸೇರಿದಂತೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು, ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಿರುಗುಪ್ಪ ಜೆಸ್ಕಾಂ ನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮದ ಕಟ್ಟ ಕಡೆ ವ್ಯಕ್ತಿಗೂ ಸರ್ಕಾರದ ಯೋಜನೆ ತಲುಪಿಸುವುದು ನಮ್ಮ ಜವಬ್ದಾರಿ : ಸಂಗಮೇಶ್ ಗುತ್ತಿ



**ಮಲ್ಲಮ್ಮ ನುಡಿ ವಾರ್ತೆ**

ಕುಕನೂರ: ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕುಕನೂರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಸಂಗಮೇಶ ಗುತ್ತಿ ಅವರ ಅಧ್ಯಕ್ಷತೆಯಲ್ಲಿ ಗ್ಯಾರಂಟಿ ಯೋಜನೆಗಳ ನಡೆ ಪಟ್ಟಣ ಪಂಚಾಯತಿ ಕಡೆ ಹಾಗೂ ಕುಕನೂರ ಪಟ್ಟಣ ಪಂಚಾಯತಿ ಮಟ್ಟದ ಮೇಲ್ವಿಚಾರಣಾ ಸಭೆಯಲ್ಲಿ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಗೃಹ ಲಕ್ಷ್ಮೀ, ಯುವನಿಧಿ, ಶಕ್ತಿ ಯೋಜನೆ, ಗೃಹಜ್ಯೋತಿ ಹಾಗೂ ಅನ್ನಭಾಗ್ಯ ಯೋಜನೆಗಳು ತಾಲೂಕಿನ ಕಟ್ಟ ಕಡೆ ವ್ಯಕ್ತಿಗೂ ತಲುಪಬೇಕು. ಅದಕ್ಕಾಗಿ ಅಧಿಕಾರಿಗಳು ಜನಪ್ರತಿನಿಧಿಗಳು ಸ್ಪಂದಿಸಬೇಕು ಎಂದರು.

ಗೃಹಲಕ್ಷ್ಮೀ ನೊಂದಣಿಯಲ್ಲಿ 60783 ಫಲಾನುಭವಿಗಳಲ್ಲಿ ನಲ್ಲಿ 60799 ಫಲಾನುಭವಿಗಳಿಗೆ ಯೋಜನೆ ತಲುಪಿದೆ, ಶೇಕಡಾ 99% ಸಾಧನೆ ಮಾಡಲಾಗಿದೆ.

ಸುವಿಧಾ ಕಾರ್ಯಕ್ರಮದಡಿ 75 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮನೆ ಬಾಗಿಲಿಗೆ ರೇಷನ್ ತಲುಪಿಸುವ ಕಾರ್ಯ ಸರ್ಕಾರ ಪ್ರಾರಂಭಿಸಿದೆ ಇದ-ರಿಂದ ಹಿರಿಯ ನಾಗರೀಕರಿಗೆ ಸಹಾಯವಾಗಲಿದೆ.

ಶಕ್ತಿ ಯೋಜನೆ ಮೂಲಕ ಮಹಿಳೆಯರು, ಸ್ವಾವಲಂಬನೆ ಬದುಕು ಕಟ್ಟಿಕೊಳ್ಳಲು ಸಹಾಯವಾಗಿದೆ.

ಶಾಲಾ ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳಿಗೆ ಚಾಲಕರು ಸ್ಪಂದಿಸಬೇಕು, ಯುವ ನಿಧಿ, ಗೃಹ ಲಕ್ಷ್ಮೀ, ಗೃಹ ಜ್ಯೋತಿ ಯೋಜನೆಗಳು ಜನರ ಜೀವನಮಟ್ಟವನ್ನು ಸುಧಾರಿಸಿವೆ ಎಂದರು.

ಸ್ಥಳದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ ಬಿರಾದರ, ತಹಶೀಲ್ದಾರರಾದ ಪ್ರಾಣೇಶ್ ಎಚ್, ಸಿ ಡಿಪಿಓ ಬೆಟ್ಟದೇಶ ಮಾಳೆಯಕೊಪ್ಪ, ಜಿಲ್ಲಾ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಕಾಸೀಮ್ ಸಾಬ್ ತಳಕಲ್, ಪಟ್ಟಣ ಪಂಚಾಯತಿ ಅಧ್ಯಕ್ಷರಾದ ಲಲಿತಮ್ಮ ಯಡಿಯಾಪೂರ, ಹಾಗೂ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ನಬಿಸಾಬ್ ಕಂದಗಲ್, ಪಟ್ಟಣ ಪಂಚಾಯತ ಸದಸ್ಯರಾದ ಸಿರಾಜ್ ಕರ್ಮುಡಿ, ರಾಮಣ್ಣ ಬಂಕದಮನೆ , ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿ ಸದಸ್ಯರು, 5 ಯೋಜನೆಗಳ ಅನುಷ್ಠಾನ ಅಧಿಕಾರಿಗಳು, ಅಂಗನವಾಡಿ ಸಹಾಯಕರು, ಮಹಿಳಾ ಫಲಾನುಭವಿಗಳು ಹಾಜರಿದ್ದರು.

### ಆತ್ಮನಿರ್ಭರತೆ ಅತ್ಯಂತ ಮಹತ್ವಪೂರ್ಣ ವಿಚಾರ
## ರಾಜಶೇಖರ ನಾಗಮುರ್ತಿ ಅಭಿಪ್ರಾಯ



**ಮಲ್ಲಮ್ಮ ನುಡಿ ವಾರ್ತೆ**

ಯಾದಗಿರಿ: ಆತ್ಮನಿರ್ಭರ ಭಾರತ ಚಿಂತನೆ ಅನುಷ್ಠಾನದಿಂದ ಜಾಗತಿಕ ಆರ್ಥಿಕ ಸಂಕಷ್ಟದ ಪ್ರಭಾವ ಭಾರತದ ಮೇಲೆ ಆಗುವುದನ್ನು ತಪ್ಪಿಸಲು ಸಾಧ್ಯ ಎಂದು ರಾಜಶೇಖರ ನಾಗಮುರ್ತಿ ಅವರು ಅಭಿಪ್ರಾಯಪಟ್ಟರು.

ಆತ್ಮನಿರ್ಭರ ಭಾರತ ಸಂಕಲ್ಪ ಅಭಿಯಾನ ಮತ್ತು ಜಿಎಸ್ ಟಿ

ಜಿಲ್ಲಾ ಮಟ್ಟದ ಕಾರ್ಯಾಗಾರವು ಮಂಗಳವಾರ ಬಿಜೆಪಿ ಕಾರ್ಯಾಲಯ ನಡೆಯಿತು. ಆತ್ಮನಿರ್ಭರತೆ ಅತ್ಯಂತ ಮಹತ್ವಪೂರ್ಣ ವಿಚಾರ. ಇದರ ಕುರಿತು ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಬಿಜೆಪಿ ಶಿಸ್ತಿನ ಪಕ್ಷ ನರೇಂದ್ರ ಮೋದಿಜೀ ಅವರು ದಿನವಿಡೀ ಸಭೆಯಲ್ಲಿ ಪಾಲ್ಗೊಂಡಾಗ ಮೊಬೈಲ್ ನೋಡುವುದಿಲ್ಲ ಅದೇ ನಮಗೆ ಆದರ್ಶವಾಗಲಿ ಎಂದು ತಿಳಿಸಿದರು. ಸಮಯ ಪರಿಪಾಲನೆ ಕಡೆಗೂ ಗಮನ ಕೊಡಬೇಕೆಂದು ಸೂಚಿಸಿದರು ಮತ್ತು ಸ್ವದೇಶಿ ಉತ್ಪನ್ನಗಳ ಉತ್ಪಾದಕರ ಮಾಹಿತಿ ಲಭ್ಯ ಇರಬೇಕು ದೀಪಾವಳಿ ಶುಭಾಶಯ ಬ್ಯಾನರ್‌ನಲ್ಲಿ ಸ್ವದೇಶಿ ಉತ್ಪನ್ನದ ಬ್ಯಾನರ್ ಬಳಸಿ ಎಂದು ತಿಳಿಸಿದರು ಅಭಿಯಾನ ಆರಂಭದ ಮಾಹಿತಿಯನ್ನು ನಿಗದಿತ ಪೋರ್ಟಲ್‌ನಲ್ಲಿ ಕೊಡಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ ಮಾತನಾಡಿ ಅವರು ಸಂಸದರಿಂದ ಆರಂಭಿಸಿ, ಕಾರ್ಯಕರ್ತರವರೆಗೆ ಎಲ್ಲರಲ್ಲೂ ನಾವು ಆತ್ಮನಿರ್ಭರ ಭಾರತದ ವಿಷಯದಲ್ಲಿ ಜಾಗೃತಿ ಮೂಡಿಸಬೇಕು ಎಂದು ಮನವಿ ಮಾಡಿದರು. ಕಾರ್ಯಾಗಾರವು ನಾಮಕಾವಾಸ್ತೆ ಆಗಬಾರದು ನಾವೆಲ್ಲರೂ ಎಲ್ಲಿ ಸಾಧ್ಯವೋ ಅಲ್ಲೆಲ್ಲ ಸ್ವದೇಶಿ ಆಗೋಣ ಆ ಮೂಲಕ ಸ್ವಾವಲಂಬಿ ದೇಶ ನಿರ್ಮಿಸಬೇಕಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಯುವ ಮುಖಂಡ ಮಹೇಶರಡ್ಡಿ ಮುದ್ನಾಳ ಕೇಂದ್ರ ಸರಕಾರ ಜಿಎಸ್ ಟಿ ಇಳಿಕೆ ಮಾಡಿ ಜನರಿಗೆ ನವರಾತ್ರಿ ಉಡುಗೊರೆ ನೀಡಿದೆ ದೇಶದ ಇತಿಹಾಸದಲ್ಲಿ ಜಿಎಸ್ ಟಿ ಏರಿಸಿದ್ದನ್ನು ಇಷ್ಟು ದೊಡ್ಡ ಮಟ್ಟದಲ್ಲಿ ಇಳಿಸಿದ ಉದಾಹರಣೆ ಇಲ್ಲ ನರೇಂದ್ರ ಮೋದಿ ಈ ಕೆಲಸ ಮಾಡಿ ಬಡ, ಮಧ್ಯಮ ವರ್ಗದ ಜನರಿಗೆ ಅನುಕೂಲ ಮಾಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೇಲಪ್ಪ ಗುಳಿಗೆ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು ಈ ಅಭಿಯಾನ ಸೆಪ್ಟೆಂಬರ್‌ನಿಂದ ಡಿಸೆಂಬರ್ ನಡುವೆ ಅಭಿಯಾನ ನಡೆಸಬಕು ಅಕ್ಟೋಬರ್‌ನಲ್ಲಿ ಇದಕ್ಕಾಗಿ ಮಂಡಲಗಳಲ್ಲಿ ಕಾರ್ಯಾಗಾರ ನಡೆಸಿ ಮಾಹಿತಿ ಕೊಡಲಾಗುತ್ತದೆ ಎಂದು ಹೇಳಿದರು.

ಆತ್ಮನಿರ್ಭರ ಭಾರತ ಸಂಕಲ್ಪ ಜಿಲ್ಲಾ ಸಂಚಾಲಕ ಮೋನೇಶ ಬೆಳಿಗೇರಿ ಅವರು ಆತ್ಮನಿರ್ಭರ ಭಾರತ ಸಂಕಲ್ಪ ಪ್ರತಿಜ್ಞೆ ಬೋಧಿಸಿದರು.

ಈ ಸಂದರ್ಭದಲ್ಲಿ ಅಲೆಮಾರಿ ನಿಗಮದ ಮಾಜಿ ಅಧ್ಯಕ್ಷ ದೇವಿಂದ್ರನಾಥ ನಾದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರು ಕಾಮ ಮತ್ತು ಪರುಶುರಾಮ ಕುರಕುಂದಿ, ಜಿಲ್ಲಾ ಉಪಾಧ್ಯಕ್ಷ ಬಸವರಾಜ ಸೋನ್ನದ, ಜಿಎಸ್ ಟಿ ಜಿಲ್ಲಾ ಸಂಚಾಲಕ ಲಕ್ಷ್ಮಿಪುತ್ರ ಮಾಲಿಪಾಟೀಲ, ಆತ್ಮನಿರ್ಭರ ಭಾರತ ಸಂಕಲ್ಪ ಜಿಲ್ಲಾ ಸಹ ಸಂಚಾಲಕ ಶರಣುಗೌಡ ಹಬ್ಬಳ್ಳಿ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಶ್ರೀಧರ ಆರ್ ಸಾಹುಕಾರ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷ ಸುನಿತಾ ಚೌವ್ಹಾಣ್ ಉಪಸ್ಥಿತರಿದ್ದರು.

ಶಿವು ಕೊಂಕಲ್ ನಿರೂಪಿಸಿದರು, ರಮೇಶ್ ದೊಡಮನಿ ವಂದಿಸಿದರು.

## ದೇವಸ್ಥಾನ ಅಭಿವೃದ್ಧಿ ಕಾಮಗಾರಿಗೆ ಶಾಸಕ ಮೇಟಿ ಭೂಮಿ ಪೂಜೆ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.23–ಸಮೀಪದ ರಾಂಪುರ ಹಾಗೂ ಸೀತಿಮನಿ ಪುನರವಸತಿ ಕೇಂದ್ರಗಳಲ್ಲಿರುವ ವಿವಿಧ ದೇವಸ್ಥಾನಗಳ 35 ಲಕ್ಷ ರೂ.ಗಳ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಎಚ್.ವಾಯ್.ಮೇಟಿ ಮಂಗಳವಾರ ಭೂಮಿ ಪೂಜೆ ನೆರವೇರಿಸಿದರು.

ರಾಂಪುರ ಪುನರವಸತಿ ಕೇಂದ್ರದಲ್ಲಿನ ಪಾಂಡುರಂಗ ದೇವಸ್ಥಾನದ 10 ಲಕ್ಷ, ಕನ್ನಿಕಾ ಪರಮೇಶ್ವರಿ ದೇವಸ್ಥಾನ, ಮಕ್ಕಳ ತಾಯಿ ದೇವಸ್ಥಾನ ಹಾಗೂ ಸೀತಿಮನಿ ಪುನರವಸತಿ ಕೇಂದ್ರದಲ್ಲಿರುವ ಮಾರುತೇಶ್ವರ ದೇವಸ್ಥಾನಗಳ ತಲಾ 5 ಲಕ್ಷ ರೂ.ಗಳು ಸೇರಿ ಒಟ್ಟು 25 ಲಕ್ಷ ರೂ.ಗಳ ವೆಚ್ಚದ ಕಾಮಗಾರಿಗಳಿಗೆ ಪೂಜೆ ಮಾಡಿದರು.

ರಾಂಪುರ ಪುನರವಸತಿ ಕೇಂದ್ರದಲ್ಲಿರುವ ಉದಯ ಯುವ ಮಿತ್ತ ಮಂಡಳಿಯ ಸಮುದಾಯ ಭವನ ನಿರ್ಮಾಣದ 10 ಲಕ್ಷ ರೂ.ಗಳ ಕಾಮಗಾರಿಗೆ ಶಾಸಕ ಮೇಟಿ ಭೂಮಿ ಪೂಜೆ ನೆರವೇರಿಸಿದರು.

ಮುಖಂಡರಾದ ಉಮೇಶ ಮೇಟಿ, ಗ್ರಾಪಂ ಅಧ್ಯಕ್ಷ ರಮೇಶ ಆಕಳವಾಡಿ, ವಿಲಾಸ ಇಂಗಳೇಶ್ವರ, ಮುತ್ತು ಗೌಡರ, ಸಂತೋಷ ಲಮಾಣಿ, ಕೃಷ್ಣಾ ಇಂಗಳೆ, ರಾಘವೇಂದ್ರ ಚಿಂತಾ, ಸುರೇಶ ತೇಲಿ, ಪಂಚಾಯತರಾಜ್ ಇಂಜನೀಯರಿಂಗ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಸ್.ಎಂ.ರೇವಡಿ, ಸಹಾಯಕ ಅಭಿಯಂತರ ಪರಶುರಾಮ ಬೇವೂರ, ಭೂಸೇನಾ ನಿಗಮದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಮಹಿಬೂಬ ಯಂಡಿಗೇರಿ, ಗ್ರಾಪಂ ಸದಸ್ಯರು ಇದ್ದರು.

### ನಂದಗಾಂವ್ : ಪ್ರಾಥಮಿಕ ಕೃಷಿ ಪತ್ತಿನ ವಾರ್ಷಿಕ ಸಭೆ.
## ರೈತರ ನೆರವಿಗೆ ನಿಂತ ಸಹಕಾರ ಸಂಘಗಳು



**ಮಲ್ಲಮ್ಮ ನುಡಿ ವಾರ್ತೆ**

ಹುಮನಾಬಾದ್ : ತಾಲ್ಲೂಕಿನ ನಂದಗಾಂವ್ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದಲ್ಲಿ ಶನಿವಾರ ವಾರ್ಷಿಕ ಮಹಾಸಭೆ ಜರುಗಿತು.

ನಂದಗಾಂವ್ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದ ಅಧ್ಯಕ್ಷ ಎಸ್.ಎ. ಅಜೀಜ ಅಬ್ದುಲ್ ರಹಮನ್, ಉಪಾಧ್ಯಕ್ಷ ಧೂಳಪ್ಪ ಕಲ್ಲಪ್ಪಾ ನಿದೇಶಕರರಾದ ಸಂಗಪ್ಪಾ ಶಂಕರಪ್ಪಾ, ಎಂ.ಡಿ. ಮುಖಮೊದ್ದಿನ್ ಮೆಹಬೂಬಸಾಬ, ಎಂ.ಡಿ. ಖಮರೊದ್ದಿನ್ ಹಸನೊದ್ದಿನ್, ಅಬ್ದುಲ ಸೈಯದ ಅಬ್ದುಲ ವಹೀದ, ವಿಠಲ ತುಕಾರಾಮ ಬಸವರಾಜ ಕಾಶಪ್ಪಾ, ಎಂ.ಡಿ. ಸಮಿಯೊದ್ದಿನ್ ಶೆಫಿಯೊದ್ದಿನ್, ನಾಗರಾಜ ಶಂಕರ, ರಜಿಯಾಬೇಗಂ ಹಸನಸಾಬ, ರೇಣುಕಾ ಬಸವರಾಜ, ಮುಖ್ಯ ಕಾರ್ಯನಿರ್ವಾಹಕಿ ನಾಗಜೋತಿ ದೇವರಾಯ, ಸಹಾಯಕ ಲೆಕ್ಕಾಧಿಕಾರಿ ಸತ್ಯಕಲಾ, ಕ್ಯಾಷಿಯರ ಮಹಾನಂದ ಮಾರುತಿ, ಮಹೆಬೂಬ ಇಸಾಕ್‌ಅಲಿ, ಇದ್ದರು.

## ವ್ಯಕ್ತಿಯ ಉನ್ನತಿಗೆ ಪರಿಶ್ರಮ, ಪ್ರಯತ್ನ ಮುಖ್ಯ–ಮಾಢಳ್ಳಿ



**ಮಲ್ಲಮ್ಮ ನುಡಿ ವಾರ್ತೆ**

ಬಾಗಲಕೋಟೆ,ಸೆ.23–ವ್ಯಕ್ತಿಯ ಉನ್ನತಿಗೆ ಪರಿಶ್ರಮ ಹಾಗೂ ಪ್ರಯತ್ನ ಬಹು ಮುಖ್ಯವಾಗಿದೆ ಎಂದು ಬಾಗಲಕೋಟೆ ಕಾಪ್ಸ್ ಅಕಾಡೆಮಿ ವ್ಯವಸ್ಥಾಪಕ ನಿರ್ದೇಶಕ ಬಸವರಾಜ ಮಾಢಳ್ಳಿ ಹೇಳಿದರು.

ತಾಲೂಕಿನ ಬೇವೂರಿನ ಪಿ.ಎಸ್.ಸಜ್ಜನ ಕಲಾ ಮಹಾವಿದ್ಯಾಲಯದ ಎನ್.ಎಸ್.ಎಸ್ ಹಾಗೂ ಐಕ್ಯೂಎಸಿ ಘಟಕ ಮತ್ತು ಬಾಗಲಕೋಟೆ ಕಾಪ್ಸ್ ಅಕಾಡೆಮಿ ಸಹಯೋಗದಲ್ಲಿ ಶನಿವಾರ ನಡೆದ ಸ್ಪರ್ಧಾತ್ಮಕ ಪರೀಕ್ಷೆಗಳ ವಿಶೇಷ ಉಪನ್ಯಾಸ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದ ಅವರು, ಕಾಯಕದಲ್ಲಿ ನಿಷ್ಠೆ, ಪ್ರಾಮಾಣಿಕತೆ, ಪರಿಶ್ರಮವಿದ್ದರೆ ಸಾಮಾನ್ಯ ವ್ಯಕ್ತಿಯೂ ಸಹ ಉನ್ನತ ಸ್ಥಾನಕ್ಕೆ ಏರಬಲ್ಲ ಎಂದರು.

ವಿದ್ಯಾರ್ಥಿಗಳು ಸಾಧಕರಾಗಲು ನಿರಂತರ ಅಧ್ಯಯನ ಅವಶ್ಯಕ. ಶಿಸ್ತು, ಸಮಯಪ್ರಜ್ಞೆ ರೂಢಿಸಿಕೊಂಡು ಪ್ರಯತ್ನಶೀಲರಾಗಿ ಬೆಳೆಯಬೇಕು ಎಂದು ಬಸವರಾಜ ಮಾಢಳ್ಳಿ ಹೇಳಿದರು.

ಕಾಲೇಜಿನ ಐ.ಕ್ಯೂಎಸಿ ಘಟಕದ ಮುಖ್ಯಸ್ಥ ಎ.ಎಮ್. ಗೊರಚಿಕ್ಕನವರ ಮಾತನಾಡಿ, ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ ಒಲವು ತೋರುವುದು ಅವಶ್ಯಕ ಎಂದರು.

ಮಹಾವಿದ್ಯಾಲಯದ ಪ್ರಾಚಾರ್ಯ ಜಗದೀಶ ಭೈರಮಟ್ಟಿ, ವಿಶ್ರಾಂತ ಪ್ರಾಚಾರ್ಯ ಬಿ.ಬಿ.ಬೇವೂರ, ಪ್ರೊ.ಎಸ್.ಎಸ್.ಆದಾಪೂರ, ಪ್ರೊ.ಬಿ.ಎಸ್.ಗೋಡಿ, ಆರ್.ಬಿ.ಕರಡಿಗುಡ್ಡ, ಶಿವು ಕಟಗಿ ಉಪಸ್ಥಿತರಿದ್ದರು.

ಜ್ಯೋತಿ ಗೌಡರ ಸಂಗಡಿಗರು ಪ್ರಾರ್ಥಿಸಿದರು. ಪ್ರೊ.ಎಸ್.ಬಿ.ಹಂಚಿನಾಳ ಸ್ವಾಗತಿಸಿದರು. ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಜಿ.ಎಸ್.ಗೌಡರ ನಿರೂಪಿಸಿದರು. ಡಿ.ವಾಂಯ್.ಬುಡ್ಡಿಯುವರ ವಂದಿಸಿದರು.

ಬಾಗಲಕೋಟೆಯಲ್ಲಿ ಜರುಗಿದ ಯುವಜನೋತ್ಸವದ ಮ್ಯಾರಥಾನ ಸ್ಪರ್ಧೆಯಲ್ಲಿ ಭಾಗಿಯಾಗಿದ್ದ ವಿದ್ಯಾರ್ಥಿಗಳಿಗೆ ಕ್ರೀಡಾ ವಿಭಾಗದ ವತಿಯಿಂದ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

### ಸಾಮಾಜಿಕ ನ್ಯಾಯ ಕುರಿತು ಅರಿವು ತರಬೇತಿ
## ಕೆಲಸದಲ್ಲಿ ಜವಾಬ್ದಾರಿ, ಹೊಣೆಗಾರಿಕೆ ಮುಖ್ಯ : ಕುರೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.23–ಕೆಲಸದಲ್ಲಿ ಪ್ರತಿಯೊಬ್ಬರಿಗೂ ಜವಾಬ್ದಾರಿ ಮತ್ತು ಹೊಣೆಗಾರಿಕೆ ಇರುತ್ತದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಮಂಗಳವಾರ ಮೈಸೂರಿನ ಡಾ.ಬಿ.ಆರ್.ಅಂಬೇಡ್ಕರ ಸಾಮಾಜಿಕ ನ್ಯಾಯ ಮತ್ತು ಸಮಾನತೆ ಕೇಂದ್ರ, ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ತರಬೇತಿ ಸಂಸ್ಥೆ ಸಹಯೋಗದಲ್ಲಿ ಸಾಮಾಜಿಕ ನ್ಯಾಯದ ಕುರಿತು ಒಂದು ದಿನದ ಅರಿವು ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅಧಿಕಾರಿಗಳಾಗಲಿ, ಸಿಬ್ಬಂದಿಗಳಾಗಲಿ ತಮ್ಮ ಹೊಣೆಗಾರಿಕೆ, ಜವಾಬ್ದಾರಿಯನ್ನು ಪೂರ್ಣಗೊಳಿಸಲು ಮಾನವೀಯ ಮೌಲ್ಯಗಳನ್ನು ಅರಿತು ಕೆಲಸ ಮಾಡಬೇಕು ಎಂದರು.

ಸಮಾನತೆಯನ್ನು ಯಾವ ರೀತಿ ತರಬಹುದು, ಸರ್ಕಾರದ ಯೋಜನೆಗಳು ಯಾವ ರೀತಿ ಇದೆ, ಯಾವ ರೀತಿ ಬಳಕೆ ಮಾಡಿಕೊಳ್ಳಬೇಕು ಎಂಬುದನ್ನು ಅರಿತು ಅನುಷ್ಠಾನಕ್ಕೆ ತರುವುದರಿಂದ ತಳಸಮುದಾಯಗಳ ಅಭಿವೃದ್ಧಿ ಸಾಧ್ಯವಾಗುತ್ತದೆ. ಆಡಳಿತದಲ್ಲಿ ಪ್ರಮುಖವಾಗಿ ಕಡತ ನಿರ್ವಹಣೆ ಮತ್ತು ಕಾನೂನು ಪರಿಜ್ಞಾನ ಎಂಬ ಎರಡು ಅಂಶಗಳು ಮುಖ್ಯವಾಗಿವೆ. ನಿಗದಿತ ಕಾಲಾವಧಿಯಲ್ಲಿ ಸೌಲಭ್ಯ, ಸೇವೆಗಳ ಪೂರೈಕೆಗೆ ಕಡತ ನಿರ್ವಹಣೆ ಅಗತ್ಯ ಮತ್ತು ಸಮರ್ಪಕ ಆಡಳಿತಕ್ಕೆ ಬೇಕಾದ ಕಾನೂನು ಪರಿಜ್ಞಾನ, ಕಾಯ್ದೆ ಸೇರಿದಂತೆ ಸಂವಿಧಾನ ಅಂಶಗಳ ಬಗೆಗೆ ಅರಿವು ಮುಖ್ಯ ಎಂದು ಕುರೇರ ಹೇಳಿದರು.

ಡಿದರ್ಜೆ ನೌಕರರಿಂದ ಹಿಡಿದು ಜಿಲ್ಲಾಧಿಕಾರಿಗಳವರೆಗೂ ಎಲ್ಲರಿಗೂ ಅವರವರ ಜವಾಬ್ದಾರಿ ಮತ್ತು ಹೊಣೆಗಾರಿಕೆಗಳಿವೆ. ಆದ್ದರಿಂದ ಅಧಿಕಾರಿ ವರ್ಗದಲ್ಲಿ ಯಾವುದೇ ರೀತಿಯ ಬೇಧ ಭಾವವಿರದೇ ಆಡಳಿತದ ಸಮರ್ಪಕ ನಿರ್ವಹಣೆ ಅವಶ್ಯವಾಗಿದೆ. ಜನರ ಸಮಸ್ಯೆಗಳಿಗೆ ಯಾವುದೇ ನಕಾರಾತ್ಮಕವಾಗಿ ವರ್ತಿಸದೇ ಸಕಾರಾತ್ಮಕವಾಗಿ ಸ್ಪಂದಿಸುವ ಕೆಲಸವಾಗಬೇಕೆಂದು ಅವರು ಹೇಳಿದರು.

ಕಾರ್ಯಾಗಾರದಲ್ಲಿ ಸುಸ್ಥಿರ ಸಮಾಜ, ಸಾಮಾಜಿಕ ನ್ಯಾಯದ ಮಹತ್ವ ಮತ್ತು ಪರಿಕಲ್ಪನೆ ಕುರಿತು ಕೆ.ಆರ್.ಶಂಕರ, ದೌರ್ಜನ್ಯ ತಡೆ ಕಾಯ್ದೆ ಕುರಿತು ಉಪ ಪೋಲೀಸ್ ಅಧೀಕ್ಷಕ ಗಜಾನನ ಸುತಾರೆ, ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ ವಿಷಯ ಕುರಿತು ಸಿದ್ದಾರ್ಥ ಗೋಠೆ ತರಬೇತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ಎಂ.ಎಸ್.ನಟರಾಜ, ಜಿಲ್ಲಾ ತರಬೇತಿ ಸಂಸ್ಥೆಯ ಬೋಧಕ ಮಲ್ಲಿಕಾರ್ಜುನ ಗುಡೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹಜರತ್ ಟಿಪ್ಪು ಸುಲ್ತಾನ್ ಸಂಘದಿಂದ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಮಹಮ್ಮದ್ ರಫಿ ಸನ್ಮಾನ



**ಮಲ್ಲಮ್ಮ ನುಡಿ ವಾರ್ತೆ**

ಲಿಂಗಸುಗೂರು, ಸೆ.23: ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾದ ಮಹಮ್ಮದ್ ರಫಿ ಅವರನ್ನು ಹಜರತ್ ಟಿಪ್ಪು ಸುಲ್ತಾನ್ ಸಂಘದ ವತಿಯಿಂದ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು ಹಾಗೂ ಹಾಜರಿದ್ದ ಅತಿಥಿಗಳು ರಫಿ ಅವರ ಸಂಘಟನೆ ಶಕ್ತಿ, ಸಾಮಾಜಿಕ ಚಟುವಟಿಕೆಗಳಲ್ಲಿ ತೋರಿಸಿರುವ ಬದ್ಧತೆ ಹಾಗೂ ಕಾಂಗ್ರೆಸ್ ಪಕ್ಷದ ಬಲವರ್ಧನೆಗೆ ನೀಡುತ್ತಿರುವ ಸೇವೆಯನ್ನು ಮೆಚ್ಚಿಕೊಂಡರು.

ಕಾರ್ಯಕ್ರಮದಲ್ಲಿ ಹಜರತ್ ಟಿಪ್ಪು ಸುಲ್ತಾನ್ ಸಂಘದ ತಾಲೂಕು ಅಧ್ಯಕ್ಷರಾದ ಅಲ್ಲಾಬಕ್ಷ್ ಮನಿಯರ್, ಜಮೀರ್, ಇಲಿಯಾಸ್ ಖುರೇಶಿ, ಶಾಹಿದ್ ಹವಾಲ್ದಾರ್, ಅಂಬರೀಶ್, ಶಬ್ಬೀರ್, ಖಾಜಾಮನಿಯಾರ ಪಜಲ್ ಮನಿಯಾರ ಗೌಸ್ ಸೇರಿದಂತೆ ಅನೇಕರು ಭಾಗವಹಿಸಿ ಸನ್ಮಾನ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಸಮಾರಂಭದಲ್ಲಿ ಮಾತನಾಡಿದ ,"ಮಹಮ್ಮದ್ ರಫಿ ಅವರು ಸದಾ ಪಕ್ಷದ ಹಿತಚಿಂತನೆಗಾಗಿ ಶ್ರಮಿಸುವೆ, ಪಕ್ಷ ಸಂಘಟನೆಗೆ ಹೆಚು ಕೆಲಸ ಮಾಡುತ್ತೇನೆ "




ಬಸವಕಲ್ಯಾಣ :– ಇಲ್ಲಿನ ಶರಣ ಹರಳಯ್ಯ ಗವಿಯಲಿ ಹಮ್ಮಿಕೊಂಡಿರುವ ವಚನ ವಿಜಯ ಉತ್ಸವ ಮತ್ತು ಹುತಾತ್ಮ ದಿನಾಚರಣೆ ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಡಾ. ಗಂಗಾಂಬಿಕಾ ಅಕ್ಕ. ಪೂಜ್ಯ ಶ್ರೀ ಮಲ್ಲಿಕಾರ್ಜುನ್ ಸ್ವಾಮೀಜಿಗಳು. ಪೂಜ್ಯ ಶ್ರೀ ಬಸವಕುಮಾರ ಸ್ವಾಮಿಜಿ. ಪೂಜ್ಯಶ್ರೀ ಅನಿಮಿಷಾನಂದ ಸ್ವಾಮಿಗಳು. ಗುಣತೀರ್ಥ ವಾಡಿಯ ಕಲ್ಯಾಣ ಮಹಾ ಮನೆಯ ಪೂಜ್ಯಶ್ರೀ ಬಸವಪ್ರಭು ಸ್ವಾಮೀಜಿ. ಪೂಜ್ಯ ಶ್ರೀ ಶಿವಾನಂದ ದೇವರು. ಬಿಡಿಪಿಸಿ ಮಾಜಿ ಅಧ್ಯಕ್ಷರಾದ ಅನೀಲ ಕುಮಾರ ರಗಟೆ. ಶಶಿಕಾಂತ ದುರ್ಗೆ. ಶಿವರಾಜ ನರಶೆಟೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಹಿಂದಿ ಸಂಪರ್ಕ ಭಾಷೆಯಾಗಿದೆ



**ಮಲ್ಲಮ್ಮ ನುಡಿ ವಾರ್ತೆ**

ಬಸವಕಲ್ಯಾಣ :– ಸೆ 23 ಹಿಂದಿ ಭಾಷೆಯು ಸಂಪರ್ಕ ಭಾಷೆಯಾಗಿದೆ ಅಲ್ಲದೆ ಇದೊಂದು ಭಾಷೆಯಾಗದೆ ಬಾವನೆಗಳ ಅಭಿವ್ಯಕ್ತಿ ವ್ಯಕ್ತಪಡಿಸುವ ಬಾಷೆ ಯಾಗಿದೆ ಎಂದು ಹಿಂದಿ ಭಾಷೆಯ ಉಪನ್ಯಾಸಕರಾದ ನರ್ಸಿಂಗರಡ್ಡಿ ಗದಲೇಗಾಂವ ತಿಳಿಸಿದರು. ಇಲ್ಲಿನ ನಿಲಾಂಬಿಕಾ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ಹಿಂದಿ ದಿನಾಚರಣೆ ಹಾಗೂ ಪಾಲಕರ ಸಭೆಯಲ್ಲಿ ಮಾತನಾಡಿದ ಅವರು ತಮ್ಮ ಮಕ್ಕಳಿಗೆ ದಿನಾಲೂ ಶಾಲೆಗೆ ಕಳುಹಿಸಿ ಉತ್ತಮ ಫಲಿತಾಂಶ ನೀಡುವ ಜವಾಬ್ದಾರಿ ನಮ್ಮದಾಗಿದೆ ಎಂದರು. ಹುಲಸೂರಿನ ತಹಸೀಲ್ದಾರ ಶಿವಾನಂದ ಮೇತ್ರೆ ಮಾತನಾಡಿ, ಮಹಿಳೆಯರಿಗೆ ಬೇಗ ಮದುವೆ ಮಾಡ ಬೇಡಿ ಅವರ ಬದುಕಿಗೆ ಒಳ್ಳೆಯ ಅವಕಾಶ ನೀಡಿ ಎಂದರು. ಬೀದರ ಡಿ. ಸಿ. ಸಿ. ಬ್ಯಾಂಕಿನ ವ್ಯವಸ್ಥಾಪಕರಾದ ರೇಷ್ಮಾ. ಹಿರಿಯ ನಾಯಕರಾದ ಶಾಂತಪ್ಪ ಜಿ ಪಾಟೀಲ. ರಾಜೇಶ್ವರಿ ವರದನ್. ಜೋತಿ ಪಾಟೀಲ. ಅನೀಲ ಕಾಂಬಳೆ. ವಿಶ್ವನಾಥ ಬನಸೂಡೆ. ಸುರೇಶ ಮೂರೆ. ಸತೀಶ್ ವಾಡೆಕರ. ಸೇರಿದಂತೆ ಅನೇಕರು ಭಾಗವಹಿಸಿದ್ದರು. ಅಧ್ಯಕ್ಷತೆ ಕಾಲೇಜಿನ ಪ್ರಾಚಾರ್ಯರಾದ ಅಶೋಕ ರಡ್ಡಿ ನಿಂಗಾವರೆ ಮಾತನಾಡಿ ಪಾಲಕರು ತಮ್ಮ ಮಕ್ಕಳನ್ನು ಗೈರು ಹಾಜರಾಗದಂತೆ ನೋಡಿಕೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಹಿಂದಿ ಶಿಕ್ಷಕರಾದ ನಾಗಪ್ಪಾ ನಿಣ್ಣೆ ಅಲ್ಲದೆ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರನ್ನು ಸಹ ಸನ್ಮಾನಿಸಲಾಯಿತು. ಪ್ರೌಢಶಾಲಾ ಹಿಂದಿ ಶಿಕ್ಷಕರ ಸಂಘದ ಅಧ್ಯಕ್ಷರಾದ ಜಗದೀಶ ಶುಕ್ಲಾ ಎಲ್ಲರನ್ನೂ ಸ್ವಾಗತಿಸಿದರು.




**ಶಹಾಪುರ ನಗರದ ಹಳೆಪೇಟೆಯ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ನವರಾತ್ರಿ ಉತ್ಸವದ ಎರಡನೇ ದಿನ ನಿಮಿತ್ಯ ವಿಶೇಷ ಪೂಜಾ ಕಾರ್ಯಕ್ರಮಗಳು ಜರುಗಿದವು, ಶ್ರೀ ವೆಂಕಟೇಶ್ವರನಿಗೆ ವಿಶೇಷ ಅಲಂಕಾರ, ಮಹಾನೈವಿದ್ಯ, ಮಂಗಳಾರತಿ ಸಮರ್ಪಣೆ ಮಾಡಲಾಯಿತು.**

## ಡಿಸಿಸಿ ಬ್ಯಾಂಕ್ ಉಪ ಚುನಾವಣೆಯಲ್ಲಿ ಉಮೇಶ ಕುಲ್ಕರ್ಣಿ ಭಾರಿ ಬಹುಮತ ಗೆಲುವಿಗೆ ಅಭಿಷೇಕ ಪಾಟೀಲ ಹರ್ಷ



**ಮಲ್ಲಮ್ಮ ನುಡಿ ವಾರ್ತೆ**

ಹುಮನಾಬಾದ: ಬೀದರ ಡಿಸಿಸಿ ಬ್ಯಾಂಕಿನ ನಿರ್ದೇಶಕರು ಉಪಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಚಿಟಗುಪ್ಪ ತಾಲ್ಲೂಕಿನ ತಾಳಮಡಗಿ ಗ್ರಾಮದ ಪಿಕೆಪಿಎಸ್ ಅಧ್ಯಕ್ಷ ಉಮೇಶ್ ಪಾಂಡುರಂಗ ಕುಲಕರ್ಣಿ ಭಾರಿ ಬಹುಮತದಿಂದ ಗೆಲುವು ಸಾಧಿಸಿದ್ದಾರೆ ಎಂದು ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷರಾದ ಅಭಿಷೇಕ್ ಪಾಟೀಲ್ ಪತ್ರಿಕಾ ಗೋಷ್ಠೀಯಲ್ಲಿ ತಿಳಿಸಿದ್ದಾರೆ. ಉಮೇಶ್ ಕುಲಕರ್ಣಿ ಅವರು ತಾಳಮಡಗಿ ಪಿಕೆಪಿಎಸ್ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದರು ಇವರನ್ನು ಈ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಕಣಕ್ಕೆ ಇಳಿಸಲಾಗಿತ್ತು. 33 ಮತಗಳಲ್ಲಿ ಇವರು 27 ಮತಗಳು ಪಡೆದು ಎದುರಾಳಿ ಬಿಜೆಪಿ ಬೆಂಬಲಿತ ಅಭ್ಯರ್ಥಿ ಕೇವಲ ಆರು ಮತಗಳನ್ನು ಪಡೆದಿದ್ದಾರೆ ಎಂದು ಅಭಿಷೇಕ್ ಪಾಟೀಲ್ ತಿಳಿಸಿದ್ದಾರೆ. ಮಾಜಿ ಮಂತ್ರಿ ರಾಜಶೇಖರ್ ಪಾಟೀಲ್ ವಿಧಾನ ಪರಿಷತ್ ಸದಸ್ಯರಾದ ಭೀಮರಾವ್ ಪಾಟೀಲ್, ಚಂದ್ರಶೇಖರ ಪಾಟೀಲ್, ಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕರು, ಹಾಗೂ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ವೀರಣ್ಣಾ ಪಾಟೀಲ, ಇವರುಗಳ ಮಾರ್ಗದರ್ಶನ ಮೇರೆಗೆ ಚುನಾವಣೆಯಲ್ಲಿ ಗೆಲುವು ಸಾಧಿಸಲು ಸಹಾಯವಾಗಿದೆ ಎಂದರು. ಹುಮ್ನಾಬಾದ್ ಮತ್ತು ಚಿಟಗುಪ್ಪ ತಾಲೂಕುಗಳ ರೈತರಿಗೆ ಹೆಚ್ಚಿನ ಸಾಲ ಸೌಲಭ್ಯಗಳು ಕೊಡಿಸಲು ಮತ್ತೆ ನಮಗೆ ಸಾಯವಾಗಲಿದೆ ಎಂದು ಅಭಿಷೇಕ್ ಪಾಟೀಲ್ ತಿಳಿಸಿದರು. ಚುನಾವಣೆ ಭರ್ಜರಿ ಗೆಲುವು ಸಾಧಿಸಿರುವ ಉಮೇಶ್ ಪಾಟೀಲ್‌ರವರಿಗೆ ವೀರಣ್ಣಾ ಪಾಟೀಲ, ಕೇಶವರಾವ್ ತಾಳಘಟಕರ್, ತಾಳಮಡಗಿ ಗ್ರಾಮದ ಶ್ರೀಮಂತ ಪಾಟೀಲ ರವರು ಸನ್ಮಾನಿಸಿ ಗೌರವಿಸಿದರು. ವೈಜಿನಾಥ, ಪ್ರಭು ತಾಳಮಡಗಿ, ಜೈರಾಜ್ ವೈದ್ಯ, ಪಪ್ಪು ಪಾಟೀಲ, ಚಂದ್ರಶೇಖರ, ಪ್ರಕಾಶ ತಾಳಮಡಗಿ, ರಾಹುಲ್ ಉದ್ಗಾ, ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರುಗಳು ಪಟ್ಟಾಕಿ ಸಿಡಿಸಿ ಸಂಭ್ರಮಿಸಿದರು.

## ಜವಳಿ ಸಚಿವರ ಪ್ರವಾಸ

**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ,ಸೆ.23.–– ರಾಜ್ಯದ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್. ಪಾಟೀಲ ಅವರು ವಿಜಯಪುರದಿಂದ ರಸ್ತೆ ಮೂಲಕ 2025ರ ಸೆಪ್ಟೆಂಬರ್ 24 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಕಲಬುರಗಿಗೆ ಆಗಮಿಸಿ, ನಂತರ ಮಧ್ಯಾಹ್ನ 12.10 ಗಂಟೆಗೆ ಕಲಬುರಗಿಯಿಂದ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಮಾನವಿಯತೆ ಮೆರೆದ ವೈದ್ಯ ಡಾ.ಪೂಜಾರಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಸೆ.23:ಮಂಗಳವಾರ ತಮ್ಮ ಮನೆಯ ಎದುರುಗಡೆ ವಿದ್ಯುತ್ ತಗುಲಿ ಸಾವನ್ನಪ್ಪಿದ ಮಂಗವೊಂದನ್ನು ವೈದ್ಯ ಡಾ. ರವಿ ಪೂಜಾರಿಯವರು ಪುರಸಭೆಯವರಿಗೆ ಕರೆಯಿಸಿ. ವಿಧಿ ವಿಧಾನದಂತೆ ಅಂತ್ಯ ಕ್ರಿಯೆ ಮಾಡಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ವೈದ್ಯ ರವಿ ಅವರಿಗೆ ಪುರಸಭೆ ಸಿಬ್ಬಂದಿ ಸಿದ್ರಾಮ ರವರು ಸಾಥ ನೀಡಿದ್ದು, ಇವರ ಮಾನವೀಯ ಕ್ರಮ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

# ಆಯುರ್ವೇದದ ಪ್ರಚಾರ ಹೆಚ್ಚಿಸಬೇಕಿದೆ:ಶಾಸಕ ಪೂಜಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.23-ಆಯುರ್ವೇದದ ಮೂಲ ಭಾರತವಾಗಿದ್ದರೂ ಇತ್ತೀಚಿನ ದಿನಗಳಲ್ಲಿ ಭಾರತೀಯರು ವಿದೇಶಿ ಚಿಕಿತ್ಸಾ ವಿಧಾನಗಳತ್ತ ಹೆಚ್ಚು ಆಕರ್ಷಿತರಾಗುತ್ತಿದ್ದಾರೆ. ಬೇಗನೆ ಗುಣಮುಖರಾಗಲು ವಿದೇಶಿ ಔಷಧಿ ಸೇವನೆಗೆ ಮುಂದಾಗುತ್ತಿರುವ ಸಂದರ್ಭದಲ್ಲೂ, ಆಯುರ್ವೇದವು ಯಾವುದೇ ದುಷ್ಪರಿಣಾಮಗಳಿಲ್ಲದೆ ನಿಧಾನವಾಗಿ ಲಾಭ ನೀಡುವ ಚಿಕಿತ್ಸಾ ವಿಧಾನವಾಗಿದೆ. ಆದ್ದರಿಂದ ಇಂದಿನ ದಿನಮಾನಗಳಲ್ಲಿ ಆಯುರ್ವೇದದ ಪ್ರಚಾರವನ್ನು ಹೆಚ್ಚಿಸಬೇಕಿದೆ ಎಂದು ವಿಧಾನಪರಿಷತ್ ಸದಸ್ಯ ಪಿ.ಎಚ್.ಪೂಜಾರ ಹೇಳಿದರು.

ನಗರದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಧನ್ವಂತರಿ ಜಯಂತಿ ಹಾಗೂ 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಧನ್ವಂತರಿ ದೇವರನ್ನು ಆಯುರ್ವೇದ ಚಿಕಿತ್ಸೆಯ ಪಿತಾಮಹರಾಗಿ ಪರಿಗಣಿಸಲಾಗಿದ್ದು, ಈ ವಿಧಾನವು ಪರಂಪರೆಯಿಂದಲೇ ಬೆಳೆದು ಬಂದಿದೆ. ಗಿಡಮೂಲಿಕೆಗಳು ಹಾಗೂ ಆಹಾರ ಪದ್ಧತಿಯಲ್ಲಿ ಬದಲಾವಣೆಗಳನ್ನು ಅಳವಡಿಸಿಕೊಂಡು ಸುಲಭವಾಗಿ ಆರೋಗ್ಯವನ್ನು ಕಾಪಾಡಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಇತ್ತೀಚಿಗೆ ಯುವಕರು ಆರೋಗ್ಯದ ವಿಚಾರದಲ್ಲಿ ನಿರ್ಲಕ್ಷ್ಯ ತೋರುತ್ತಿದ್ದು, ವೈಜ್ಞಾನಿಕವಾಗಿರದ ಆಹಾರ ಪದ್ಧತಿಯನ್ನು ಅನುಸರಿಸುತ್ತಿರುವುದು ಕಳವಳಕಾರಿಯಾಗಿದೆ. ಹಣ-ಆಸ್ತಿ ಕಳೆದುಕೊಂಡರೆ ಮತ್ತೆ ಗಳಿಸಬಹುದು, ಆರೋಗ್ಯ ಕಳೆದುಕೊಂಡರೆ ಎಲ್ಲವನ್ನೂ ಕಳೆದುಕೊಂಡಂತೆಯೇ ಆಗುತ್ತದೆ. ಆದ್ದರಿಂದ ಯೋಗ ಹಾಗೂ ಆಯುರ್ವೇದದ ಪ್ರಚಾರ-ಪ್ರಸಾರವನ್ನು ವೈದ್ಯರು ಹಾಗೂ ಆಯುಷ ಇಲಾಖೆಯ ಸಿಬ್ಬಂದಿ ಜವಾಬ್ದಾರಿಯುತವಾಗಿ ಮಾಡಬೇಕಿದೆ. ಮೊದಲು ಅವರೇ ತಮ್ಮ ಜೀವನದಲ್ಲಿ ಆಯುರ್ವೇದವನ್ನು ಅಳವಡಿಸಿಕೊಂಡು ಗ್ರಾಮೀಣ ಮಟ್ಟದಲ್ಲಿಯೂ ಇದರ ಉಪಯೋಗ ಮನವರಿಕೆ ಮಾಡಬೇಕಿದೆ ಎಂದು ಪಿ.ಎಚ್.ಪೂಜಾರ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ ಮಾತನಾಡಿ, ವಿದೇಶಿ ಚಿಕಿತ್ಸಾ ವಿಧಾನವು ತಾತ್ಕಾಲಿಕವಾಗಿ ಗುಣ ಮಾಡಿದರೆ, ಆಯುರ್ವೇದ ದೀರ್ಘಕಾಲದ ಆರೋಗ್ಯ ರಕ್ಷಣೆಗೆ ನೆರವಾಗುತ್ತದೆ. ಯಾವುದೇ ದುಷ್ಪರಿಣಾಮವಿಲ್ಲದೆ ಜನರನ್ನು ಗುಣಪಡಿಸುವ ಸಾಮರ್ಥ್ಯ ಆಯುರ್ವೇದಕ್ಕೆ ಇದೆ. ನಮ್ಮ ಪೂರ್ವಜರು ಅನೇಕ ಆರೋಗ್ಯ ಸಮಸ್ಯೆಗಳನ್ನು ಗಿಡಮೂಲಿಕೆಗಳಿಂದ ಪರಿಹರಿಸಿಕೊಂಡಿದ್ದಾರೆ. ಯೋಗ-ಧ್ಯಾನದ ಅಭ್ಯಾಸದಿಂದ ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಳ್ಳಬಹುದು. ಆದ್ದರಿಂದ ಆಯುರ್ವೇದದ ಕುರಿತು ಹೆಚ್ಚಿನ ಅರಿವು ಮೂಡಿಸಲು ಸಾಮೂಹಿಕ ಮಟ್ಟದಲ್ಲಿ ತಿಳುವಳಿಕೆ ಕಾರ್ಯಕ್ರಮಗಳು ಅಗತ್ಯ ಎಂದು ಹೇಳಿದರು.

ಜಿಲ್ಲಾ ಆಯುಷ ಅಧಿಕಾರಿ ಡಾ.ಶೇಖರಯ್ಯ ಮಠ, ನಿವೃತ್ತ ನ್ಯಾಯಾಧೀಶರು ಹಾಗೂ ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ಡಿ.ವೈ.ಬಸಾಪುರ, ಜಿಲ್ಲಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕ ಮಹೇಶ್ ಕೋಣಿ, ಜಿಲ್ಲಾ ಮಲೇರಿಯಾ ಅಧಿಕಾರಿ ಕುಸುಮಾ ಮಾಗಿ ಸೇರಿದಂತೆ ಅನೇಕರು ಇದ್ದರು.

# ಐಕಾಮ್‌ಗೆ ಭಾರತೀಯ ಮೀಸಲು ಸಶಸ್ತ್ರ ಪಡೆಗಾಗಿ ಅತ್ಯಾಧುನಿಕ ಬಂದೂಕು ನಿರ್ಮಾಣ ಆದೇಶ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಸೆ. 23:ಭಾರತ-ಯುಎಇ ರಕ್ಷಣಾ ಸಹಭಾಗಿತ್ವದಲ್ಲಿ ಮಹತ್ವದ ಹೆಜ್ಜೆಯಾಗಿ, ಎಡ್ಜ್ ಘಟಕ ಕಾರಾಕಲ್ ಹಾಗೂ ಮೆಘಾ ಎಂಜಿನಿಯರಿಂಗ್ ಮತ್ತು ಇನ್ಫ್ರಾಸ್ಟ್ರಕ್ಚರ್ಸ್ ಸಮೂಹ ಗುಂಪಿನ ಐಕಾಂಮ್ ಟೆಲಿ ಲಿಮಿಟೆಡ್, ಭಾರತ ಕೇಂದ್ರ ಮೀಸಲು ಪಡೆ (ಸಿಆರ್‌ಪಿಎಫ್) ಗಾಗಿ 200 ಅತ್ಯಾಧುನಿಕ ಸಿಎಸ್‌ಆರ್-338 ಸ್ನೈಪರ್ ರೈಫಲ್‌ಗಳನ್ನು ಪೂರೈಸುವ ಅವಕಾಶವನ್ನು ತನ್ನದಾಗಿಸಿಕೊಂಡಿದೆ.

ಈ ಸ್ನೈಪರ್ ರೈಫಲ್‌ಗಳನ್ನು ಹೈದರಾಬಾದ್‌ನಲ್ಲಿರುವ ಐಕಾಮ್-ಕಾರಾಕಲ್ ಸಣ್ಣ ಶಸ್ತ್ರಾಸ್ತ್ರ ಘಟಕದಲ್ಲಿ ತಯಾರಿಸಿ ಹಸ್ತಾಂತರಿಸಲು ಉದ್ದೇಶಿಸಲಾಗಿದೆ. ಕಳೆದ ಏಪ್ರಿಲ್‌ನಲ್ಲಿ ಉದ್ಘಾಟನೆಯಾದ ಈ ಘಟಕವು ಭಾರತೀಯ ಸಶಸ್ತ್ರಪಡೆಗಳು ಹಾಗೂ ಕೇಂದ್ರೀಯ ಸಶಸ್ತ್ರಪಡೆಗಳಿಗೆ ಶಸ್ತ್ರಾಸ್ತ್ರ ಪೂರೈಕೆಯ ಪ್ರಮುಖ ಉತ್ಪಾದನಾ ಕೇಂದ್ರವಾಗಿ ಮಾರ್ಪಟ್ಟಿದೆ.

"ಐಕಾಮ್-ಕಾರಾಕಲ್ ಕಿರು ಶಸ್ತ್ರಾಸ್ತ್ರ ಘಟಕ ಸ್ಥಾಪನೆ ನಂತರ, ನಾವು ಐಕಾಮ್‌ನೊಂದಿಗೆ ನಮ್ಮ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸಿದ್ದೇವೆ ಮತ್ತು ಪ್ರಧಾನಿ ಮೋದಿ ಅವರ 'ಮೇಕ್ ಇನ್ ಇಂಡಿಯಾ' ಉಪಕ್ರಮಕ್ಕೆ ನಮ್ಮ ಬದ್ಧತೆಯನ್ನು ದೃಢಪಡಿಸುತ್ತಿದ್ದೇವೆ. ಶಸ್ತ್ರಾಸ್ತ್ರತಂತ್ರಜ್ಞಾನದಲ್ಲಿ ಈ ಐತಿಹಾಸಿಕ ತಂತ್ರಜ್ಞಾನ ವರ್ಗಾವಣೆ, ಯುಎಇ-ಭಾರತ ರಕ್ಷಣಾ ಸಹಭಾಗಿತ್ವದಲ್ಲಿ ಮಹತ್ವದ ಮೈಲಿಗಲ್ಲಾಗಿದ್ದು, ಭಾರತದ ಭದ್ರತಾ ಅವಶ್ಯಕತೆಗಳಿಗೆ ಹಾಗೂ ವೃದ್ಧಿಸುತ್ತಿರುವ ರಕ್ಷಣಾ ಕೈಗಾರಿಕೆಗೆ ನಮ್ಮ ದೀರ್ಘಕಾಲಿಕ ಬೆಂಬಲದ ಸಂಕೇತವಾಗಿದೆ."ಎಂದು ಕಾರಾಕಲ್ ಸಿಇಒ ಹಮಾದ್ ಅಲಾಮೇರಿ ಪ್ರತಿಪಾದಿಸಿದ್ದಾರೆ.

"ಈ ಒಪ್ಪಂದವು ಐಕಾಮ್‌ಗಾಗಿ ಹೆಮ್ಮೆಯ ಮೈಲಿಗಲ್ಲು ಮತ್ತು ಭಾರತದ ಸ್ವಾವಲಂಬಿ ರಕ್ಷಣಾ ಸಾಮರ್ಥ್ಯ ನಿರ್ಮಾಣದ ನಮ್ಮ ದೀರ್ಘಕಾಲದ ತಂತ್ರದ ದೃಢೀಕರಣವಾಗಿದೆ. ಕಾರಾಕಲ್ ಮತ್ತು ಎಡ್ಜ್ ಜೊತೆಗೆ, ನಾವು ಕೇವಲ ಅತ್ಯಾಧುನಿಕ ಸಿಎಸ್‌ಆರ್-338 ಸ್ನೈಪರ್ ವ್ಯವಸ್ಥೆಯನ್ನು ಸಿಆರ್‌ಪಿಎಫ್‌ಗೆ ಪೂರೈಸುತ್ತಿಲ್ಲ, ಜಾಗತಿಕ ಮಟ್ಟದ ತಂತ್ರಜ್ಞಾನವನ್ನು ವರ್ಗಾಯಿಸುತ್ತಿದ್ದೇವೆ, ಹೈದರಾಬಾದ್‌ನಲ್ಲಿ ಗುಣಮಟ್ಟದ ತಯಾರಿಕಾ ಅವಕಾಶಗಳನ್ನು ಸೃಷ್ಟಿಸುತ್ತಿದ್ದೇವೆ ಮತ್ತು ಭಾರತದ ರಕ್ಷಣಾ ಕೈಗಾರಿಕಾ ಪರಿಸರವನ್ನು ಬಲಪಡಿಸುತ್ತಿದ್ದೇವೆ. ಐಕಾಮ್ ಸಮಯ ಮುಗಿಯುವ ಮೊದಲು ಪೂರೈಕೆ ಮಾಡುವುದಕ್ಕೆ, ಜೀವನಾವಧಿ ಬೆಂಬಲ ನೀಡುವುದಕ್ಕೆ ಮತ್ತು ಭವಿಷ್ಯದ ಅವಶ್ಯಕತೆ ಅಥವಾ ತಜ್ಞ ಗ್ರಾಹಕರಿಗೆ ಈ ಸಾಮರ್ಥ್ಯವನ್ನು ವಿಸ್ತರಿಸುವುದಕ್ಕೆ ಬದ್ಧವಾಗಿದೆ." ಎಂದು ಐಕಾಮ್ ಟೆಲಿ ಲಿಮಿಟೆಡ್ ನಿರ್ದೇಶಕ ಸುಮಂತ್ ಪಾಟೂರು ಹರ್ಷ ವ್ಯಕ್ತಪಡಿಸಿದ್ದಾರೆ.

ಭಾರತದಲ್ಲಿ ತಯಾರಿಸಲಾದ ಕಾರಾಕಲ್‌ನ ಮೊದಲ ಸಿಎಸ್‌ಆರ್ 338 ಸ್ನೈಪರ್ ರೈಫಲ್‌ಗಳ ವಿತರಣೆ 2025ರ ನಾಲ್ಕನೇ ತ್ರೈಮಾಸಿಕದಲ್ಲಿ ನಡೆಯಲಿದೆ. ಸಿಎಸ್‌ಆರ್ 338 ಒಂದು ಅತ್ಯಾಧುನಿಕ ಬೋಲ್ಟ್-ಆಕ್ಷನ್ ಸ್ನೈಪರ್ ರೈಫಲ್ ಆಗಿದ್ದು, .338 ಲಾಪುವ ಮ್ಯಾಗ್ನಮ್‌ನಲ್ಲಿ ಚೇಂಬರ್ ನಿರ್ಮಾಣದ್ದಾಗಿದೆ. ಈ ರೈಫಲ್‌ನಲ್ಲಿ 27 ಇಂಚಿನ ಬ್ಯಾರೆಲ್, 10 ರೌಂಡ್ ಮ್ಯಾಗಜೀನ್, ಆಂಬಿಡೆಕ್ಸ್ಟ್ರಸ್ ಮ್ಯಾಗಜೀನ್ ರಿಲೀಸ್ ಮತ್ತು ಭದ್ರತಾ ವ್ಯವಸ್ಥೆ, ಎರಡು ಹಂತಗಳ ನಿಖರ ಟ್ರಿಗರ್ ಮತ್ತು ನಾಲ್ಕು ಸ್ಥಾನಗಳ ದೂರದರ್ಶಕ (ಟೆಲಿಸ್ಕೋಪ್) ಒಳಗೊಂಡಿದೆ ಎಂದು ಐಕಾಮ್ ತಿಳಿಸಿದೆ.

# ಕಾನೂನು ಸೇವೆ ಜನರಿಗೆ ತಲುಪಿಸಲು ಅರೆಕಾಲಿಕ ಕಾನೂನು ಸ್ವಯಂ ಸೇವಕರ ನೇಮಕ ಮಾಡಲು ತೀರ್ಮಾನ : ಹೆಚ್. ಶಶಿಧರ ಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಸೆ 23 :ಕಾನೂನು ಸೇವೆಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಅವರಿಗೆ ಸಹಾಯ ಹಸ್ತ ನೀಡಲು ಅರೆಕಾಲಿಕ ಕಾನೂನು ಸ್ವಯಂ ಸೇವಕರನ್ನು (ಅಧಿಕಾರ ಮಿತ್ರರು) ರಾಜ್ಯಾದ್ಯಂತ ನೇಮಿಸಲು ಕರ್ನಾಟಕ ರಾಜ್ಯ ಕಾನೂನು ಸೇವಗಳ ಪ್ರಾಧಿಕಾರ ತೀರ್ಮಾನಿಸಿದೆ ಎಂದು ಜಿಲ್ಲಾ ಸತ್ರ ನ್ಯಾಯಾಧೀಶರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಶಶಿಧರ ಶೆಟ್ಟಿ ತಿಳಿಸಿದರು.

ಅವರು ಇಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಹಮ್ಮಿಕೊಳ್ಳಲಾದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಾ, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ 'ಅರೆಕಾಲಿಕ ಕಾನೂನು ಸ್ವಯಂ ಸೇವಕರ' ಯೋಜನೆಯಡಿ ಈ ಕಾನೂನು ಸ್ವಯಂ ಸೇವಕರ ನೇಮಕ ಹಾಗೂ ಅವರಿಗೆ ತರಬೇತಿಯನ್ನು ನೀಡುವುದು ಇದರ ಮುಖ್ಯ ಗುರಿಯಾಗಿದೆ. ಅರೆಕಾಲಿಕ ಕಾನೂನು ಸ್ವಯಂ ಸೇವಕರು ಸಾಮಾನ್ಯ ಜನರು ಮತ್ತು ಸೇವಾ ಸಂಸ್ಥೆಗಳ ನಡುವಿನ ಅಂತರವನ್ನು ಕಡಿಮೆ ಮಾಡಿ, ಮಧ್ಯವರ್ತಿಗಳಂತೆ ಸಂಪರ್ಕ ಕೊಂಡಿಗಳಾಗಿ ಕೆಲಸ ನಿರ್ವಹಿಸುತ್ತಾರೆ.

ಈ ಸಂಬಂಧ ಪ್ರತಿಯೊಂದು ತಾಲ್ಲೂಕು ಕಾನೂನು ಸೇವೆಗಳ ಸಮಿತಿ, ಗರಿಷ್ಠ 25-50 ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ 50 ರಿಂದ 100 ಸಕ್ರಿಯ ಅರೆಕಾಲಿಕ ಕಾನೂನು ಸ್ವಯಂ ಸೇವಕರುಗಳನ್ನು ಹೊಂದಬಹುದಾಗಿರುತ್ತದೆ. ರಜ್ಯದಲ್ಲಿ 2024ನೇ ಸಾಲಿನಲ್ಲಿ ಒಟ್ಟು 5343 ಅರೆಕಾಲಿಕ ಕಾನೂನು ಸೇವಕರುಗಳನ್ನು ಒಂದು ವರ್ಷದ ಅವಧಿಗೆ ನೇಮಿಸಲಾಗಿದ್ದು, ಇವರ ಅವಧಿ 20-11-2025ಕ್ಕೆ ಮುಕ್ತಾಯಗೊಳ್ಳುತ್ತದೆ.

ಈ ಅರೆಕಾಲಿಕ ಕಾನೂನು ಸ್ವಯಂ ಸೇವಕರನ್ನು ಹೊಸದಾಗಿ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತರು 20-10-2025 ರೊಳಗಾಗಿ ಪ್ರಧಿಕಾರಕ್ಕೆ ಅರ್ಜಿ ಸಲ್ಲಿಸಬಹುದು. ಇವರು ಕಾರ್ಯನಿರ್ವಹಿಸಲು ಕನಿಷ್ಠ ಮೆಟ್ರಿಕ್ಯುಲೇಷನ್ ಪೂರ್ಣಗೊಳಿಸಿರಬೇಕು. ಯಾವುದೇ ರೀತಿಯ ಆದಾಯ ನಿರೀಕ್ಷಿಸದೆ ಎಲ್ಲಾ ವರ್ಗದ ದುರ್ಬಲರಿಗೆ ಸಹಾನುಭೂತಿಯಿಂದ ಸಹಾಯ ಮಾಡುವ ಮನಸ್ಥಿತಿ ಹೊಂದಿರಬೇಕಾಗಿರುತ್ತದೆ.

ಅರೆಕಾಲಿಕ ಕಾನೂನು ಸ್ವಯಂ ಸೇವಕರಾಗಿ ಶಿಕ್ಷಕರು, ನಿವೃತ್ತ ಶಿಕ್ಷಕರು, ಹಿರಿಯ ನಾಗರಿಕರು, ಮಹಿಳೆಯರು, ಅಂಗನವಾಡಿ ಕಾರ್ಯಕರ್ತೆಯರು, ವೈದ್ಯರು, ಕಾನೂನು ವಿದ್ಯಾರ್ಥಿಗಳು, ಸ್ವಸಹಾಯ ಗುಂಪಿನವರು, ನಿವೃತ್ತ ಸೈನಿಕರು ಹೀಗೆ ಎಲ್ಲಾ ಕ್ಷೇತ್ರದ ಜನರು ನೇಮಕಗೊಳ್ಳಬಹುದು. ಇವರ ಆಯ್ಕೆಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಹಂತದಲ್ಲಿ ಆಯಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಮತ್ತು ಅಧ್ಯಕ್ಷರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾಗಿರುತ್ತಾರೆ. ಸ್ಥಳೀಯ ನಿವಾಸಿಗಳಿಂದ ಅರ್ಜಿಗಳನ್ನು ಆಯಾ ಜಿಲ್ಲೆ /ತಾಲ್ಲೂಕು ಕಾನೂನು ಸೇವಾ ಪ್ರಾಧಿಕಾರದಿಂದ ಅರ್ಜಿ ಆಹ್ವಾನಿಸಿ, ಸ್ವೀಕರಿಸಿ ಆಯ್ಕೆ ಪ್ರಕ್ರಿಯೆ ಮಾಡಲಾಗುತ್ತದೆ. ಆಯ್ಕೆ ಸಮಿತಿಯು ತನ್ನ ವಿವೇಚನಾಧಿಕಾರವನ್ನು ಬಳಸಿ ಸೂಕ್ತ ಅಭ್ಯರ್ಥಿಗಳನ್ನು ಅರೆಕಾಲಿಕ ಕಾನೂನು ಸ್ವಯಂ ಸೇವಕನ್ನಾಗಿ ಆಯ್ಕೆ ಮಾಡುತ್ತದೆ. ಅಲ್ಲದೆ ಪರಿಶಿಷ್ಟ ಜಾತಿ/ಪಂಗಡ, ಹಿಂದುಳಿದ ವರ್ಗದವರಿಗೂ ಆದ್ಯತೆ ನೀಡುತ್ತದೆ. ಆಯ್ಕೆಯಾದವರನ್ನು ರಾಜ್ಯ ಕಾನೂನು ಸೇವೆಗಳ ಕೇಂದ್ರಗಳ ಫ್ರಂಟ್ ಆಫೀಸ್, ಜಾಗೃತಿ ಕಾರ್ಯಕ್ರಮ, ವಿವಿಧ ಕಾನೂನು ಚಟುವಟಿಕೆಗಳಿಗೂ ಬಳಸಿಕೊಳ್ಳಲಾಗುವುದು. ಇವರಿಗೆ ದಿನಕ್ಕೆ ರೂ.750/-ಗೌರವಧನವನ್ನು ಸಹ ನಿಡಲಾಗುವುದು. ಒಂದು ವರ್ಷದ ಅವಧಿಗೆ ಇವರನ್ನು ನೇಮಿಸಿಕೊಳ್ಳಲಾಗುವುದು.

ಆಯ್ಕೆಯಾದ ಅರೆಕಾಲಿಕ ಕಾನೂನು ಸ್ವಯಂ ಸೇವಕರು ಜನರಿಗೆ ಕಾನೂನು ಅರಿವು ಮೂಡಿಸುವುದು, ಬಾಲ್ಯ ವಿವಾಹ ತಡೆ, ಮಾದಕ ವಸ್ತು ಕಳ್ಳ ಸಾಗಣೆ ತಡೆ, ಮಾಹಿತಿ ಸಂಗ್ರಹ ಲೋಕ ಅದಾಲತ್ ಮಧ್ಯಸ್ಥಿಕೆ ಮಾಹಿತಿ, ಜೀತಪದ್ಧತಿ ನಿವಾರಣೆ ಹೀಗೆ ತಮ್ಮನ್ನು ತೊಡಗಿಸಿಕೊಳ್ಳಬೇಕು. ಇವರನ್ನು ಜಿಲ್ಲೆ, ತಾಲ್ಲೂಕು, ಹಳ್ಳಿಗಳಲ್ಲಿ ನೇಮಕ ಮಾಡಿಕೊಳ್ಳುವುದರಿಂದ ಜನರ ಕಾನೂನು ಸಮಸ್ಯೆಗಳು ಅತಿ ಶೀಘ್ರವಾಗಿ ಬಗೆಹರಿಸಯುವುದು. ಆಯ್ಕೆಯಾದ ಇವರಿಗೆ ತರಬೇತಿ ನೀಡಲು ಔಟ್ ಲಾಡ್ ಇಂಡಿಯಾ ಹಾಗೂ ನ್ಯಾಯ ಸ್ವಯಂ ಸೇವಾ ಸಂಸ್ಥೆಗಳು ಮುಂದೆ ಬಂದಿವೆ ಎಂದರು.

ಅಲ್ಲದೆ ಕರ್ನಾಟಕ ಕಾನೂನು ಸೇವೆಗಳ ಪ್ರಧಿಕಾರ ಲೋಕ್ ಅದಾಲತ್ ಅನ್ನು 13-9-2025 ರಂದು ನಡೆಸಿ, 1 ಕೋಟಿ 11 ಲಕ್ಷ ಪ್ರಕರಣಗಳನ್ನು ಇತ್ಯರ್ಥಗೊಳಿಸಿದೆ. 53 ಲಕ್ಷ ಟ್ರಾಫಿಕ್ ಚಲನ್ ಪ್ರಕರಣ ಇತ್ಯರ್ಥಗೊಳಿಸಿ 144 ಕೋಟಿ ಹಣ ಸಂಗ್ರಹಿಸಿದೆ. ನಾಲ್ಕನೇ ರಾಷ್ಟ್ರೀಯ ಲೋಕ್ ಅದಾಲತ್ ನ್ನು 13-12-2025 ರಂದು ನಿಗದಿಪಡಿಸಲಾಗಿದೆ. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ 15100 ಸಹಾಯವಾಣಿ ತೆರೆದು ಜನರಿಗೆ ಮಾರ್ಗದರ್ಶನ ನೀಡುತ್ತಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರದ ಉಪಕಾರ್ಯದರ್ಶಿ ಎಂ.ಶ್ರೀಧರ, ಸಾರ್ವಜನಿಕ ಸಂಪರ್ಕಾಧಿಕಾರಿ ಬಾಲಸುಬ್ರಮಣಿ ಉಪಸ್ಥಿತರಿದ್ದರು.

# ಆಯುರ್ವೇದ ಪದ್ಧತಿಯನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.23-ಆಯುರ್ವೇದ ವಿಜ್ಞಾನವು ಜೀವನಕ್ಕೆ ಅತೀ ಅಮೂಲ್ಯವಾದುದ್ದು, ಆಯುರ್ವೇದ ಪದ್ಧತಿಯನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ. ಮಂಗಳವಾರ ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ಆಯುಷ್ ಇಲಾಖೆ ಕಲಬುರಗಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾದ ಧನ್ವಂತರಿ ಜಯಂತಿ ನಿಮಿತ್ಯ 10ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿ, ಕಲಬುರಗಿ ಜಿಲ್ಲೆಯ ಆಯುಷ್ ಇಲಾಖೆಯು ವಿನೂತನ ಕಾರ್ಯಕ್ರಮಗಳನ್ನು ಕೈಗೊಳ್ಳುವುದರ ಮೂಲಕ ಕರ್ನಾಟಕದ ಇತರೆ ಜಿಲ್ಲೆಗಳಿಗೆ ಮಾದರಿಯಾಗಬೇಕು ಎಂದರು.

ಪ್ರಸ್ತಾವಿಕವಾಗಿ ಮಾತನಾಡಿದ ವೈದ್ಯಾಧಿಕಾರಿಗಳು ಡಾ॥ ಶ್ರೀಶೈಲ್ ಪಾಟೀಲ್, "ಜನರಿಗಾಗಿ ಮತು ಜಗತ್ತಿಗಾಗಿ ಆಯುರ್ವೇದ" ಎನ್ನುವುದು ಈ ವರ್ಷದ ಘೋಷವಾಕ್ಯದೊಂದಿಗೆ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದರು.

ಹಿರಿಯ ವೈದ್ಯರಾದ ಡಾ॥ ಮಲ್ಲಾರಾವ್ ಮಲ್ಲೆ ಅವರು, ಆಯುರ್ವೇದ ವೈದ್ಯ ಪದ್ಧತಿಯು ಪುರಾತನವಾದುದ್ದು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕಲಬುರಗಿ ಶ್ರೀಹಿಂಗುಲಾಂಬಿಕಾ ಆಯುರ್ವೇದಿಕ್ ಮೇಡಿಕಲ್ ಕಾಲೇಜಿನ ಪ್ರಾಧ್ಯಾಪಕರಾದ ಡಾ॥ ನಿರ್ಮಲಾ ಕೆಳಮನಿ, ಜಿಲ್ಲಾ ಸರ್ಕಾರಿ ಹೋಮಿಯೋಪತಿ ಮತ್ತು ಆಯುರ್ವೇದ ಸಂಯುಕ್ತ ಆಸ್ಪತ್ರೆ ಆಯುಷ್ ತಜ್ಞವೈದ್ಯ ಡಾ॥ ಶಿಲ್ಪಾ ಬಿರಾದಾರ ಮಾತನಾಡಿದರು.

ಆಯುಷ್ ಇಲಾಖೆಯ ವೈದ್ಯಾಧಿಕಾರಿಗಳಿಂದ ಶಾಲಾ, ಕಾಲೇಜುಗಳಲ್ಲಿ ಹಾಗೂ ಸಾರ್ವಜನಿಕರಿಗೆ ಆಯುರ್ವೇದದ ಪ್ರತಿಜ್ಞೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು. ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಪಾರಂಪರಿಕ ವೈದ್ಯರು, ಆರ್.ಬಿ.ಎಸ್.ಕೆ ವೈದ್ಯರು, ಎನ್.ಎಚ್.ಎಂ ವೈದ್ಯರು ಮತ್ತು ಆಯುಷ್ ಇಲಾಖೆಯ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದು ಕಾರ್ಯಕ್ರಮ ಯಶಸ್ವಿಗೊಳಿಸಿದರು.

ಜಿಲ್ಲಾ ಆಯುಷ್ ಇಲಾಖೆಯಿಂದ ಜಿಲ್ಲಾ ಮಟ್ಟದಲ್ಲಿ ಆಯುರ್ವೇದ ಆರೋಗ್ಯ ಶಿಬಿರವನ್ನು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ಕಲಬುರಗಿ ವಿಭಾಗ-1ಗಳಲ್ಲಿ ಅಧಿಕಾರಿಗಳು, ಸಿಬ್ಬಂದಿಗಳಿಗೆ, ಕಾರ್ಮಿಕರಿಗೆ ಹಾಗೂ ಸಾರ್ವಜನಿಕರಿಗೆ ಆಯುರ್ವೇದ ಪದ್ಧತಿಯಲ್ಲಿ ಉಚಿತ ಚಿಕಿತ್ಸಾ ಶಿಬಿರವನ್ನು ಹಮ್ಮಿಕೊಳ್ಳಲಾಯಿತು. ಈ ಶಿಬಿರದಲ್ಲಿ 176 ಜನ ಚಿಕಿತ್ಸೆ ಪಡೆದರು. ಕಲಬುರಗಿ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ॥ ಗಿರಿಜಾ ಎಸ್.ಯು ಅವರು ಔಷಧಿ ಸಸ್ಯಗಳು ನೀಡುವ ಮೂಲಕ ಸ್ವಾಗತಿಸಿದರು. ಡಾ॥ಸುಧೀರ್ ಕುಳಗೇರಿ ಕಾರ್ಯಕ್ರಮ ನಿರೂಪಿಸಿದರು. ಅರುಂಧತಿ ಕುಲಕರ್ಣಿ ಪ್ರಾರ್ಥನಾ ಗೀತೆ ಹಾಡಿದರು. ಡಾ॥ ಚಿದಾನಂದಮೂರ್ತಿ ವಂದಿಸಿದರು.

# ಬಾಲ್ಯವಿವಾಹ ತಡೆಯುವಲ್ಲಿ ನಿರ್ಲಕ್ಷ್ಯ ವಹಿಸುವುದು ಕೂಡ ಅಪರಾಧ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಸೆ.23 : ಬಾಲ್ಯವಿವಾಹ ತಡೆಯುವಲ್ಲಿ ನಿರ್ಲಕ್ಷ್ಯ ವಹಿಸುವುದು ಕೂಡ ಒಂದು ಅಪರಾಧವಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೋಲಿಸ್ ಇಲಾಖೆ, ವಿವಿಧ ಸಹಭಾಗಿದಾರರ ಇಲಾಖೆ, ಸ್ವಯಂ ಸೇವಾ ಸಂಸ್ಥೆಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ, ತಾಲೂಕು, ಗ್ರಾಮ ಮಟ್ಟದ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಹಾಗೂ (ಕರ್ನಾಟಕ ತಿದ್ದುಪಡಿ) ಕಾಯ್ದೆ 2016 ಕುರಿತು ಜಿಲ್ಲಾ ಮಟ್ಟದ ಒಂದು ದಿನದ ಕಾರ್ಯಾಗಾರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಮಕ್ಕಳು ಪೋಷಕರ ಒತ್ತಡಕ್ಕೆ ಅಥವಾ ಆರ್ಥಿಕ ಸಮಸ್ಯೆಗಳಿಂದಾಗಿ ವಿವಾಹಕ್ಕೆ ಮುಂದಾಗಿರುತ್ತಾರೆ. ಇಂತಹ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳು, ಶಿಕ್ಷಕರು, ಗ್ರಾಮ ಪಂಚಾಯತ್ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು ಮತ್ತು ಅಂಗನವಾಡಿ ಕಾರ್ಯಕರ್ತೆಯರು ಒಂದು ವೇಳೆ ಬಾಲ್ಯವಿವಾಹ ತಡೆಯುವಲ್ಲಿ ನಿರ್ಲಕ್ಷ್ಯ ವಹಿಸಿದರೆ ಅದು ಕೂಡ ಒಂದು ಅಪರಾಧಕ್ಕೆ ಸಮ ಎಂದು ತಿಳಿಸಿದರು.

ಕೇವಲ ಅಧಿಕಾರಿಗಳು ಮಾತ್ರವಲ್ಲದೆ ಸಾರ್ವಜನಿಕರು ಕೂಡ ಬಾಲ್ಯವಿವಾಹ ಕಂಡುಬಂದಲ್ಲಿ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳಿಗೆ ಅಥವಾ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಗೆ ಕರೆ ಮಾಡಿ ತಿಳಿಸಬೇಕು. ಮಕ್ಕಳು ಶಾಲೆಯಿಂದ ದೂರ ಉಳಿದಲ್ಲಿ, ಶಿಕ್ಷಕರು ವಿದ್ಯಾರ್ಥಿಗಳ ಮನೆಗೆ ಭೇಟಿ ನೀಡಿ ಕಾರಣ ತಿಳಿದುಕೊಳ್ಳಬೇಕು. ಹೆಣ್ಣು ಮಕ್ಕಳಿಗೆ ಬಾಲ್ಯದಲ್ಲಿಯೇ ವಿವಾಹವಾದರೆ ಅವರು ಅನೇಕ ಸಮಸ್ಯೆಗಳಿಗೆ ಒಳಗಾಗುತ್ತಾರೆ, ಗರ್ಭಕೋಶದಲ್ಲಿ ಮಗುವಿನ ಬೆಳವಣಿಗೆ ಆಗುವುದಿಲ್ಲ, ಹೆರಿಗೆ ಸಮಯದಲ್ಲಿ ಸಮಸ್ಯೆಗಳು ಉಂಟಾಗುತ್ತವೆ. ಕಲ್ಯಾಣ ಮಂಟಪಗಳು, ಮದುವೆ ಪತ್ರಿಕೆ ಮುದ್ರಣ ಅಂಗಡಿಗಳು, ಪುರೋಹಿತರು ಕಡ್ಡಾಯವಾಗಿ ವಧು-ವರರ ವಯಸ್ಸು ಪರಿಶೀಲನೆ ಮಾಡಬೇಕು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಬಾಲ್ಯವಿವಾಹ ಒಂದು ಸಾಮಾಜಿಕ ಪಿಡುಗು, ಅದನ್ನು ತಡೆಯುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಬಾಲ್ಯವಿವಾಹದಿಂದಾಗಿ ಮಕ್ಕಳು ತಮ್ಮ ಬಾಲ್ಯ ಜೀವನವನ್ನು ಕಳೆದುಕೊಳ್ಳುತ್ತಾರೆ. ಅವರ ಹಕ್ಕುಗಳನ್ನು ಮತ್ತು ಬಾಲ್ಯವನ್ನು ಕಾಪಾಡುವುದು ಮತ್ತು ಬಾಲ್ಯವಿವಾಹ ನಿಷೇಧ ಕಾಯ್ದೆ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕು ಎಂದರು. ಜಿಲ್ಲೆಯಲ್ಲಿ ಈ ವರ್ಷ 50 ಗ್ರಾಮಗಳನ್ನು ಬಾಲ್ಯವಿವಾಹ ಮುಕ್ತ ಗ್ರಾಮಗಳನ್ನಾಗಿ ಮಾಡಿ, ಮುಂದಿನ ದಿನಗಳಲ್ಲಿ ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯಾಗಲು ಎಲ್ಲರು ಶ್ರಮಿಸೋಣ ಎಂದರು.

ಸಂಪನ್ಮೂಲ ವ್ಯಕ್ತಿಗಳಾದ ನ್ಯಾಯಾವಾದಿ ಬಸವರಾಜ ಬುಳ್ಳಾ ಅವರು ಬಾಲ್ಯವಿವಾಹ ನಿಷೇಧ ಕಾಯ್ದೆ ಬಗ್ಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಮಕ್ಕಳ ಸಹಾಯವಾಣಿ ಪೋಸ್ಟರ ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಪ್ರೊಬೇಷನರಿ ಐ.ಎ.ಎಸ್ ಅಧಿಕಾರಿ ರಮ್ಯಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಶ್ರೀಧರ್ ಎಮ್.ಎಸ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರೂಪಾ ಕೋಟೆಗೌಡರ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಸೀಮಪ್ಪಾ ಸೇರಿದಂತೆ ಬಾಲ್ಯವಿವಾಹ ನಿಷೇಧಾಧಿಕಾರಿಗಳು ಉಪಸ್ಥಿತರಿದ್ದರು. ಈ ಕಾರ್ಯಕ್ರಮವನ್ನು ಮಕ್ಕಳ ಸಂರಕ್ಷಣಾಧಿಕಾರಿ ಗೌರಿಶಂಕರ ಪ್ರತಾಪುರ ಅವರು ನಿರೂಪಿಸಿ ವಂದಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.